ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೬

## ಪಟ್ಟಿ – ೦೩

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ

ಗುರುವಾರ, ದಿನಾಂಕ : ೧೮ನೇ ಜುಲೈ, ೨೦೨೪

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ಬೆಂಗಳೂರು ನಗರದಲ್ಲಿರುವ ಪಬ್‌ಗಳ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೭ (೩೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಪಬ್‌ಗಳನ್ನು ತೆರೆಯಲು ಇರುವ ಮಾನದಂಡಗಳೇನು ; ಬೆಂಗಳೂರು ನಗರದಲ್ಲಿ ಪರವಾನಗಿ ಪಡೆದು ನಡೆಯುತ್ತಿರುವ ಪಬ್‌ಗಳ ಸಂಖ್ಯೆ ಎಷ್ಟು ; ಅನಧಿಕೃತವಾಗಿ ಪಬ್‌ಗಳನ್ನು ನಡೆಸುತ್ತಿರುವವರ ಮೇಲೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ; (ಪಬ್‌ಗಳ ಸಮೇತ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಅನಧಿಕೃತವಾಗಿ ಪಬ್‌ಗಳು ನಡೆಸುತ್ತಿದ್ದರೂ ಕೂಡ ಪೊಲೀಸ್ ಇಲಾಖೆಯಿಂದ ಹಾಗೂ ಬಿಬಿಎಂಪಿ ಯಿಂದ ಯಾವುದೇ ಕಠಿಣ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪಬ್‌ಗಳನ್ನು ತೆರೆಯಲು ಮತ್ತು ಮುಚ್ಚಲು ಸರ್ಕಾರದಿಂದ ಸಮಯ ನಿಗದಿಪಡಿಸಿದೆಯೇ ; ಇಲ್ಲದಿದ್ದಲ್ಲಿ, ಅವಧಿ ಮೀರಿ ನಡೆಸುತ್ತಿರವವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳತ್ತಿದೆ ;

(ಈ) ಅವಧಿ ಮೀರಿ ಪಬ್‌ಗಳನ್ನು ನಡೆಸುತ್ತಿರುವುದರಿಂದ ನಗರದಲ್ಲಿ ಕಾನೂನು ಸುವ್ಯವಸ್ಥೆ ಹದೆಗೆಡುತ್ತಿದ್ದು, ಗೃಹ ಇಲಾಖೆಗೆ ಈ ಹಿಂದೆಯೇ ಕೇಳಿದ್ದು, ಇಲಾಖೆಯು ಬಿಬಿಎಂಪಿ ವ್ಯಾಪ್ತಿಗೆ ಬರುವುದೆಂದು ಉತ್ತರ ನೀಡಿದ್ದು, ಈ ಎರಡು ಇಲಾಖೆಯ ಸೇರಿ ಅವಧಿ ಮೀರಿ ನಡೆಸುತ್ತಿರುವ ಪಬ್‌ಗಳ ಮೇಲೆ ಕಠಿಣ

ಕ್ರಮ ಕೈಗೊಳ್ಳಲು ಮುಂದಾಗುವುದೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ರಾಜ್ಯದ ಸಂಚಿತ ನಿಧಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೮ (೩೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೨-೨೩ನೇ ೩೧-೦೩-೨೦೨೩ರ ಅಂತ್ಯಕ್ಕೆ ಆರ್ಥಿಕ ಸಾಲಿನಲ್ಲಿ ಎಲ್ಲಾ ಲೆಕ್ಕ ಶೀರ್ಷಿಕೆಗಳಲ್ಲಿ ಬಳಕೆಯಾಗದ ಅನುದಾನವೆಷ್ಟು ;

(ಆ) ಬಳಕೆಯಾಗದ ಅನುದಾನದಲ್ಲಿ ಸಂಚಿತ ನಿಧಿಗೆ ಜಮೆಯಾದ ಮೊತ್ತವೆಷ್ಟು ; (ವಿವರ ಒದಗಿಸುವುದು)

(ಇ) ಇದರಲ್ಲಿ ರಾಜ್ಯದ ಸಂಚಿತ ನಿಧಿಗೆ ಜಮೆ ಮಾಡದೆ ಅಮಾನತ್ತು ಲೆಕ್ಕ ಶೀರ್ಷಿಕೆ/ ಬೇರೆ ಯಾವುದೇ ಮೂಲದಲ್ಲಿ ಸಂಗ್ರಹವಾದ ಮೊತ್ತವೆಷ್ಟು ;

(ಈ) ಇದರಲ್ಲಿ ವಿಧಾನಮಂಡಲದ ಅನುಮೋದನೆ ಪಡೆಯದೇ ಬಳಕೆ ಮಾಡಿದ ಮೊತ್ತವೆಷ್ಟು ?

## ೭ನೇ ವೇತನ ಆಯೋಗದ ಜಾರಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೯ (೩೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರಿ ನೌಕರರು ೭ನೇ ವೇತನ ಆಯೋಗದ ವರದಿ ಜಾರಿಗೆ ಕುರಿತು ಕಳೆದ ಒಂದು ವರ್ಷದಿಂದ ಸರ್ಕಾರವನ್ನು ಒತ್ತಾಯಿಸುತ್ತಿರುವುದು ನಿಜವೇ ;

(ಆ) ನಿಜವಾದಲ್ಲಿ ೭ನೇ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಲು ಸರ್ಕಾರದ ವಿಳಂಬಧೋರಣೆ ಸರಿಯೇ ;

(ಇ) ವೇತನ ಆಯೋಗದ ವರದಿಯನ್ನು ಜಾರಿಗೆ ಒತ್ತಾಯಿಸಿ ಮುಂಬರುವ ದಿನಗಳಲ್ಲಿ ರಾಜ್ಯ ಸರ್ಕಾರಿ ನೌಕರರು ಮುಷ್ಕರ ಹೂಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಕೂಡಲೇ ೭ನೇ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಲು ಸರ್ಕಾರ ಮುಂದಾಗುವುದೇ ?

**ಶಿವಮೊಗ್ಗ ಹಾಗೂ ದಾವಣಗೆರೆ ಸಣ್ಣ ನೀರಾವರಿ ಕೆರೆಗಳ ಕುರಿತು**

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೦ (೩೭೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿರುವ ಸಣ್ಣ ನೀರಾವರಿಯ ಕೆರೆಗಳ ಸಂಖ್ಯೆ ಎಷ್ಟು ;

(ಆ) ಅವುಗಳ ವ್ಯಾಪ್ತಿ, ವಿಸ್ತೀರ್ಣ ಮತ್ತು ಶೇಖರಣಾ ಸಾಮರ್ಥ್ಯ ಎಷ್ಟು ; (ವಿವರ ಒದಗಿಸುವುದು)

(ಇ) ಕಳೆದ ೫ ವರ್ಷಗಳಿಂದ ಈ ಕೆರೆಗಳ ಅಭಿವೃದ್ಧಿಗೆ ಮಂಜೂರಾದ ಅನುದಾನವೆಷ್ಟು ;

(ಈ) ಈ ಅನುದಾನ ಬಳಕೆಯಿಂದ ಕೆರೆಗಳು ಅಭಿವೃದ್ಧಿಯಾಗಿದೆಯೇ ; (ಕೆರೆವಾರು ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ಅಭಿವೃದ್ಧಿ ಶೇಕಡವಾರು ಪ್ರಮಾಣ ಎಷ್ಟು ;

(ಊ) ಈ ಕೆರೆಗಳ ಸಮಗ್ರ ಅಭಿವೃದ್ಧಿಗಾಗಿ ನಿರ್ವಹಣಾ ಪ್ರಾಧಿಕಾರ ರಚನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಪ್ರವಾಸೋದ್ಯಮ ಹಾಗೂ ಪುರಾತತ್ವ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ವಿವರ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧ (೩೭೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಆರ್ಥಿಕ ಸಾಲಿನ ಪ್ರವಾಸೋದ್ಯಮ ಹಾಗೂ ಪುರಾತತ್ವ ಇಲಾಖೆಯ ಸಹಯೋಗದಿಂದ ರಾಜ್ಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಕಾಮಗಾರಿಗಳ ವಿವರ ಹಾಗೂ ಅನುದಾನ ಮತ್ತು ವೆಚ್ಚದ ಮಾಹಿತಿ ಒದಗಿಸುವುದು)

(ಆ) ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಮೃಗನದೆ ಹಾಗೂ ದಾವಣಿ ಬೈಲು ಕಪಿಲೇಶ್ವರ ದೇವಾಲಯವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡಲು ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ; (ವಿವರ ಒದಗಿಸುವುದು)

(ಇ) ಪುರಾತತ್ವ ಇಲಾಖೆಯಲ್ಲಿ ವಸ್ತುಸಂಗ್ರಹಾಲಯದ ನಿರ್ದೇಶಕರಾಗಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹೊಂದಿರುವ

ವಿದ್ಯಾರ್ಹತೆ ಏನು ? (ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಸರ್ಕಾರ ನಿಗದಿಪಡಿಸಿದ ವಿದ್ಯಾರ್ಹತೆ ಹಾಗೂ ಅನುಭವದ ಮಾಹಿತಿ ಒದಗಿಸುವುದು)

## ಶಿವಮೊಗ್ಗ ಜಿಲ್ಲೆಯಲ್ಲಿನ ಕೊಲೆ ಪ್ರಕರಣಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೨ (೩೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ಶಿವಮೊಗ್ಗ ಜಿಲ್ಲೆಯಲ್ಲಿ ನಡೆದಿರುವ ಕೊಲೆಗಳ ಸಂಖ್ಯೆ ಎಷ್ಟು ; (ಘಟನೆವಾರು ವಿವರಗಳನ್ನು ಒದಗಿಸುವುದು)

(ಆ) ಈ ಕೊಲೆಗಳು ನಡೆದಿರುವುದಕ್ಕೆ ಕಾರಣಗಳೇನು ಹಾಗೂ ಇದುವರೆಗೂ ಈ ಪ್ರಕರಣಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಯುವಕರು ಗಾಂಜಾ ಸೇವನೆಯಿಂದ ಕೊಲೆ ಪ್ರಕರಣಗಳು ಹೆಚ್ಚುತ್ತಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಣಗೇರಿ ಕಟ್ಟೆ ಹಾಗೂ ಪೀರನಗುಡ್ಡೆ ಕ್ಷೇತ್ರಗಳನ್ನು ಪ್ರವಾಸಿ ಕ್ಷೇತ್ರಗಳೆಂದು ಘೋಷಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೩ (೩೮೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಹಣಗೇರಿ ಕಟ್ಟೆ ಹಾಗೂ ಪೀರನಗುಡ್ಡೆ ಕ್ಷೇತ್ರಗಳು ಹಿಂದು ಮತ್ತು ಮುಸಲ್ಮಾನರ ಭಾವೈಕ್ಯತ ಕ್ಷೇತ್ರಗಳಾಗಿದ್ದು, ಈ ಸ್ಥಳಗಳಿಗೆ ಪ್ರತಿದಿನ ಸಾವಿರಾರು ಭಕ್ತಾದಿಗಳು ಭೇಟಿ ನೀಡಲು ಬರುತ್ತಿರುವ ಹಿನ್ನೆಲೆಯಲ್ಲಿ ಸದರಿ ಕ್ಷೇತ್ರಗಳು ಅಘೋಷಿತ ಪ್ರವಾಸೋದ್ಯಮ ಕ್ಷೇತ್ರಗಳಾಗಿ ಮಾರ್ಪಟ್ಟಿದ್ದು, ಈ ಕ್ಷೇತ್ರಗಳಲ್ಲಿ ಮೂಲಸೌಲಭ್ಯಗಳ ಕೊರತೆಯಿಂದ ಬರುವ ಭಕ್ತಾದಿಗಳು ತೊಂದರೆಯನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕ್ಷೇತ್ರಗಳನ್ನು ಪ್ರವಾಸೋದ್ಯಮ ಕ್ಷೇತ್ರಗಳಾಗಿ ಘೋಷಿಸಿ ಅಲ್ಲಿ ಬರುವ ಜನರಿಗೆ ಮೂಲಸೌಲಭ್ಯ ಹಾಗೂ ಇತರ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಕೆರೆಗಳ ಒತ್ತುವರಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೪ (೩೮೮೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

(ಆ) ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಕೆರೆಗಳನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಒತ್ತುವರಿಯಾಗಿರುವ ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

(ಈ) ಸದರಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ನೋಟರಿಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೫ (೩೮೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ನೋಂದಾಯಿತ ನೋಟರಿಗಳ ಸಂಖ್ಯೆ ಎಷ್ಟು ; ಯಾವ ದಿನಾಂಕದಿಂದ ಸದರಿಯವರುಗಳು ನೋಟರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ; (ಪ್ರವರ್ಗವಾರು ಹಾಗೂ ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ನೋಟರಿಗಾಗಿ ನೋಂದಾಯಿಸಲು ಇರುವ ನಿಯಮಗಳೇನು ಹಾಗೂ ನೋಂದಾಯಿಸಿದ ನೋಟರಿ ಅವಧಿ ಎಷ್ಟು ;

(ಇ) ಹೊಸ ನೋಟರಿಗಳನ್ನು ಸರ್ಕಾರವು ಯಾವ ಕಾಲಾವಧಿಯಲ್ಲಿ ಆಯ್ಕೆ ಮಾಡಿಕೊಳ್ಳಲಾಗುವುದು ? (ವಿವರ ನೀಡುವುದು)

## ಯುವನಿಧಿ ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೬ (೩೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುವನಿಧಿ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಹಾಗೂ ಬಾಕಿ ಉಳಿದ ಹಣವೆಷ್ಟು ; (ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ನೋಂದಾಯಿಸಲ್ಪಟ್ಟ ಯುವಕ ಹಾಗೂ ಯುವತಿಯರ ಸಂಖ್ಯೆ ಎಷ್ಟು ; ಇವರುಗಳಲ್ಲಿ ಎಷ್ಟು ಜನರಿಗೆ ಯುವನಿಧಿ ಹಣವನ್ನು ಮಂಜೂರು ಮಾಡಲಾಗಿದೆ ? (ಪ್ರವರ್ಗವಾರು ಹಾಗೂ ಜಿಲ್ಲಾ/ ತಾಲ್ಲೂಕುವಾರು ಮಾಹಿತಿ ನೀಡುವುದು)

## ಪರಿಶಿಷ್ಟ ಪಂಗಡದವರ ಕಲ್ಯಾಣ ಯೋಜನೆಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೭ (೩೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ; (ಅವುಗಳ ವಿವರ ನೀಡುವುದು)

(ಆ) ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನ ಮೊತ್ತ ಹಾಗೂ ನೂತನ ಅಭಿವೃದ್ಧಿ ಪರ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ; ಆ ಕುರಿತಾದ ವಿವರಗಳೇನು ;

(ಇ) ಪರಿಶಿಷ್ಟ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಹಾಗೂ ಸ್ವಯಂ ಉದ್ಯೋಗವನ್ನು ಕೈಗೊಳ್ಳುವ ದಿಶೆಯಲ್ಲಿ ಕೌಶಲ್ಯ ಅಭಿವೃದ್ಧಿ

ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ; ಆ ಕುರಿತಾದ ವಿವರಗಳೇನು ;

(ಈ) ಶಿವಮೊಗ್ಗ ಜಿಲ್ಲೆಯಾದ್ಯಂತ ವಿವಿಧ ಯೋಜನಾನುಷ್ಠಾನದ ಮೂಲಕ ಎಷ್ಟು ಜನ ಫಲಾನುಭವಿಗಳಿಗೆ ಯೋಜನೆ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ ?

## ಕೆ.ಎ.ಎಸ್ – ೧೯೯೯ನೇ ಸಾಲಿನ ನೇಮಕಾತಿಯ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೪೮ (೪೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಪಿ.ಎಸ್.ಸಿ. ಯಿಂದ ಗೆಜೆಟೆಡ್ ಪ್ರೋಬೇಷನರ್ ಗ್ರೂಪ್ ಎ&ಬಿ ೧೯೯೯ನೇ ಸಾಲಿನ ಪರಿಷ್ಕೃತ ಅಂತಿಮ ಆಯ್ಕೆ ಪಟ್ಟಿಯನ್ನು ಯಾವಾಗ ಪ್ರಕಟಿಸಲಾಯಿತು ; (ಪ್ರತಿ ನೀಡುವುದು)

(ಆ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ಗ್ರಾಮೀಣಾ ಕೃಪಾಂಕ ನೀಡಲು ಅವಕಾಶವಿತ್ತೇ ; ಹಾಗಿದ್ದಲ್ಲಿ, ಶೇ. ಎಷ್ಟು ನೀಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ನೇಮಕಾತಿಯಲ್ಲಿ ಗ್ರಾಮೀಣ ಕೃಪಾಂಕದಡಿ ನೇಮಕಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ಹೆಸರು, ಹುದ್ದೆಯ ಪದನಾಮ ರಿಜಿಸ್ಟರ್ ನಂ. ಗಳನ್ನೊಳಗೊಂಡಂತೆ ವಿವರವಾದ ಮಾಹಿತಿಯೊಂದಿಗೆ ಪಟ್ಟಿ ನೀಡುವುದು)

(ಈ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವಾಗಲು ಕಾರಣಗಳೇನು ? (ವಿವರವಾದ ಮಾಹಿತಿ ಕೊಡುವುದು)

## ಏಳನೇ ವೇತನ ಅನುಷ್ಠಾನದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೪೯ (೪೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಸರ್ಕಾರವು ಏಳನೇ ವೇತನ ಆಯೋಗದ ವರದಿ ಸ್ವೀಕರಿಸಿದ ಬಳಿಕವೂ ಶೀಘ್ರದಲ್ಲಿ ಅನುಷ್ಠಾನಗೊಳಿಸದೆ ವಿಳಂಬ ಧೋರಣೆ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು ; ಆಯೋಗದ ವರದಿಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಏಳನೇ ವೇತನ ಜಾರಿಗೆ ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಎಷ್ಟು ?

## ಜ್ಞಾನಭಾರತಿ ಬಿ.ಡಿ.ಎ. ವಸತಿ ಸಂಕೀರ್ಣಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೦ (೩೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಜ್ಞಾನಭಾರತಿ ಬಿ.ಡಿ.ಎ ವಸತಿ ಸಂಕೀರ್ಣಗಳ (೧, ೨ ಮತ್ತು ೩ (ಬಿಹೆಚ್‌ಕೆ) ನಿರ್ಮಾಣ ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ಯಾವ ವರ್ಷದಲ್ಲಿ ಮುಕ್ತಾಯಗೊಂಡಿತ್ತು ; ಎಷ್ಟು ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ ; ಎಷ್ಟು ವಿಸ್ತೀರ್ಣದಲ್ಲಿ ವಸತಿ ಸಮುಚ್ಚಯಗಳನ್ನು ನಿರ್ಮಿಸಲಾಗಿದೆ ;

(ಆ) ಸರ್ಕಾರದಿಂದ ಪ್ರತಿ ಮನೆಗಳಿಗೆ ನಿಗದಿಪಡಿಸಿರುವ ದರವೆಷ್ಟು ಮೀಸಲಾತಿಗಳ ಅನ್ವಯ ದರಗಳನ್ನು ನಿಗದಿಪಡಿಸಲಾಗಿದೆಯೇ ಸದರಿ ವಸತಿ ಸಂಕೀರ್ಣಗಳಲ್ಲಿರುವ ಎಲ್ಲಾ ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ಹಸ್ತಾಂತರಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ವಸತಿ ಸಂಕೀರ್ಣಗಳಲ್ಲಿ ಖರೀದಿಯಾಗದೇ ಖಾಲಿ ಉಳಿದಿರುವ ಒಟ್ಟು ಮನೆಗಳೆಷ್ಟು ಖಾಲಿ ಮನೆಗಳ (೧, ೨ ಮತ್ತು ೩ ಬಿಹೆಚ್‌ಕೆ ಖರೀದಿಯಾಗದೇ ಖಾಲಿ ಉಳಿದಿದ್ದರೇ ಇದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುವುದಿಲ್ಲವೇ ಖಾಲಿ ಮನೆಗಳನ್ನು ಮಾರಾಟ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ವಸತಿ ಸಮುಚ್ಚಯಗಳಲ್ಲಿ ನೀರು, ವಿದ್ಯುತ್, ಬೀದಿದೀಪ, ಭದ್ರತೆ, ಒಳಚರಂಡಿ ವ್ಯವಸ್ಥೆ ಹಾಗೂ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ಸದರಿ ಮೂಲಭೂತ ಸೌಲಭ್ಯಗಳನ್ನು ನಿವಾಸಿಗಳಿಗೆ ಒದಗಿಸಲು ವಸತಿ ಸಂಕೀರ್ಣ ವಾಸಕ್ಕೆ ಯೋಗ್ಯವಿದೆಯೇ ಏನೇನು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಗುತ್ತಿಗೆ ಆಧಾರದ ನೇಮಕಾತಿಯಲ್ಲಿ ಮೀಸಲಾತಿಯ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧ (೩೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ಹಾಗೂ ಸರ್ಕಾರದ ಅಧೀನದಲ್ಲಿರುವ ನಿಗಮ ಮಂಡಳಿಗಳು ಹಾಗೂ ಸಹಕಾರಿ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಗುತ್ತಿಗೆ ಆಧಾರದ ನೇಮಕಾತಿಯಲ್ಲಿ ಮೀಸಲಾತಿಯನ್ನು ನೀಡಲಾಗುತ್ತಿದೆಯೇ ; ಯಾವ ಮೀಸಲಾತಿ ನಿಯಮಗಳಡಿ ಇದನ್ನು ನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಗುತ್ತಿಗೆ ಆಧಾರದ ನೇಮಕಾತಿಗೆ ಯಾವ ನಿಯಮಾವಳಿಗಳನ್ನು ಅನುಸರಿಸಲಾಗುತ್ತಿದೆ ; ಅರ್ಹ ಅಭ್ಯರ್ಥಿಗಳು ಹಾಗೂ ಕೆಳಸಮುದಾಯಗಳು ವಿಶೇಷವಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳು ಇತರೆ ಹಿಂದುಳಿದ ವರ್ಗಗಳ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶದಿಂದ ವಂಚನೆಯಾಗದಂತೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ;

(ಇ) ಸರ್ಕಾರದ ಇತ್ತೀಚಿನ ಸುತ್ತೋಲೆಯ ಪ್ರಕಾರ ಮೀಸಲಾತಿಯನ್ನು ಕಡೆಗಣಿಸಿ ಯಾರಿಗೆ ಬೇಕಾದರೂ ಹುದ್ದೆ ನೀಡಬಹುದಾದಂತಹ ಅವಕಾಶವಿದ್ದು ರೋಸ್ಟರ್ ಬಿಂದು ಗುರುತಿಸಲು ಪ್ರತಿಯೊಂದು ಹುದ್ದೆಗೂ ಸಾಧ್ಯವೇ ರೋಸ್ಟರ್ ಬಿಂದುಗಳು ಶತಾಂಶ ಬಿಂದುಗಳಾಗಿದ್ದು (೧೦೦) ಹೀಗೆ ೨೦ ಉದ್ಯೋಗಗಳು ಎಂದು ಕನಿಷ್ಠಗೊಳಿಸಿ ಹಾಗೂ ಆಯ್ಕೆ ಮಾಡುವ ಸಂದರ್ಭದಲ್ಲಿ ೨೦ಕ್ಕಿಂತ ಕಡಿಮೆ ಅಂದರೆ ೧೯–೧೮–೧೭ ಹೀಗೆ ನೇಮಕಾತಿ ಮಾಡುವಾಗ ರೋಸ್ಟರ್ ಬಿಂದುಗಳನ್ನು ಪಾಲಿಸಲು ಕಷ್ಟಸಾಧ್ಯವಾಗುವುದಿಲ್ಲವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ರೋಸ್ಟರ್ ಬಿಂದುಗಳನ್ನು ನಿಗದಿತ ಅನುಪಾತದಂತೆ ಅಳವಡಿಸದ ಪಕ್ಷದಲ್ಲಿ ಅರ್ಹರಿಗೆ ಅನ್ಯಾಯವಾಗುವುದಿಲ್ಲವೇ ; ಇದನ್ನು ತಡೆಯಲು ಸರ್ಕಾರದ ಸುತ್ತೋಲೆಯಲ್ಲಿ ಮಾರ್ಪಡಿಸಿ ಅರ್ಹರನ್ನು ಉದ್ಯೋಗಾವಕಾಶ ವಂಚಿತರಾಗದಂತೆ ಕ್ರಮವಹಿಸಲು ಸರ್ಕಾರ ಚಿಂತಿಸುವುದೇ ?

## ಪರಿಶಿಷ್ಟ ಜಾತಿ ಮತ್ತು ಪಂಗಡದವರ ಮೇಲೆ ಜಾತಿ ನಿಂದನೆ ಮತ್ತು ದೌರ್ಜನ್ಯಗಳ ಪ್ರಕರಣಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೨ (೩೫೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರ ಮೇಲೆ ಎಸಗಿದ ಜಾತಿ ನಿಂದನೆ ಮತ್ತು ದೌರ್ಜನ್ಯಗಳ ಪ್ರಕರಣವೆಷ್ಟು ; ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಸಮಯದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ಮತ್ತು ಪೊಲೀಸ್ ಠಾಣೆಗಳವಾರು ಪ್ರಕರಣಗಳ ದಿನಾಂಕದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಜನಾಂಗದವರ ಮೇಲಿನ ಜಾತಿ ನಿಂದನೆ/ದೌರ್ಜನ್ಯ ಪ್ರಕರಣಗಳಿಂದ ಸರ್ಕಾರವು ನೊಂದವರಿಗೆ ನೀಡಿದ ಪರಿಹಾರ ಮೊತ್ತವೆಷ್ಟು ; ಈ ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಪಡಿಸಿದ ಪ್ರಕರಣಗಳೆಷ್ಟು ; ಶಿಕ್ಷೆಗೆ ಗುರುಪಡಿಸುವಲ್ಲಿ ವಿಳಂಬ ದೋರಣೆಯನ್ನು ಅನುಸರಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಪ್ರಕರಣಗಳವಾರು, ಠಾಣಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರ ಮೇಲೆ ಜಾತಿ ನಿಂದನೆ ಮತ್ತು ದೌರ್ಜನ್ಯ ಎಸಗಿರುವ ಪ್ರಕರಣಗಳಲ್ಲಿದ್ದರೂ ಆರೋಪಿಗಳನ್ನು ಬಂಧನ ಮಾಡುವಲ್ಲಿ ವಿಳಂಬ ದೋರಣೆ ಅನುಸರಿಸುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ದೌರ್ಜನ್ಯ ಮತ್ತು ಜಾತಿ ನಿಂದನೆಯಡಿ ದಾಖಲಾದ ಪ್ರಕರಣಗಳ ಚಾರ್ಜ್‌ಶೀಟ್ ಅನ್ನು ಎಷ್ಟು ಅವಧಿಯೊಳಗೆ ಸಲ್ಲಿಸಬೇಕಾಗಿರುತ್ತದೆ ; ಚಾರ್ಜ್‌ಶೀಟ್ ಸಲ್ಲಿಸುವಲ್ಲಿ ವಿಳಂಬವಾಗಿರುವ ಪ್ರಕರಣಗಳೆಷ್ಟು ; ವಿಳಂಬಕ್ಕೆ ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬ್ಯಾಕ್–ಲಾಗ್ ಹುದ್ದೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೩೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರ ಸ್ವಾಯುತ್ತ ನಿಗಮ ಮಂಡಳಿಗಳು, ವಿಶ್ವವಿದ್ಯಾಲಯಗಳು, ಸಹಕಾರ ಬ್ಯಾಂಕ್ ಮತ್ತು ನಿಗಮುಗಳು ಮತ್ತು ಶಾಸನಬದ್ಧ ಸರ್ಕಾರಿ ಸಂಸ್ಥೆಗಳಲ್ಲಿ ಜೂನ್–೨೦೨೪ರ ಅಂತ್ಯದವರೆಗೆ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಪ್ರಸ್ತುತ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡುವುದರಲ್ಲಿ ಸರ್ಕಾರದ ಕ್ರಮಗಳೇನು ; ಎಷ್ಟು ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ ;

(ಇ) ಪ್ರಸ್ತುತ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಎಷ್ಟು ಕಾಲಮಿತಿಯಲ್ಲಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು ;

(ಈ) ಪ್ರಸ್ತುತ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳಲ್ಲಿ ಇಲ್ಲಿಯವರೆಗೂ ಪ್ರತಿ ವರ್ಷಕ್ಕನುಗುಣವಾಗಿ ಎಷ್ಟು ಖಾಲಿ ಹುದ್ದೆಗಳು ಸೃಷ್ಟಿಯಾಗುತ್ತಿವೆ ಮತ್ತು ಭರ್ತಿಯಾಗುತ್ತಿವೆ ? (ಸಂಪೂರ್ಣ ಮಾಹಿತಿ ನೀಡುವುದು)

## ಓಕಳಿಪುರಂನಲ್ಲಿ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೪ (೨೮೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಕಾಮಗಾರಿಯನ್ನು ಯಾವಾಗ ಪ್ರಾರಂಭವಾಯಿತು ಹಾಗೂ ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು ; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ

ಕಾಲಾವಧಿ ಎಷ್ಟು ; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ ;

(ಇ) ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದಲ್ಲಿ ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ;

(ಈ) ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಮೊತ್ತಕ್ಕೆ ಟೆಂಡರ್ ಅನುಮತಿ ನೀಡಲಾಗಿದೆ ; ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಉ) ಈ ಯೋಜನೆಯು ಅವೈಜ್ಞಾನಿಕವಾಗಿ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಒಂದು ಕಡೆಯಿಂದ ರಸ್ತೆ ದೊಡ್ಡದಾಗಿದ್ದು, ತದನಂತರ ರಸ್ತೆ ಕಿರಿದಾಗಿರುವುದರಿಂದ, ಟ್ರಾಫಿಕ್ ಸಮಸ್ಯೆ ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

## ನಿಗಮ, ಮಂಡಳಿ ಮತ್ತು ಪ್ರಾಧಿಕಾರದಲ್ಲಿ ಸಿ.ಎಸ್.ಆರ್ ಫಂಡ್ ಬಳಕೆ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೫ (೨೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ಕೈಗಾರಿಕೋದ್ಯಮ, ನಿಗಮ, ಮಂಡಳಿ ಮತ್ತು ಪ್ರಾಧಿಕಾರಗಳಿಗೆ ಯಾವ ಯಾವ ಸಂಸ್ಥೆಗಳಿಂದ ಸಾಮಾಜಿಕ ಹೊಣೆಗಾರಿಕೆ (ಸಿ.ಎಸ್.ಆರ್ ಫಂಡ್) ನಿಧಿ ನೀಡಲಾಗುತ್ತಿದೆ ;

(ಆ) ಕಳೆದ ೫ ವರ್ಷದಲ್ಲಿ ಎಷ್ಟು ಸಂಸ್ಥೆಗಳು ಸಿ.ಎಸ್.ಆರ್ ಫಂಡ್‌ಗಳನ್ನು ನೀಡಿವೆ/ ನೀಡಲಾಗಿರುವ ಫಂಡ್‌ಗಳಲ್ಲಿ ಎಷ್ಟು ಹಣವನ್ನು ಸರ್ಕಾರದ ಸಂಸ್ಥೆಗಳಿಗೆ ಹಾಗೂ ಎಷ್ಟು ಹಣವನ್ನು ಖಾಸಗಿ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಬಿಡುಗಡೆಯಾಗಿರುವ ಹಣವನ್ನು ಪೂರ್ಣ ಪ್ರಮಾಣದಲ್ಲಿ ಹಾಗೂ ಉಪಯುಕ್ತವಾಗಿ ಬಳಸಿಕೊಳ್ಳಲಾಗಿದೆ ಎಂಬುದರ ಬಗ್ಗೆ ಸರ್ಕಾರದ ವತಿಯಿಂದ ಲೆಕ್ಕ ಪತ್ರವನ್ನು ಪರಿಶೀಲಿಸಲಾಗುತ್ತಿದ್ದೆಯೇ ;

(ಈ) ಇದೇ ರೀತಿಯಾಗಿ ರಾಜ್ಯದಲ್ಲಿರುವ ಖಾಸಗಿ ಸಂಸ್ಥೆಗಳಿಂದ ಕಳೆದ ೫ ವರ್ಷದಿಂದ ಎಷ್ಟು ಸಿ.ಎಸ್.ಆರ್ ಫಂಡ್‌ನ್ನು ಸರ್ಕಾರದ ಕಾರ್ಯಕ್ರಮಗಳಿಗೆ ನೀಡಲಾಗಿದೆ ; (ಸಂಸ್ಥೆಯ ಹೆಸರು ಮತ್ತು ನೀಡಲಾಗಿರುವ ಹಣದ ಮೊತ್ತದ ವಿವರಗಳನ್ನು ಒದಗಿಸುವುದು)

(ಉ) ಖಾಸಗಿ ಸಂಸ್ಥೆಯವರು ನೀಡಿರುವ ಫಂಡ್‌ನ್ನು ಸರ್ಕಾರ ಯಾವ ಯಾವ ಕಾಮಗಾರಿಗಳಿಗೆ ಮತ್ತು ಇನ್ನಿತರ ಯಾವ ಕಾರ್ಯಚಟುವಟಿಕೆಗಳಿಗೆ ಬಳಸಿಕೊಂಡಿರುತ್ತದೆ ? (ಪೂರ್ಣ ವಿವರ ಒದಗಿಸುವುದು)

## ನಿಗಮ, ಮಂಡಳಿ ಹಾಗೂ ಸರ್ಕಾರಿ ಸ್ವಾಮ್ಯದ ಕಂಪನಿಗಳ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೬ (೨೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ನಿಗಮ, ಮಂಡಳಿ ಹಾಗೂ ಸರ್ಕಾರಿ ಸ್ವಾಮ್ಯದ ಕಂಪನಿಗಳ ಸಂಖ್ಯೆಯೆಷ್ಟು ; ಇದರಲ್ಲಿ ಸರ್ಕಾರ ಅನುದಾನ ಪಡೆಯುತ್ತಿರುವ ಹಾಗೂ ಅನುದಾನಕ್ಕೆ ಒಳಪಡದ ಸಂಸ್ಥೆಗಳೆಷ್ಟು ; (ವಿವರ ಒದಗಿಸುವುದು)

(ಆ) ಈ ಸಂಸ್ಥೆಗಳು ನಡೆಸುವ ಹಣದ ವ್ಯವಹಾರಗಳನ್ನು ರಾಜ್ಯದ ಖಾಸಗಿ ಬ್ಯಾಂಕ್‌ಗಳಲ್ಲಿ ಅಥವಾ ಸರ್ಕಾರಿ ಸ್ವಾಮ್ಯದ ಬ್ಯಾಂಕುಗಳಲ್ಲೇ ಹಣದ ವಹಿವಾಟು ನಡೆಸಬೇಕೆಂಬ ಸರ್ಕಾರದಲ್ಲಿ ನಿಯಮ ಇದೆಯೇ ;

(ಇ) ಹಾಗಿದ್ದಲ್ಲಿ ನಿಗಮ ಮಂಡಳಿಗಳು ತಮ್ಮ ತಮ್ಮ ಬ್ಯಾಂಕ್ ಖಾತೆಗಳನ್ನು ಯಾವ್ಯಾವ ಬ್ಯಾಂಕುಗಳಲ್ಲಿ ತೆರೆದಿದ್ದಾರೆ ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ಯಾವ್ಯಾವ ಬ್ಯಾಂಕ್‌ಗಳಲ್ಲಿ ಎಷ್ಟೆಷ್ಟು ಹಣವನ್ನು ಠೇವಣಿ ರೂಪದಲ್ಲಿ ಇಡಲಾಗಿದೆ ಹಾಗೂ ಠೇವಣಿ ಇಡುವ ಉದ್ದೇಶವಾದರೂ ಏನು ;

(ಉ) ಬ್ಯಾಂಕ್ ಖಾತೆಗಳನ್ನು ತೆರೆಯಲು ಯಾವ ಯಾವ ಅಧಿಕಾರಿಗಳ ಅನುಮತಿ ಬೇಕಾಗಿರುತ್ತದೆ ಹಾಗೂ ಸಂಬಂಧಪಟ್ಟ ಸಚಿವರ ಅನುಮತಿ ಅವಶ್ಯಕತೆ ಇದೆಯೇ ?

## ಸಿಎಲ್–೭ ಪರವಾನಗಿ ಪಡೆಯಲು ಇರುವ ನೀತಿ ನಿಯಮದ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭ (೨೮೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯ ವತಿಯಿಂದ ಸಿಎಲ್–೭ ಪರವಾನಗಿಯನ್ನು ಪಡೆಯಲು ಇರುವ ನೀತಿ ನಿಯಮಗಳೇನು ; ಕಳೆದ ೧೦ ವರ್ಷಗಳಲ್ಲಿ ಎಷ್ಟು ಬಾರಿ ನೀತಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆ ;

(ಆ) ರಾಜ್ಯಾದ್ಯಂತ ಪ್ರವಾಸೋದ್ಯಮದ ಹೆಸರಿನಲ್ಲಿ ನಿಯಮಗಳನ್ನು ಗಾಳಿಗೆ ತೂರಿ ಮದ್ಯ ಮಾರಾಟಕ್ಕೆ ಅನುಮತಿ ನೀಡಲಾಗುತ್ತಿದೆಯೇ ;

(ಇ) ಸಿಎಲ್–೭ ಪರವಾನಗಿಯನ್ನು ನೀಡುವ ಸಂದರ್ಭದಲ್ಲಿ ಕಟ್ಟಡವನ್ನು ವಾಣಿಜ್ಯ ಉದ್ದೇಶಕ್ಕಾಗಿ ಅನುಮತಿ ಪಡೆಯಬೇಕು, ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಸ್ವಚ್ಛತೆ ಹಾಗೂ ಕಟ್ಟಡದಲ್ಲಿ ಅಗ್ನಿಶಾಮಕ ಸೌಲಭ್ಯವನ್ನು ಹೊಂದಿರಬೇಕೆಂದು ಕಡ್ಡಾಯ ನಿಯಮ ವಿದೆಯೇ ;

(ಈ) ಹಾಗಿದ್ದಲ್ಲಿ, ನಿಯಮದಂತೆ ನಡೆಯುತ್ತಿರುವ ಹಾಗೂ ನಿಯಮ ಉಲ್ಲಂಘಿಸಿರುವ ಮತ್ತು ಪರವಾನಗಿಯನ್ನು ಪಡೆಯದೆ ಕಳ್ಳ ಮಾರ್ಗದಿಂದ ವ್ಯಾಪಾರ ನಡೆಸುತ್ತಿರುವವರ ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು ?

## ಅಮೃತ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೮ (೨೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎಷ್ಟು ಅನುದಾನವನ್ನು ನಿಗದಿಗೊಳಿಸಲಾಗಿದೆ ; ಇದರಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಸದರಿ ಯೋಜನೆಯಡಿಯಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಎಷ್ಟು ಕೆರೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; ಅಭಿವೃದ್ಧಿ ಪಡಿಸಿದ್ದಲ್ಲಿ ಅವುಗಳ ವಿವರ ಮತ್ತು ವೆಚ್ಚ ಮಾಡಲಾದ ಅನುದಾನದ ಮೊತ್ತವೆಷ್ಟು ; (ಕಾಮಗಾರಿಗಳ ವಿವರ ಒದಗಿಸುವುದು)

(ಈ) ಕೆರೆಗಳ ಅಭಿವೃದ್ಧಿ ಕಾರ್ಯಗಳನ್ನು ಬಿಡಿಎ ಮತ್ತು ಬಿಬಿಎಂಪಿಯವರು ಕೈಗೊಳ್ಳುವುದಾದಲ್ಲಿ, ಕೆರೆ ಸಂರಕ್ಷಣೆ ಹಾಗೂ ಅಭಿವೃದ್ಧಿ ಪ್ರಾಧಿಕಾರ ಕಾರ್ಯಚಟುವಟಿಕೆಗಳಾವುವು ;

(ಉ) ಬೆಂಗಳೂರು ನಗರದಲ್ಲಿ ಇದ್ದ ಕೆರೆಗಳ ಅಂಗಳಗಳನ್ನು ಬಿಡಿಎ ಒಳಗೊಂಡಂತೆ ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದುವರೆಗೂ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಬೆಂಗಳೂರು ನಗರದಲ್ಲಿ ಕಸ ವಿಲೇವಾರಿಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೯ (೩೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಉತ್ಪತ್ತಿಯಾಗುವ ಕಸವನ್ನು ಯಾವ ಯಾವ ಸ್ಥಳಗಳಲ್ಲಿ ಶೇಖರಣೆ/ಸಂಸ್ಕರಣೆ ಮಾಡಲಾಗುತ್ತಿದೆ ;

ಪ್ರತಿ ದಿನ ಎಷ್ಟು ಸಾಮಾರ್ಥ್ಯದ ಕಸ ವಿಲೇವಾರಿ ಹಾಗೂ ಶೇಖರಣೆ/ಸಂಸ್ಕರಣೆಯಾಗುತ್ತಿದೆ ; (ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ತ್ಯಾಜ್ಯ ಶೇಖರಣೆಯಗುತ್ತಿರುವ ಸ್ಥಳಗಳಲ್ಲಿ ಸುತ್ತಮುತ್ತಲಿನ ಪರಿಸರ ಮಾಲಿನ್ಯವಾಗುತ್ತಿರುವ ಬಗ್ಗೆ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಬೆಂಗಳೂರು ನಗರದಲ್ಲಿ ಕಸ ವಿಲೇವಾರಿ ಮಾಡಲು ಟೆಂಡರ್‌ನ್ನು ಯಾವ ಕಂಪನಿ/ವ್ಯಕ್ತಿಗೆ ನೀಡಲಾಗಿದೆ ; ನೀಡಿದ್ದಲ್ಲಿ, ಟೆಂಡರ್ ಪ್ರಕ್ರಿಯೆಯಲ್ಲಿ ವಿಧಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಪ್ರತಿದಿನದ ಕಸ ವಿಲೇವಾರಿ/ಸಂಸ್ಕರಣೆ ವೆಚ್ಚವಾಗುತ್ತಿರುವ ಹಣ ಎಷ್ಟು ? (ಕಳೆದ ೩ ವರ್ಷಗಳಿಂದ ಕಸ ಶೇಖರಣೆ/ಸಂಸ್ಕರಣೆಗೆ ವೆಚ್ಚವಾಗಿರುವ ಮೊತ್ತದ ಮಾಹಿತಿ ನೀಡುವುದು)

## ಬೆಂಗಳೂರು ನಗರದಲ್ಲಿ ಅನಧಿಕೃತ ಫ್ಲೆಕ್ಸ್‌ಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೦ (೩೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ ತಡೆಯುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ ;

(ಆ) ಅನಧಿಕೃತ ಪ್ರಚಾರಗಳಿಂದ ಸಾರ್ವಜನಿಕರಿಗೆ ಹಾಗೂ ವ್ಯಾಪಾರಸ್ಥರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನಧಿಕೃತ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕುತ್ತಿರುವುದರ ಬಗ್ಗೆ ನಿರ್ಬಂಧಿಸಲು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ;

(ಈ) ನಿಯಮಬಾಹಿರವಾಗಿ ಬ್ಯಾನರ್, ಬಂಟಿಂಗ್ ಮತ್ತು ಫ್ಲೆಕ್ಸ್ ಅಳವಡಿಸಿದ್ದರೂ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ದಂಡದ ರೂಪದಲ್ಲಿ ಇದುವರೆಗೂ ಸರ್ಕಾರಕ್ಕೆ ಎಷ್ಟು ಹಣ ವಸೂಲಿ ಮಾಡಲಾಗಿದೆ ? (ವಿವರ ನೀಡುವುದು)

## ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನ ಏತ ನೀರಾವರಿ ಯೋಜನೆ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧ (೩೮೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆ ಮತ್ತು ಆನೇಕಲ್ ತಾಲ್ಲೂಕಿನಲ್ಲಿ ಕೆಸಿ ವ್ಯಾಲಿ ಯೋಜನೆಯ ಏತ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಏತ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಿಸಿದ್ದೀರಿ ಮತ್ತು ಬಾಕಿ ಉಳಿದ ಕೆರೆಗಳ ಸಂಖ್ಯೆ ಎಷ್ಟು ಮತ್ತು ಯಾವ ಕಾರಣಕ್ಕಾಗಿ ನೀರು ತುಂಬಲು ಸಾಧ್ಯವಾಗಿಲ್ಲ ; (ಇದರ ವಿವರ ನೀಡುವುದು)

(ಇ) ಏತ ನೀರಾವರಿ ಯೋಜನೆಯ ಮುಖಾಂತರ ಸರ್ಕಾರವು ಎಷ್ಟು (ಎಂ.ಎಲ್.ಡಿ) ನೀರನ್ನು ಕೆರೆಗಳಿಗೆ ಬಿಡಲಾಗುತ್ತಿದೆ ; ಗರಿಷ್ಠ ನೀರಿನ ಮೊತ್ತವೆಷ್ಟು ಮತ್ತು ಕೆರೆಗಳಿಗೆ ಕನಿಷ್ಠ ಎಷ್ಟು ನೀರನ್ನು ಬಿಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಮನೆಗಳಿಗೆ ನೀರಿನ ಸಂಪರ್ಕವನ್ನು ಕಲ್ಪಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೨ (೩೮೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಎಷ್ಟು ಮನೆಗಳಿಗೆ ನೀರಿನ ಸಂಪರ್ಕವನ್ನು ಕಲ್ಪಿಸಲಾಗಿದೆ ;

(ಆ) ಗ್ರಾಹಕರು ಹೊಸದಾಗಿ ನೀರಿನ ಸಂಪರ್ಕ (Connection) ವನ್ನು ಪಡೆಯಲು ಗ್ರಾಹಕರಿಂದ ಎಷ್ಟು ಹಣವನ್ನು ಪಡೆಯಲಾಗುತ್ತದೆ ; ಇದಕ್ಕೆ ಇರುವ ಮಾನದಂಡವೇನು ;

(ಇ) ಕಳೆದ ೩ ವರ್ಷಗಳಿಂದ ಇದುವರೆಗೂ ಎಷ್ಟು ಹಣ ಸಂಗ್ರಹವಾಗಿದೆ ; ಸಂಗ್ರಹವಾಗಿರುವ ಹಣವನ್ನು ಯಾವ ಯಾವ ಕೆಲಸ ಕಾರ್ಯಗಳಿಗೆ ಬಳಸಲಾಗಿದೆ ; ಒಂದು ವೇಳೆ ಠೇವಣಿ ಇಟ್ಟಿದಲ್ಲಿ, ಅದು ಯಾವ ಯಾವ ಬ್ಯಾಂಕಿನಲ್ಲಿ ಇಡಲಾಗಿದೆ ; ಅದರಿಂದ ಇದುವರೆಗೂ ಎಷ್ಟು ಬಡ್ಡಿ ಬಂದಿದೆ ;

(ಈ) ಹೊಸ ಬಡಾವಣೆಯಲ್ಲಿ ನಿರ್ಮಾಣ ಮಾಡಲಾಗಿರುವ ನಿವಾಸಿಗಳು ಕಡ್ಡಾಯವಾಗಿ ಕಾವೇರಿ ನೀರಿನ ಸಂಪರ್ಕವನ್ನು ಪಡೆದು ಕೊಳ್ಳಬೇಕೆಂಬ ನಿಯಮ ಇದೆಯೇ ; ಹಾಗಿದ್ದಲ್ಲಿ, ಇದುವರೆಗೂ

ಹಲವಾರು ಬಡಾವಣೆಗಳಿಗೆ ನೀರಿನ ಸಂಪರ್ಕವನ್ನು ಅಳವಡಿಸದಿರುವುದಕ್ಕೆ ಕಾರಣವೇನು ?

## NPS ರದ್ದುಪಡಿಸಿ OPS ಜಾರಿ ಮಾಡುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೬೩ (೨೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎನ್.ಪಿ.ಎಸ್ ರದ್ದುಪಡಿಸಿ ಓ.ಪಿ.ಎಸ್ ಜಾರಿಗೆ ತರುವುದಾಗಿ ಸರ್ಕಾರವು ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿರುವುದು ನಿಜವೇ ; ನಿಜವಿದ್ದಲ್ಲಿ, ಪ್ರಣಾಳಿಕೆಯನ್ವಯ ಯಾವಾಗ ಜಾರಿಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಓ.ಪಿ.ಎಸ್. ತಕ್ಷಣದಿಂದ ಜಾರಿಗೆ ತರಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ; ಇಲ್ಲಿಯವರೆಗೆ ಜಾರಿಗೊಳಿಸದಿರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಓ.ಪಿ.ಎಸ್ ಜಾರಿಗೊಳಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಎನ್.ಪಿ.ಎಸ್ ನಿಂದ ಓ.ಪಿ.ಎಸ್ ಜಾರಿಗೊಳಿಸುವ ನಿಟ್ಟಿನಲ್ಲಿ ಸಮಿತಿ ರಚನೆ ಮಾಡದಿರುವುದು ನಿಜವೇ ; ಸಮಿತಿ ರಚನೆ ಮಾಡಿದ್ದಲ್ಲಿ, ಯಾವ ದಿನಾಂಕದಿಂದ ಮತ್ತು ಯಾವ ಯಾವ ಸದಸ್ಯರನ್ನೂ ಈ ಸಮಿತಿಗೆ ನೇಮಕ ಮಾಡಲಾಗಿದೆ ; (ಮಾಹಿತಿ ಮತ್ತು ಆದೇಶ ಪ್ರತಿ ನೀಡುವುದು)

(ಉ) ಸದರಿ ಸಮಿತಿಯು ತನ್ನ ಕಾರ್ಯವನ್ನು ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ ಪ್ರಸ್ತುತ ಸಮಿತಿಯ ಕೈಗೊಂಡ ಕ್ರಮಗಳೇನು ; ಸದರಿ ಸಮಿತಿಗೆ ವರದಿಯನ್ನು ನೀಡುವಂತರ ಕಾಲಮಿತಿ ನೀಡಲಾಗಿದೆಯೇ ?

## ಕೃಷ್ಣಾ ಮೇಲ್ದಂಡೆ ಪುನರ್ನಿರ್ಮಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೬೪ (೩೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯು ಬಾಗಲಕೋಟೆ, ವಿಜಯಪುರ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಇದರ ಕಾರ್ಯ ವಿಸ್ತರಣೆಯಿದ್ದು, ಇಂತಹ ಬಹೃತ್ ಯೋಜನೆ ಇಲಾಖೆಯ ಕಛೇರಿಗೆ ಅಧಿಕಾರಿ ವರ್ಗ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಧಿಕಾರಿ ವರ್ಗ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಈ ಯೋಜನೆಯು ಪೂರ್ಣಗೊಳ್ಳಲು ವಿಳಂಬವಾಗುವುದಿಲ್ಲವೇ ;

(ಇ) ಕೃಷ್ಣಾ ಮೇಲ್ದಂಡೆ ಪುನರ್ನಿರ್ಮಾಣ ಮತ್ತು ಪುನರ್ವಸತಿ ಇಲಾಖೆಗೆ ಸರ್ಕಾರದಿಂದ ಮಂಜೂರಾದ ಭರ್ತಿಮಾಡಿಕೊಳ್ಳಲಾದ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಯಾವ ಕಾಲಮಿತಿಯಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ? (ವಿವರ ನೀಡುವುದು)

## ವಿವಿಧ ಇಲಾಖೆಗಳಿಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೬೫ (೩೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಇಲಖೆಗಳಿಗೆ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ ಹಾಲಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಕಳೆದ ೨ ವರ್ಷಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆಯನ್ನು ಹೊರಡಿಸಿದೆ ; ಹೊರಡಿಸಿದ ಅಧಿಸೂಚನೆಯನ್ವಯ ಎಷ್ಟು ಇಲಾಖೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆ ಹಾಗೂ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವಿಳಂಬ ಧೋರಣೆಯಿಂದ ಉದ್ಯೋಗಾಕಾಂಕ್ಷಿಗಳಿಗೆ ತೊಂದರೆಯಾಗುತ್ತಿರುವುದು ಮತ್ತು ಸಾರ್ವಜನಿಕರ ಅಪನಂಬಿಕೆಗೆ ಒಳಾಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬ ನೀತಿ ಅನುಸರಿಸಲಾಗುತ್ತಿದ್ದು ಇದರಿಂದ ಹಲವಾರು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳ ವಯೋಮಿತಿ ಮೀರಿ ಮುಂಬರುವ ನೇಮಕಾತಿ ಪ್ರಕ್ರಿಯೆಯಿಂದ ವಂಚಿತರಾಗಿ ನಿರುದ್ಯೋಗಿಗಳಾಗಿ ಇದು ಅರ್ಹ ಅಭ್ಯರ್ಥಿಗಳಿಗೆ ಮಾರಕವಾಗುವುದಿಲ್ಲವೇ ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ಇಂತಹ ವಿಳಂಬ ನೇಮಕಾತಿ ಪ್ರಕ್ರಿಯೆಯ ಸಂದರ್ಭದಲ್ಲಿ ಸರ್ಕಾರವು ವಯೋಮಿತಿ ಸಡಿಲಿಕೆ ಮಾಡಿ ಅಭ್ಯರ್ಥಿಗಳಿಗೆ ಸೂಕ್ತ ನ್ಯಾಯ ಒದಗಿಸಿ ಕೊಡಲಾಗುವುದೇ ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರ ಇತ್ತೀಚೆಗೆ ನಿವೃತ್ತಿ ಹೊಂದಿದ ನೌಕರರನ್ನು ನೇಮಕಾತಿ ಮಾಡುತ್ತಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೬ (೩೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರ ಇತ್ತೀಚೆಗೆ ನಿವೃತ್ತಿ ಹೊಂದಿದ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುವುದನ್ನು ರದ್ದು ಪಡಿಸಿದ್ದರೂ, ಕೆಲವು ಇಲಾಖೆಗಳು ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಂತಹ ಇಲಾಖೆ ಮುಖ್ಯಸ್ಥರ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ೩೧ ಜಿಲ್ಲೆಗಳಲ್ಲಿಯೂ ನಿವೃತ್ತ ನೌಕರರನ್ನು ವಿವಿಧ ಹುದ್ದೆಗಳಿಗೆ ನೇಮಕ ಮಾಡಿಕೊಂಡಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಇಲಾಖೆಗಳಲ್ಲಿ ಯಾವ ಹುದ್ದೆಗಳಿಗೆ ನಿವೃತ್ತ ನೌಕರರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನೌಕರರನ್ನು ಸೇವೆಯಿಂದ ಬಿಡುಗಡೆಗೊಳಿಸಲು ವಿಳಂಬವಾಗುತ್ತಿದ್ದು, ಸರ್ಕಾರದ ನಿರ್ದೇಶನ ಉಲ್ಲಂಘಿಸಿ ನಿವೃತ್ತ ನೌಕರರನ್ನು ಮುಂದುವರೆಸಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಜರುಗಿಸಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೭ (೩೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಸದರಿ ಹಾಸ್ಟೆಲ್‌ಗಳಿಗೆ ಮಂಜೂರು ಆಗಿರುವ ಹುದ್ದೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳಲ್ಲಿ ಸ್ವಂತ ಕಟ್ಟಡವಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಯಾವ ರೀತಿಯ ಆಹಾರ ವ್ಯವಸ್ಥೆಯನ್ನು ಮಾಡಲಾಗಿದೆ ; ಊಟ ಮತ್ತು

ತಿಂಡಿಗಳನ್ನು ತಯಾರಿಸಲು ಯಾವ ಯಾವ ವಸ್ತುಗಳನ್ನು ಹಾಸ್ಟೆಲ್‌ಗಳಿಗೆ ಸರಬರಾಜು ಮಾಡಲಾಗುತ್ತಿದೆ ; (ವಸ್ತುವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸಲು ಎಷ್ಟು ಪ್ರಮಾಣದಲ್ಲಿ ಯಾವ ಯಾವ ವಸ್ತುಗಳನ್ನು ಖರೀದಿಸಲಾಗುತ್ತದೆ ; (ವಸ್ತುವಾರು ವಿವರ ನೀಡುವುದು)

(ಉ) ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸುವ ಆಹಾರ ಮತ್ತು ಇತರ ವಸ್ತುಗಳನ್ನು ಖರೀದಿಸುವಾಗ ಪ್ರತಿ ಕೆ.ಜಿ ಅಥವಾ ಪ್ರತಿ ವಸ್ತುವಿಗೆ ನಿಗದಿಪಡಿಸಲಾದ ದರವೆಷ್ಟು ? (ಸರಬರಾಜುದಾರರು ಮತ್ತು ಸಾಗಾಣಿಕೆದಾರರ ಹೆಸರು ಮತ್ತು ಸಂಪೂರ್ಣ ವಿವರದೊಂದಿಗೆ ವಸ್ತುವಾರು ವಿವರ ನೀಡುವುದು)

## ತುಂಗಭದ್ರ ಎಡದಂಡೆ ನಾಲೆಯ ನೀರು ಕೊನೆಯ ಭಾಗದ ರೈತರಿಗೆ ತಲುಪದೆ ಇರುವುದರ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೮ (೩೯೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರ ಎಡದಂಡೆ ನಾಲೆಯ ನೀರು ಕೊನೆಯ ಭಾಗದ ರೈತರಿಗೆ ತಲುಪದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಾಲೆಯ ನೀರನ್ನು ಕೊನೆಯ ಭಾಗದ ರೈತರಿಗೆ ತಲುಪಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ತುಂಗಭದ್ರ ಎಡದಂಡೆ ನಾಲೆಯ ಅಚ್ಚುಕಟ್ಟು ಪ್ರದೇಶದಲ್ಲಿ ಅಕ್ರಮ ನೀರಾವರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಕ್ರಮ ನೀರಾವರಿ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಅಕ್ರಮ ನೀರಾವರಿಗೆ ಸ್ಥಳೀಯ ನೀರಾವರಿ ಇಲಾಖೆ ಅಧಿಕಾರಿಗಳು ಬೆಂಬಲ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮವೇನು ;

(ಈ) ತುಂಗಭದ್ರ ಎಡದಂಡೆ ನಾಲೆಯ ಕೊನೆ ಭಾಗದ ರೈತರಿಗೆ ನೀರು ಒದಗಿಸಲು ಶಾಶ್ವತ ಕ್ರಮವೇನು ; ನಾರಾಯಣಪುರ ಎಡದಂಡೆ ನಾಲೆಗೆ SCADA Gate ಅಳವಡಿಸಿದಂತೆ ತುಂಗಭದ್ರ ಎಡದಂಡೆ ನಾಲೆಗೂ SCADA Gate ಅಳವಡಿಸಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅಳವಡಿಸಲಾಗುವುದು ?

## ಕೊಪ್ಪಳ ಜಿಲ್ಲೆಯಲ್ಲಿ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೯ (೩೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಲ್ಲಿ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಮೊತ್ತ ಎಷ್ಟು ? (ಕಾಮಗಾರಿವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅಂತರ್ಜಲ ಮಟ್ಟ ಅತ್ಯಂತ ಅಪಾಯದ ಮಟ್ಟಕ್ಕೆ ಕುಸಿದಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೦ (೩೯೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಂತರ್ಜಲ ಮಟ್ಟ ಅತ್ಯಂತ ಅಪಾಯದ ಮಟ್ಟಕ್ಕೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ತೀರಾ ಕುಸಿದಿದೆ ;

(ಇ) ಅಂತರ್ಜಲ ಮಟ್ಟ ಕುಸಿದ ತಾಲ್ಲೂಕುಗಳಲ್ಲಿ ಹೊಸದಾಗಿ ಕೊಳವೆ ಬಾವಿಗಳನ್ನು ಕೊರೆಯಲು ನಿರ್ಬಂಧ ವಿಧಿಸಲಾಗಿದೆಯೇ ;

(ಈ) ರಾಜ್ಯದಲ್ಲಿ ಕುಸಿಯುತ್ತಿರುವ ಅಂತರ್ಜಲ ಮಟ್ಟವನ್ನು ಕಾಪಾಡಿಕೊಳ್ಳಲು ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಯಾವುವು ?

## ರಾಜ್ಯದಲ್ಲಿ ಡ್ರಗ್ಸ್ ಹಾವಳಿ ಜಾಸ್ತಿಯಾಗುತ್ತಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೧ (೩೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡ್ರಗ್ಸ್ ಹಾವಳಿ ಜಾಸ್ತಿಯಾಗುತ್ತಿದೆ ಎಂಬ ದೂರುಗಳಿದ್ದು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎಷ್ಟು ಪ್ರಕರಣಗಳು ಪತ್ತೆ ಹಚ್ಚಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪೊಲೀಸ್ ಇಲಾಖೆಯಲ್ಲಿ ಈ ಬಗ್ಗೆ ರಚಿಸಲಾದ ಪ್ರತ್ಯೇಕ ವಿಭಾಗಕ್ಕೆ ಒದಗಿಸಲಾದ ಮೂಲಭೂತ ಸೌಕರ್ಯಗಳು ಯಾವುವು ; (ವಿವರ ನೀಡುವುದು)

(ಇ) ಅನೇಕ ಪೊಲೀಸ್ ಠಾಣೆಗಳಲ್ಲಿ ಮಾದಕ ದ್ರವ್ಯ ಸೇವನೆ ಪ್ರಕರಣಗಳಲ್ಲಿ ಪೊಲೀಸರು ಹಣದ ರಾಜಿ ವ್ಯವಹಾರವನ್ನು ಮಾಡಿಕೊಂಡು ಪ್ರಕರಣಗಳನ್ನು ಮುಚ್ಚಿ ಹಾಕಲಾಗುತ್ತಿದೆ ಎಂಬ ದೂರುಗಳು ಇದ್ದು ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಡ್ರಗ್ಸ್‌ನಲ್ಲಿ ಭಾಗಿಯಾದ ಆರೋಪಿಗಳಿಗೆ ಶಿಕ್ಷೆ ವಿಧಿಸಲು ವಿಶೇಷ ನ್ಯಾಯಾಲಯ ಸ್ಥಾಪನೆಗೆ ಕ್ರಮಕೈಗೊಳ್ಳಲಾಗುವುದೇ ; ಮಾದಕ ದ್ರವ್ಯ ಸೇವನೆಯ ಬಗ್ಗೆ ಶಾಲಾ ಕಾಲೇಜುಗಳಲ್ಲಿ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಮಾದಕ ದ್ರವ್ಯ ಸಾಗಾಣಿಕೆ ಮತ್ತು ಉತ್ಪಾದನೆಯ ಬಗ್ಗೆಯ ಮೂಲವನ್ನು ಕಂಡುಹಿಡಿಯಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಪಶ್ಚಿಮ ವಾಹಿನಿ ಯೋಜನೆಯಲ್ಲಿ ೨೦೨೧-೨೨ರಿಂದ ಇಲ್ಲಿಯವರೆಗೆ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೨ (೩೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶ್ಚಿಮ ವಾಹಿನಿ ಯೋಜನೆಯಲ್ಲಿ ೨೦೨೧-೨೨ ರಿಂದ ಈವರೆಗೆ ಕೈಗೊಂಡ ಯೋಜನೆಗಳಾವುವು ; ಬಿಡುಗಡೆ ಮಾಡಿದ ಅನುದಾನ ಎಷ್ಟು ; ವಿಧಾನಸಭಾ ಕ್ಷೇತ್ರವಾರ ವಿವರ ನೀಡುವುದು ;

(ಆ) ಪಶ್ಚಿಮ ವಾಹಿನಿ ಯೋಜನೆ ಅನ್ವಯ ಕೈಗೊಂಡಿರುವ ಕಾಮಗಾರಿಗಳು ಯಾವ ಹಂತದಲ್ಲಿ ಇವೆ ; ಈ ಬಗ್ಗೆ ಸರ್ಕಾರ ಪರಿಶೀಲಿಸಿದೆಯೇ ; ಈ ಯೋಜನೆಗಳು ಪೂರ್ತಿಗೊಳ್ಳದೆ ಸರ್ಕಾರದ ಹಣ ಪೋಲು ಮಾಡಲಾಗುತ್ತಿದೆ ಎಂಬ ದೂರುಗಳಿದ್ದು, ಈ ಬಗ್ಗೆ ತನಿಖೆ ನಡೆಸಲಾಗುವುದೇ ;

(ಇ) ಸರ್ಕಾರದಿಂದ ಸ್ಥಾಪಿಸಲಾದ ಕಿಂಡಿ ಅಣೆಕಟ್ಟುಗಳಿಗೆ ಹಲಗೆ ಹಾಕಲು ಹಣದ ಕೊರತೆ ಇದ್ದು, ನೀರು ಸಂಗ್ರಹಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕರಾವಳಿ ಜಿಲ್ಲೆಯಲ್ಲಿ ಎಷ್ಟು ಕಿಂಡಿ ಅಣೆಕಟ್ಟುಗಳಿವೆ, ಅವುಗಳಲ್ಲಿ ಹಲಗೆ ಹಾಕಲು ಬಾಕಿ ಇರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು ;

೨೦೨೩-೨೪ನೇ ಸಾಲಿನಲ್ಲಿ ಈ ಯೋಜನೆಗೆ ಖರ್ಚು ಮಾಡಿದ ಹಾಗೂ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಹೊಸದಾಗಿ ಕ್ರೀಡಾ ಹಾಸ್ಟೆಲ್ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೩ (೩೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ನೂತನವಾಗಿ ಪ್ರಾರಂಭಿಸಲಾದ ಕ್ರೀಡಾ ಹಾಸ್ಟೆಲ್ ಕಾಮಗಾರಿ ಪೂರ್ಣಗೊಂಡಿದ್ದರೂ ಮಕ್ಕಳಿಗೆ ಪ್ರವೇಶವನ್ನು ನೀಡದಿರಲು ಕಾರಣವೇನು ;

(ಆ) ೨೦೨೪-೨೫ನೇ ಸಾಲಿಗೆ ಸುಮಾರು ೫೦ ಮಕ್ಕಳಿಗೆ ಪ್ರವೇಶ ನೀಡಲು ಕೂಡಲೇ ಕ್ರಮಕೈಗೊಳ್ಳಲಾಗುವುದೇ ;

(ಇ) ಈ ಹಾಸ್ಟೆಲ್ ಯೋಜನೆ ಎಂದು ಪ್ರಾರಂಭಗೊಳಿಸಲಾಯಿತು, ಇದಕ್ಕೆ ತಗುಲಿದ ವೆಚ್ಚ ಎಷ್ಟು ? (ವಿವರ ನೀಡುವುದು)

## ರಾಜ್ಯ ಹೈಕೋರ್ಟ್ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೪ (೩೬೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಹೈಕೋರ್ಟ್ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪನೆ ಮಾಡಬೇಕೆಂಬ ಬೇಡಿಕೆ ಇದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಮತ್ತು ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಿಂದ ಬೆಂಗಳೂರಿಗೆ ತೆರಳಲು ಕಕ್ಷಿದಾರರಿಗೆ ತುಂಬಾ ಅನಾನುಕೂಲವಾಗಲಿದ್ದು, ಈ ಬಗ್ಗೆ ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ ;

(ಇ) ಈ ಭಾಗಗಳಿಂದ ಸುಮಾರ ೪೦% ಕ್ಕೂ ಅಧಿಕ ಪ್ರಕರಣಗಳು ಹೈಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ಇದ್ದು ಈಗಾಗಲೇ ವಕೀಲರ ಸಂಘಗಳು ಈ ಬಗ್ಗೆ ಬೇಡಿಕೆಯನ್ನು ನೀಡಿದ್ದರೂ ಏನು ಕ್ರಮ ಕೈಗೊಳ್ಳಲಿಲ್ಲವೆಂದು ಕೂಗು ಬಂದಿದ್ದು ಸರ್ಕಾರ ಕ್ರಮಕೈಗೊಳ್ಳುವುದೇ ;

(ಈ) ಮಂಗಳೂರಿನಲ್ಲಿ ಹೈಕೋರ್ಟ್ ಪೀಠ ಸ್ಥಾಪನೆಗೆ ಬೇಕಾದ ಸ್ಥಳಾವಕಾಶ ಇದ್ದು ಈ ವರ್ಷದಿಂದ ಪೀಠ ಸ್ಥಾಪನೆಗೆ ಸರ್ಕಾರ ಕ್ರಮಕೈಗೊಳ್ಳುವುದೇ ?

## ಮಂಗಳೂರು ಜಿಲ್ಲಾ ನ್ಯಾಯಾಲಯಕ್ಕೆ ಹೊಸಕಟ್ಟಡ ನಿರ್ಮಿಸದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೫ (೩೬೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಜಿಲ್ಲಾ ನ್ಯಾಯಾಲಯಕ್ಕೆ ಹೊಸಕಟ್ಟಡ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ವಕೀಲರುಗಳಿಗೆ "ವಕೀಲರ ಭವನ" ಸ್ಥಾಪನೆಗೆ ಬೇಡಿಕೆ ಇದ್ದರೂ ಈ ಬಗ್ಗೆ ಕ್ರಮಕೈಗೊಳ್ಳದಿರಲು ಕಾರಣಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ವಕೀಲರ ಸಂಘಕ್ಕೆ "ವಕೀಲರ ಭವನ" ಪ್ರಾರಂಭಿಸಿದ್ದರೂ ಯಾವುದೇ ಮೂಲಭೂತ ಸೌಲಭ್ಯವನ್ನು ಒದಗಿಸದೇ ಇರುವುದರಿಂದ ಪ್ರಯೋಜನಕ್ಕೆ ಬಾರದಂತೆ "ವಕೀಲರ ಭವನ" ಆಗಿರುವುದು ಸರ್ಕಾರದ ಗಮನಕ್ಕೆ ತಂದರೂ ಹಣ ಬಿಡುಗಡೆ ಮಾಡದೇ ಇರಲು ಕಾರಣವೇನು ;

(ಈ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಬಿ.ಸಿ. ರೋಡ್ ನ್ಯಾಯಾಲಯದ ಕಟ್ಟಡವು ಯಾವಾಗ ಪೂರ್ಣಗೊಳ್ಳುವುದು ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಮಹಿಳಾ ವಕೀಲರುಗಳ ಸಂಖ್ಯೆ ಜಾಸ್ತಿಯಾಗುತ್ತಿರುವುದರಿಂದ ಪ್ರತ್ಯೇಕ ವಕೀಲರ ಭವನಗಳನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸುವುದೇ ? (ವಿವರ ನೀಡುವುದು)

## ಹಾರಂಗಿ ಜಲಾನಯನದ ಅಭಿವೃದ್ಧಿ ಕಾಮಗಾರಿಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೬ (೩೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಮಧ್ಯಮ ಮತ್ತು ಭಾರಿ ನೀರಾವರಿ ಇಲಾಖೆಗೆ ಸಂಬಂಧಿಸಿದಂತೆ ೨೦೧೯ರಿಂದ ಇಲ್ಲಿಯವರೆಗೆ ವಿವಿಧ ಅಭಿವೃದ್ಧಿ

ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ; ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ; ಬಾಕಿ ಇರುವ ಕಾಮಗಾರಿಗಳೆಷ್ಟು ; ಕಾಮಗಾರಿ ಪೂರ್ಣಗೊಂಡು ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾರಂಗಿ ಜಲಾನಯನದ ಅಭಿವೃದ್ಧಿಗಾಗಿ ಈ ಹಿಂದೆ ಬಿಡುಗಡೆಯಾದ ೧೫೫.೪೨ ಕೋಟಿ ರೂಗಳ ಕಾಮಗಾರಿ ಯಾವ ಹಂತದಲ್ಲಿದೆ ;

(ಇ) ಸದರಿ ಹಾರಂಗಿ ಜಲಾನಯನ ಅಭಿವೃದ್ಧಿ ಕಾಮಗಾರಿಯ ಗುತ್ತಿಗೆಯನ್ನು ಯಾವ ಕಂಪನಿಗೆ ವಹಿಸಲಾಗಿದೆ ; ಗುತ್ತಿಗೆ ಪಡೆಯುವಲ್ಲಿನ ಮಾನದಂಡಗಳೇನು ; ಸದರಿ ಕಾಮಗಾರಿಯ ಗುತ್ತಿಗೆ ಪಡೆಯಲು ಸಲ್ಲಿಕೆಯಾಗಿರುವ ಒಟ್ಟು ಅರ್ಜಿಗಳೆಷ್ಟು; (ಸಂಪೂರ್ಣ ಕ್ರಿಯಾ ಯೋಜನೆ ಮಾಹಿತಿಯನ್ನು ಒದಗಿಸುವುದು)

(ಈ) ಈಗಾಗಲೇ ವೆಚ್ಚ ಮಾಡಲಾಗಿರುವ ೩೬ ಲಕ್ಷ ರೂಗಳ ಮತ್ತು ಮುಂದುವರೆದು ಆಗಿರುವ ಕಾಮಗಾರಿಯ ಒಟ್ಟು ವೆಚ್ಚ ಸಂಪೂರ್ಣ ಮಾಹಿತಿಯನ್ನು ನೀಡುವುದು ? (ಕಾಮಗಾರಿವಾರು ಒದಗಿಸಲಾದ ಹಾಗೂ ಖರ್ಚಾದ ಹಣದ ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಯಿಂದ ಕೊಡಗು ಜಿಲ್ಲೆಗೆ ಒದಗಿಸಲಾಗಿರುವ ಅನುದಾನದ ಮಾಹಿತಿಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೭ (೩೩೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ೨೦೧೯ ರಿಂದ ಇಲ್ಲಿಯವರೆಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ;

(ಆ) ಪೂರ್ಣಗೊಂಡಿರುವ ಕಾಮಗಾರಿಗಳು, ಬಾಕಿ ಇರುವ ಕಾಮಗಾರಿಗಳು, ಕಾಮಗಾರಿ ಪೂರ್ಣಗೊಂಡು ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅಕ್ರಮ ವಲಸಿಗರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೮ (೪೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬೇರೆ ಬೇರೆ ದೇಶಗಳಿಂದ ಅಕ್ರಮವಾಗಿ ವಲಸೆ ಬಂದಂತಹ ವಿದೇಶಿ ಪ್ರಜೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಅಕ್ರಮ ವಲಸಿಗರ ಪತ್ತೆಗೆ ಕೈಗೊಂಡ ಕ್ರಮಗಳೇನು ; ಅದರಲ್ಲಿ ಕಾನೂನುಬಾಹಿರ ಚಟುವಟಿಕೆಯಲ್ಲಿ ಭಾಗಿಯಾದವರ ಸಂಖ್ಯೆ ಎಷ್ಟು ; (ಪ್ರಕರಣವಾರು ವಿವರಿಸುವುದು)

(ಇ) ಬೇರೆ ಬೇರೆ ವಿಸಾದಡಿಯಲ್ಲಿ ರಾಜ್ಯದಲ್ಲಿ ಅಕ್ರಮವಾಗಿ ವಾಸಿಸುವ ವಿದೇಶಿಗರನ್ನು ಮರಳಿ ಕಳುಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ವಿದೇಶಿಗರ ಸಂಪೂರ್ಣ ಮಾಹಿತಿ ಒದಗಿಸುವುದು ;

(ಈ) ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಎಷ್ಟು ಕೊಲೆಗಳು, ಹಲ್ಲೆ, ಸುಲಿಗೆ, ದರೋಡೆ ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು/ತಾಲ್ಲೂಕುವಾರು/ಪೊಲೀಸ್ ಠಾಣಾವಾರು ಮಾಹಿತಿ ನೀಡುವುದು) ಈ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ರಾಜ್ಯದ ಮಹಿಳೆಯರ, ಮಕ್ಕಳ ಮೇಲೆ ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ರಾಜ್ಯದಲ್ಲಿ ಡ್ರಗ್ಸ್ ಸಂಬಂಧಿ ಪ್ರಕರಣಗಳು ಎಷ್ಟು ದಾಖಲಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ದ್ವೀಪ ಪ್ರವಾಸೋದ್ಯಮದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೯ (೪೨೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದ್ವೀಪ ಪ್ರವಾಸೋದ್ಯಮಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಇದಕ್ಕಾಗಿ ಗುರುತಿಸಿರುವ ದ್ವೀಪ ಯಾವುವು ;

(ಆ) ರಾಜ್ಯದಲ್ಲಿ ಪ್ರವಾಸೋದ್ಯಮಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಬೋಟ್ ಹೌಸ್ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ ; ಪ್ರಸ್ತುತ ರಾಜ್ಯದಲ್ಲಿ ಎಲ್ಲಿ ಬೋಟ್ ಹೌಸ್ ಸೌಲಭ್ಯ ಲಭ್ಯವಿದೆ ; ಬೋಟ್

ಹೌಸ್‌ಗಳನ್ನು ನಿರ್ಮಿಸಿ ನಿರ್ವಹಿಸುವ ಬಗ್ಗೆ ಸರ್ಕಾರದ ನಿಲುವೇನು ; ಖಾಸಗಿಯವರು ಬೋಟ್ ಹೌಸ್ ಹೊಂದಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಖಾಸಗಿಯವರು ಬೋಟ್ ಹೌಸ್ ಹೊಂದಲು ಸರ್ಕಾರ ಪ್ರೋತ್ಸಾಹ ನೀಡುತ್ತಿದೆಯೇ ; ರಾಜ್ಯದಲ್ಲಿ ಬೋಟ್ ಹೌಸ್‌ಗಳಿಗೆ ಪರವಾನಿಗೆ ನೀಡಲಾಗಿದೆಯೇ ;

(ಇ) ರಾಜ್ಯವು ಅತೀ ದೊಡ್ಡ ಪ್ರಮಾಣದಲ್ಲಿ ಕಡಲ ತೀರವನ್ನು ಹೊಂದಿದ್ದು, ಈ ಕಡಲ ತೀರದಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ಉತ್ತೇಜಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ರಾಜ್ಯದ ಕಡಲ ತೀರಗಳನ್ನೂ ಸಹ ಗೋವಾ ಮಾದರಿಯಲ್ಲಿ ಪ್ರವಾಸಿಗಳ ಆಕರ್ಷಣೀಯ, ಪ್ರೇಕ್ಷಣೀಯ ಸ್ಥಳವನ್ನಾಗಿ ರೂಪಿಸಲು ಸರ್ಕಾರ ಯಾವ ಯೋಜನೆ ಹೊಂದಿದೆ ;

(ಈ) ರಾಜ್ಯಕ್ಕೆ ಪ್ರವಾಸೋದ್ಯಮದಿಂದ ಬರುವ ಒಟ್ಟಾರೆ ಆದಾಯವೆಷ್ಟು ; ಪ್ರವಾಸೋದ್ಯಮದಿಂದ ಅಂದಾಜು ರಾಜ್ಯದಲ್ಲಿ ಸೃಷ್ಟಿಯಾಗುತ್ತಿರುವ ನೇರ ಮತ್ತು ಪರೋಕ್ಷ ಉದ್ಯೋಗಗಳ ಸಂಖ್ಯೆ ಎಷ್ಟು ; ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡುವುದರಿಂದ ನಿರುದ್ಯೋಗ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಪ್ರಯತ್ನಿಸುತ್ತಿದೆಯೇ ; ಇದಕ್ಕೆ ಯಾವ ರೀತಿ ಯೋಜನೆ ಮಾಡಲಾಗಿದೆ ?

## ಬೆಂಗಳೂರಿನ ಮಹಾನಗರ ಪಾಲಿಕೆಯ ಕಟ್ಟಡಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೦ (೪೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸುಪರ್ದಿಯಲ್ಲಿರುವ ಒಟ್ಟು ಕಟ್ಟಡಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಗುತ್ತಿಗೆ ಆಧಾರದ ಮೇಲೆ ನೀಡಿರುವ ಜಾಗಗಳು ಯಾವುವು ; ಎಷ್ಟು ವರ್ಷಗಳಿಗೆ ಗುತ್ತಿಗೆ ನೀಡಲಾಗಿದೆ ; ಬಾಡಿಗೆಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂದಾಯವಾಗುತ್ತಿರುವ ಹಣ ಎಷ್ಟು ; ಎಷ್ಟ ವರ್ಷಗಳಿಗೊಮ್ಮೆ ಬಾಡಿಗೆ ಪರಿಷ್ಕರಣೆ ಮಾಡಲಾಗುತ್ತಿದೆ ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಸ್ವತ್ತುಗಳನ್ನು ಯಾವ ವೆಬ್‌ಸೈಟ್‌ನಲ್ಲಿ ತೋರಿಸಲಾಗಿದೆ ; ಈ ಸ್ವತ್ತುಗಳು ಯಾರಿಗೆ, ಎಷ್ಟು ವರ್ಷಕ್ಕೆ, ಯಾವ ಕಾರಣಕ್ಕೆ ಲೀಸ್ ನೀಡಲಾಗಿದೆ ; ಇದರಿಂದ ಎಷ್ಟು ಆದಾಯ ಬರುತ್ತಿದೆ ಎಂಬ ವಿವರಗಳನ್ನು ಸದರಿ ವೆಬ್‌ಸೈಟ್‌ನಲ್ಲಿ ತೋರಿಸಲಾಗಿದೆಯೇ ; ತೋರಿಸಿಲ್ಲದಿದ್ದಲ್ಲಿ, ಕಾರಣವೇನು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಷ್ಟು ಸ್ವತ್ತುಗಳು ವಿವಿಧ ನ್ಯಾಯಾಲಯಗಳಲ್ಲಿ ವ್ಯಾಜ್ಯಗಳಲ್ಲಿವೆ ; ಸದರಿ ವ್ಯಾಜ್ಯಗಳು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಬೆಂಗಳೂರಿನ ಕೆರೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೮೧ (೪೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಕೆರೆಗಳಿವೆ ಮತ್ತು ಅವುಗಳ ವಿಸ್ತೀರ್ಣ ಎಷ್ಟು ; ಕೆರೆಗಳ ಸಂರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕೆರೆ ಒತ್ತುವರಿ ತಡೆಗೆ ಕೈಗೊಂಡಿರುವ ಕ್ರಮಗಳೇನು ; ಒತ್ತುವರಿ ಮಾಡಿರುವವರ ವಿರುದ್ಧ ಕ್ರಮ ಜರುಗಿಸಲಾಗಿದೆಯೇ ; ಒತ್ತುವರಿ ಮಾಡಿದ ಜಾಗವನ್ನು ಮರಳಿ ಪಡೆಯಲಾಗಿದೆಯೇ ; ಎಷ್ಟು ಜನರ ಮೇಲೆ ಕ್ರಮ ಜರುಗಿಸಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಒತ್ತುವರಿದಾರರ ವಿವರ ನೀಡಿ)

(ಇ) ಪ್ರಸ್ತುತ ಕೆರೆಗಳ ಆಡಿಟ್ ಮಾಡಲಾಗಿದೆಯೇ ; ಹಿಂದಿನ ಆಡಿಟ್ ಯಾವಾಗ ಮಾಡಲಾಗಿದೆ ; (ವರದಿಯ ಪ್ರತಿ ನೀಡುವುದು)

(ಈ) ಒತ್ತುವರಿ ಸಂಪೂರ್ಣವಾಗಿ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ?

**ಬ್ಯಾಂಕ್‌ಗಳಲ್ಲಿ ವಾರಸುದಾರರು ಇಲ್ಲದ ಠೇವಣಿ ಮೊತ್ತ ಕುರಿತು**

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೮೨ (೩೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬ್ಯಾಂಕ್‌ಗಳಲ್ಲಿ ವಾರಸುದಾರರು ಇಲ್ಲದ ಠೇವಣಿ ಮೊತ್ತ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ರಾಜ್ಯದ ಸರ್ಕಾರದ ಇಲಾಖೆಗಳು ಖಾಸಗಿ ಮತ್ತು ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಲ್ಲಿ ಕ್ಲೈಮ್ ಮಾಡದೇ ಇರುವ ಠೇವಣಿಗಳ ಒಟ್ಟು ಮೊತ್ತ ಎಷ್ಟು ; (ಖಾತೆಗಳ ಒಟ್ಟು ಸಂಖ್ಯೆಯೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೦೨ ವರ್ಷಗಳಲ್ಲಿ ಕ್ಲೈಮ್ ಮಾಡದ ಮೊತ್ತ ಎಷ್ಟು ಏರಿಕೆ ಆಗಿದೆ ; (ವರ್ಷವಾರು, ಶೇಕಡವಾರು ಮಾಹಿತಿ ನೀಡುವುದು)

(ಈ) ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ನೈಜ ಹಕ್ಕುದಾರರನ್ನು ಗುರುತಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಕ್ಲೈಮ್ ಮಾಡದ ಠೇವಣಿಗಳನ್ನು ಹುಡುಕಲು ಸಾರ್ವಜನಿಕರಿಗೆ ಯಾವ ರೀತಿಯ ಅನುಕೂಲ ಮಾಡಿಕೊಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ವಾರಸುದಾರರನ್ನು ಗುರುತಿಸಲು ಸಾಧ್ಯವಾಗದಿದ್ದಲ್ಲಿ, ಈ ಠೇವಣಿ ಮೊತ್ತವನ್ನು ಏನು ಮಾಡಲಾಗುತ್ತದೆ ?

## ಪ್ರವಾಸಿ ಮಾರ್ಗದರ್ಶಿಗಳಿಗೆ ಪ್ರೋತ್ಸಾಹಧನ ಪಾವತಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೮೩ (೩೪೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಪ್ರವಾಸೋದ್ಯಮ ಬಲಪಡಿಸಲು ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಯೋಜನೆ ರೂಪಿಸಿದೆಯೇ ;

(ಆ) ರೂಪಿಸಿದ್ದಲ್ಲಿ, ಎಷ್ಟು ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಿಕೊಂಡು ಪ್ರವಾಸಿ ಮೂಲ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಪ್ರವಾಸಿ ಮಾರ್ಗದರ್ಶಿಗಳ (ಟೂರಿಸ್ಟ್ ಗೈಡ್) ಸಂಖ್ಯೆ ಎಷ್ಟು ; ಯಾವ ಯಾವ ಪ್ರವಾಸಿ ಸ್ಥಳಗಳಲ್ಲಿ ಎಷ್ಟು ಸಂಖ್ಯೆಯ ಟೂರಿಸ್ಟ್ ಗೈಡ್‌ಗಳು ಕಾರ್ಯನಿರ್ವಹಿಸುತ್ತಿದ್ದಾರೆ ;

(ಈ) ಪ್ರವಾಸೋದ್ಯಮಕ್ಕೆ ಪೂರಕವಾಗಿ ಕೆಲಸ ಮಾಡುತ್ತಿರುವ ಪ್ರವಾಸಿ ಮಾರ್ಗದರ್ಶಿಗಳಿಗೆ ಪಾವತಿಸುತ್ತಿರುವ ಮಾಸಿಕ ಪ್ರೋತ್ಸಾಹಧನ ಮೊತ್ತ ಎಷ್ಟು ; ಇವರಿಗೆ, ಪಾವತಿಸಲು ಬಾಕಿಯಿರುವ ಪ್ರೋತ್ಸಾಹಧನ ಮೊತ್ತ ಎಷ್ಟು ; ಬಾಕಿ ಮೊತ್ತವನ್ನು ಯಾವ ವೇಳೆಗೆ ಪಾವತಿಸಲಾಗುವುದು ; (ಮಾಹಿತಿ ನೀಡುವುದು)

(ಉ) ಸರ್ಕಾರದ ವತಿಯಿಂದ ಇವರಿಗೆ ಯಾವ ರೀತಿಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ;

(ಊ) ಟೂರ್ ಗೈಡ್ ಮತ್ತು ಹೆರಿಟೇಜ್ ಟೂರ್ ಗೈಡ್‌ಗಾಗಿ ತರಬೇತಿ ಕೋರ್ಸ್ ಆರಂಭಿಸಲು ಸರ್ಕಾರ ಉದ್ದೇಶಿಸಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಪರವಾನಗಿ ಪಡೆದ ಬಂದೂಕುಗಳ ದುರುಪಯೋಗ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೮೪ (೩೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಬ್ಬ ವ್ಯಕ್ತಿ ಎಷ್ಟು ಬಂದೂಕುಗಳನ್ನು ಹೊಂದಬಹುದು ರಾಜ್ಯದಲ್ಲಿ ಬೆಳೆ ಮತ್ತು ಸ್ವ-ರಕ್ಷಣೆಗೆ ಬಂದೂಕು ಪರವಾನಗಿ ಪಡೆದುಕೊಂಡವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಳೆ ಮತ್ತು ಸ್ವ-ರಕ್ಷಣೆಗೆ ಬಂದೂಕು ಪರವಾನಗಿ ಮಂಜೂರು ಮಾಡುವ ಸಂದರ್ಭದಲ್ಲಿ ಅನುಸರಿಸಲಾಗುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಪರವಾನಗಿ ಪಡೆದ ಬಂದೂಕುಗಳ ದುರುಪಯೋಗ (ಪ್ರಾಣಿಗಳ

ಹತ್ಯೆ ಮತ್ತು ಮಾನವ ಹತ್ಯೆ) ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಬಂದೂಕುಗಳು ದುರುಪಯೋಗವಾದ ಪ್ರಕರಣಗಳೆಷ್ಟು ; ದುರುಪಯೋಗ ಪಡಿಸಿಕೊಂಡವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ರದ್ದುಪಡಿಸಲಾದ ಪರವಾನಗಿಗಳ ಸಂಖ್ಯೆ ಎಷ್ಟು ; ಬಂದೂಕುಗಳ ದುರುಪಯೋಗ ತಡೆಯಲು ಹೊಸ ಬಂದೂಕು ಪರವಾನಗಿ ಮತ್ತು ನವೀಕರಣಕ್ಕೆ ಅನುಸರಿಸುತ್ತಿರುವ ಕಟ್ಟು ನಿಟ್ಟಿನ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ನದಿ ವ್ಯಾಜ್ಯಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೮೫ (೩೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಾವ ಯಾವ ನದಿಗಳು ವ್ಯಾಜ್ಯಕ್ಕೆ ಒಳಪಟ್ಟಿವೆ ; ವ್ಯಾಜ್ಯಕ್ಕೆ ಒಳಪಟ್ಟ ನದಿಗಳ ವಿಚಾರವಾಗಿ ನ್ಯಾಯಾಲಯದಲ್ಲಿ ಮೊಕದ್ದಮೆಗಳನ್ನು ಹೂಡಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಮೊಕದ್ದಮೆಗಳ ವಿಚಾರಣೆ ಪ್ರಸ್ತುತ ಯಾವ ಹಂತದಲ್ಲಿದೆ ; (ಮೊಕದ್ದಮೆವಾರು ವಿವರ ನೀಡುವುದು)

(ಇ) ಈವರೆವಿಗೂ ನದಿಗಳ ವ್ಯಾಜ್ಯ ವಿಚಾರವಾಗಿ (ವ್ಯಾಜ್ಯ ಇತ್ಯರ್ಥಗೊಂಡಿದ್ದರೂ) ವಕೀಲರಿಗೆ ಪಾವತಿಸಲಾದ ಶುಲ್ಕ ಎಷ್ಟು ? (ನದಿ ವ್ಯಾಜ್ಯವಾರು/ವಕೀಲರವಾರು ಮಾಹಿತಿ ನೀಡುವುದು)

## ಕಾವೇರಿ ನದಿಗೆ ಕೊಳಚೆ ನೀರು ಹರಿಸುತ್ತಿರುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೬ (೩೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾವೇರಿ ನದಿ ನೀರಿಗೆ ಇತ್ತೀಚಿನ ವರ್ಷಗಳಲ್ಲಿ ಕೊಳಚೆ ನೀರು ಸೇರಿಕೊಂಡು ಕಲುಷಿತಗೊಂಡಿರುವುದು ನಿಜವೇ ;

(ಆ) ಕಲುಷಿತವಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಹುಣಸೂರು ಬಳಿ ಇರುವ ಲಕ್ಷ್ಮಣತೀರ್ಥ ನದಿಗೆ ಕೊಳಚೆ ನೀರು ಸೇರಿಕೊಂಡು ಕಲುಷಿತಗೊಳ್ಳುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಮಳೆ ನೀರು ಚರಂಡಿ ದುರಸ್ತಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೭ (೩೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ಯಾರಂಟಿ ಯೋಜನೆಗಳಿಂದ ನಗರದ ಮಳೆ ನೀರು ಚರಂಡಿ ಹೂಳೆತ್ತಿ ದುರಸ್ತಿಗೊಳಿಸಲು ಸಹ ಆಗದಂತಹ ಆರ್ಥಿಕ ದುಸ್ಥಿತಿಗೆ ಸರ್ಕಾರ ತಲುಪಿರುವುದು ನಿಜವೇ ;

(ಆ) ಇಲ್ಲದಿದ್ದಲ್ಲಿ, ಬಿ.ಬಿ.ಎಂ.ಪಿ ೬೯ನೇ ವಾರ್ಡಿನ ಲಗ್ಗೆರೆ, ಮುನೇಶ್ವರ ಬಡಾವಣೆ, ೫೦ ಅಡಿ ರಸ್ತೆಯ ೧೦ನೇ ಜಂಕ್ಷನ್‌ನಿಂದ ೮೦ ಅಡಿ ರಸ್ತೆವರೆಗೆ ಕಳೆದ ೦೪ ವರ್ಷಗಳಿಂದ ಮಳೆ ನೀರು ಚರಂಡಿ ಹೊಳೆತ್ತಿ ದುರಸ್ತಿಗೊಳಿಸದೇ ಮಳೆ ನೀರು ೫೦ ಅಡಿ ರಸ್ತೆ ಮೇಲೆ ಹರಿದು ರಸ್ತೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸುತ್ತಮುತ್ತಲ ನಾಗರಿಕರುಗಳಿಗೆ ತೊಂದರೆಯಾಗುತ್ತಿದ್ದರೂ ಕಳೆದ ೦೪ ವರ್ಷಗಳಿಂದ ಸದರಿ ಕಾಮಗಾರಿ ನಿರ್ವಹಿಸದೆ ಕರ್ತವ್ಯಲೋಪವೆಸಗಿರುವ ಅಧಿಕಾರಿಗಳು ಯಾರು ;

(ಈ) ಸದರಿ ಸಮಸ್ಯೆ ನಿವಾರಿಸುವಂತೆ ಕಳೆದ ೦೪ ವರ್ಷಗಳಿಂದ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಬಿ.ಬಿ.ಎಂ.ಪಿ ಹಾಲಿ ಆಯುಕ್ತರು, ಜಂಟಿ ಆಯುಕ್ತರಿಂದ ಎಇಇ ಹಂತದವರೆಗೆ ಅಲ್ಲಿನ ನಾಗರಿಕರು ನೀಡಿರುವ ದೂರುಗಳ ಪ್ರತಿಗಳನ್ನು ಒದಗಿಸುವುದು ಹಾಗೂ ಸದರಿ ದೂರು ಅರ್ಜಿಯ ಮೇಲೆ ಯಾವ ಯಾವ ಅಧಿಕಾರಿಗಳು ಯಾವ ಯಾವ ರೀತಿಯ ಕ್ರಮ ಕೈಗೊಂಡಿರುತ್ತಾರೆ ; (ವರದಿಯ ಪ್ರತಿಯನ್ನು ಸಹ ಒದಗಿಸುವುದು)

(ಉ) ಕಳೆದ ೦೩ ವರ್ಷಗಳಿಂದ ಸದರಿ ರಸ್ತೆ ಕಾಮಗಾರಿಗೆ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು ಹಾಗೂ ಹಣ ಬಿಡುಗಡೆಯಾಗಿದ್ದರೂ, ಕಾಮಗಾರಿ ನಿರ್ವಹಿಸದೇ ಭ್ರಷ್ಟಾಚಾರವಾಗಿದ್ದಲ್ಲಿ ಸಂಬಂಧಿಸಿದವರ ವಿರುದ್ಧ ಕೈಗೊಳ್ಳುವ ಕ್ರಮವೇನು ;

(ಊ) ಸದರಿ ಕಾಮಗಾರಿಯನ್ನು ಕೂಡಲೇ ಕೈಗೊಳ್ಳಲು ಸರ್ಕಾರದ ಕ್ರಮವೇನು ?

## ಕೆರೆಗಳಿಗೆ ನೀರು ಹರಿಸುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೮ (೩೭೨) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾವೇರಿ ಜಲಾನಯನ ಪ್ರದೇಶದಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ನೀರಿಲ್ಲದೆ ; ಎಷ್ಟೆಷ್ಟು ಕೆರೆಗಳು ಒಣಗಿ ಹೋಗಿ ಅಂತರ್ಜಲ ಮಟ್ಟ ಕುಸಿದಿರುತ್ತದೆ ;

(ಆ) ಕಳೆದ ವರ್ಷದ ಬರಗಾಲದಲ್ಲಿ ಕೆರೆಗಳಿಗೆ ಸರಿಯಾಗಿ ನೀರು ತುಂಬಿಸದೆ ಇರುವುದರಿಂದ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಅಂತರ್ಜಲವಿಲ್ಲದೆ ಬೋರ್‌ವೆಲ್‌ಗಳು ಹಾಳಾಗಿ ರೈತರು ತೊಂದರೆ ಅನುಭವಿಸುತ್ತಿದ್ದು, ಕೂಡಲೇ ಸದರಿ ಕೆರೆಗಳಿಗೆ ನೀರು ತುಂಬಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಸರ್ಕಾರಿ ನೌಕರರ ವೇತನ ಮತ್ತು ನೇಮಕಾತಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೯ (೪೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ನೇಮಕಾತಿಗಳು ಖಾಲಿ ಇವೆ ; (ಇಲಾಖೆವಾರು ಸಮಗ್ರವಾಗಿ ವಿವರ ಒದಗಿಸುವುದು)

(ಆ) ಸರ್ಕಾರಿ ನೌಕರರ ನೇಮಕಾತಿ ಪ್ರಕ್ರಿಯೆಗಳು ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ವಾರ್ಷಿಕವಾಗಿ ನೀಡುತ್ತಿರುವ ವೇತನ ಎಷ್ಟು ? (ಇಲಾಖೆವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಅಬಕಾರಿ ಶುಲ್ಕ ಹೆಚ್ಚಳ ಮಾಡಿರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೦ (೪೩೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಅಬಕಾರಿ ಶುಲ್ಕವನ್ನು ಎಷ್ಟು ಬಾರಿ ಹೆಚ್ಚಳ ಮಾಡಲಾಗಿದೆ ;

(ಆ) ಅಬಕಾರಿ ಇಲಾಖೆಗೆ ಮದ್ಯದ ಅಂಗಡಿಗಳ ಮೂಲಕ ವಾರ್ಷಿಕವಾಗಿ ಸರ್ಕಾರಕ್ಕೆ ಬರುತ್ತಿರುವ ರಾಜಸ್ವ ಎಷ್ಟು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ವಾರ್ಷಿಕವಾಗಿ ಎಷ್ಟು ಮದ್ಯ ಮಾರಾಟವಾಗುತ್ತಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ರೌಡಿಶೀಟರ್‌ಗಳ ಮಾಹಿತಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೧ (೪೩೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩ರ ನಂತರ ರಾಜ್ಯದಲ್ಲಿ ರೌಡಿಶೀಟರ್‌ಗಳ ಮೇಲೆ ದಾಖಲಾಗಿರುವ ಕೇಸ್‌ಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ೨೦೨೩ ರಿಂದ ಇಲ್ಲಿಯವರೆಗೂ ಎಷ್ಟು ರೌಡಿಶೀಟರ್‌ಗಳನ್ನು ಬಿಡುಗಡೆ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಬೆಂಗಳೂರಿಗೆ ಮೇಕೆದಾಟು ಯೋಜನೆಯಿಂದ ನೀರು ತರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೨ (೪೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಗೆ ನೀರು ತರುವ ಮೇಕೆದಾಟು ಯೋಜನೆ ಯಾವ ಹಂತದಲ್ಲಿದೆ ;

(ಆ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೂಲಕ ಬೆಂಗಳೂರಿಗೆ ನೀರು ಒದಗಿಸುತ್ತಿರುವ ಒಟ್ಟು ನೀರಿನ ಪ್ರಮಾಣ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಸರ್ಕಾರಕ್ಕೆ ಬೆಂಗಳೂರು ನಗರದಲ್ಲಿ ಸಂಗ್ರಹವಾಗುತ್ತಿರುವ ನೀರಿನ ಶುಲ್ಕವೆಷ್ಟು ? (ವಿವರ ಒದಗಿಸುವುದು)

## ಸರ್ಕಾರದ ಒಟ್ಟು ಪ್ರಕರಣಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೩ (೪೨೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಹಾಗೂ ಜಿಲ್ಲಾ ನ್ಯಾಯಾಲಯಗಳಲ್ಲಿ ಸರ್ಕಾರವು ಪಕ್ಷಕಾರನಂತೆ ಭಾಗಿಯಾದ ಶೇಕಡವಾರು ಪ್ರಕರಣಗಳು ಎಷ್ಟು ;

(ಆ) ೨೦೧೯ನೇ ಸಾಲಿನ ಈ ಎಲ್ಲಾ ಪ್ರಕರಣಗಳು ಪ್ರವರ್ಗಗಳ ಮೇಲಿನ ವೆಚ್ಚವೆಷ್ಟು ;

(ಇ) ಈ ಪ್ರಕರಣಗಳ ಸ್ವರೂಪ ಮತ್ತು ಅವು ಕೇಂದ್ರೀಕೃತವಾಗಿರುವ ನ್ಯಾಯಾಲಯಗಳ ಮತ್ತು ಅವುಗಳಲ್ಲಿ ಭಾಗಿಯಾಗಿರುವ ನಿರ್ದಿಷ್ಟ ೨೦೧೯ರಿಂದ ಇಲ್ಲಿಯವರೆಗೆ ಸರ್ಕಾರಿ ಇಲಾಖೆಗಳ ವರ್ಷವಾರು ಮಾಹಿತಿ ನೀಡಿ ;

(ಈ) ಸಾಂವಿಧಾನಿಕ ಸಂದಿಗ್ದತೆಯ ವಿಷಯವನ್ನು ಒಳಗೊಂಡಿರದಂತಹ ನ್ಯಾಯಾಲಯಗಳಲ್ಲಿ ಮೇಲ್ಮನವಿ ಸಲ್ಲಿಸಲಾದ ವಿಷಯಗಳ ಸಂಖ್ಯೆ ಎಷ್ಟು ?

## ಬೆಳಗಾವಿ ನಗರದಲ್ಲಿರುವ ಪೊಲೀಸ್ ಜಿಮ್ಖಾನಾ ಕಟ್ಟಡದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೪ (೪೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದ ಹೃದಂಯ ಭಾಗದಲ್ಲಿ ಈ ಹಿಂದೆ ೨೦೦೩-೦೪ನೇ ಸಾಲಿನಲ್ಲಿ ಪೊಲೀಸ್ ಜಿಮ್ಖಾನಾ ನಿರ್ಮಿಸಲು ಯೋಜಿಸಿ ಕಟ್ಟಡ ಕಾಮಗಾರಿ ಪ್ರಾರಂಭಿಸಿ ಪೂರ್ಣಗೊಳಿಸದೇ ಯಥವತ್ತಾಗಿ ಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸುಮಾರು ೫೫,೦೦೦ ಚ.ಅ. ಜಾಗವನ್ನು ೨೦೦೩-೦೪ ರಿಂದ ಉಪಯೋಗಿಸದೇ ಇರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗಿರುವುದಿಲ್ಲವೇ ;

(ಇ) ಸರ್ಕಾರದ/ಇಲಾಖೆ ವತಿಯಿಂದ ಸದರಿ ಜಾಗವನ್ನು ಅಭಿವೃದ್ಧಿಪಡಿಸಿ ಸರ್ಕಾರ/ಖಾಸಗಿ ಉಪಯೋಗಕ್ಕಾಗಿ ನೀಡಲು

ಯೋಜಿಸಿದೆಯೇ ; ಈ ಕಾಮಗಾರಿ ಯಾವಾಗ ಪ್ರಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ಬೆಂಗಳೂರು ನಗರದ ದಿನ್ನೂರು ಮುಖ್ಯರಸ್ತೆ ಮತ್ತು ಟ್ಯಾನರಿ ರಸ್ತೆ ಅಗಲೀಕರಣದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೫ (೪೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿರುವ ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯಾದ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಸುಮಾರು ೨೫ ವರ್ಷಗಳ ಹಿಂದೆ ಯೋಚಿಸಿದ್ದು, ಇಲ್ಲಿಯವರೆಗೆ ಈ ಯೋಜನೆಯನ್ನು ಪ್ರಾರಂಭಿಸದಿರುವುದಕ್ಕೆ ಕಾರಣಗಳೇನು ;

(ಆ) ಇದರಿಂದಾಗಿ ವಾಹನ ಸವಾರರು, ಆಂಬ್ಯುಲೆನ್ಸ್ ಮತ್ತು ಇತರೆ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿದ್ದು, ಇದಲ್ಲದೇ ವಾಹನ ದಟ್ಟಣೆಯಿಂದ ಪರಿಸರದ ಮೇಲೆಯೂ ಅಡ್ಡ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇದೇ ರೀತಿ ಟ್ಯಾನರಿ ರಸ್ತೆಯನ್ನು (ಟ್ಯಾನರಿ ರಸ್ತೆಯ ಖಸಾಯಿ ಖಾನೆಯಿಂದ ನಾಗವಾರದವರೆಗೆ) ಸಹ ಅಗಲೀಕರಣಗೊಳಿಸಿ

ಅಭಿವೃದ್ಧಿಪಡಿಸಲು ಯೋಜಿಸಿದ್ದು, ಈ ಭಾಗದಲ್ಲಿ ಮೆಟ್ರೋ ಕಾರ್ಯ ಪ್ರಾರಂಭವಾಗಿರುವುದರಿಂದ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಮತ್ತು ಅಡಚಣೆಗಳು ಉಂಟಾಗುತ್ತಿದ್ದು, ಯಾವುದೇ ಪರ್ಯಾಯ ವ್ಯವಸ್ಥೆಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೬ (೩೩೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಸಣ್ಣ ನೀರಾವರಿ ಇಲಾಖೆಯಿಂದ ಇದುವರೆವಿಗೂ ಮಂಜೂರಾಗಿರುವ ಅನುದಾನದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡುಗಡೆ, ಮಂಜೂರು ಮಾಡಲಾಗಿದ್ದ ಅನುದಾನದಲ್ಲಿ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದಲ್ಲಿ ಯುವನಿಧಿ ಯೋಜನೆಯಡಿ ಫಲಾನುಭವಿಗಳಿಗೆ ಭತ್ಯೆ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೭ (೨೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಘೋಷಿಸಿದ್ದ ಪಂಚ ಗ್ಯಾರಂಟಿಗಳ ಪೈಕಿ ಯುವನಿಧಿ ಯೋಜನೆಯು ಒಂದಾಗಿದ್ದು ರಾಜ್ಯದಲ್ಲಿ ಕಳೆದ ವರ್ಷದಿಂದ ಇಲ್ಲಿಯವರೆಗೆ ಫಲಾನುಭವಿಗಳು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾ ಕೇಂದ್ರ, ತಾಲ್ಲೂಕು ಕೇಂದ್ರ ಸೇರಿದಂತೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯುವನಿಧಿಗೆ ಅರ್ಜಿ ಸಲ್ಲಿಸಿದ ಫಲಾನುಭವಿಗಳಲ್ಲಿ ಎಷ್ಟು ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ದೊರೆತಿದೆ ; ಅದರಲ್ಲಿ ಪದವೀಧರರ ಹಾಗೂ ಡಿಪ್ಲೋಮಾ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ನಿರುದ್ಯೋಗ ಭತ್ಯೆಯ ಭರವಸೆಯಿಂದ ನಿರಾಸೆಯಾಗಿರುವ ೧೦ ಸಾವಿರ ಜನರಿಗೆ ಯುವನಿಧಿ ದೊರೆತಿಲ್ಲ ಎನ್ನುವುದು ನಿಜವೇ ; ಫಲಾನುಭವಿಗಳು ರಸ್ತೆಗಿಳಿದು ಅಲ್ಲಲ್ಲಿ ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

# ಬಾಗಲಕೋಟೆ ಜಿಲ್ಲೆಯಲ್ಲಿ ಹೆಚ್ಚುವರಿ ೭ ನ್ಯಾಯಾಲಯಗಳ ಸ್ಥಾಪನೆ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೮ (೩೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲಾ ಮತ್ತು ಸೆಷನ್ಸ್ ಕೋರ್ಟಿನಲ್ಲಿ ಸುಮಾರು ೧೦,೦೦೦ (ಹತ್ತು ಸಾವಿರ) ಕ್ಕಿಂತ ಹೆಚ್ಚು ಪ್ರಕರಣಗಳು ಕಳೆದ ೮-೯ ವರ್ಷಗಳಿಂದ ಇತ್ಯರ್ಥಕ್ಕಾಗಿ ಬಾಕಿ ಉಳಿದುಕೊಂಡ ಕಾರಣ ಸಂಬಂಧಿಸಿದ ಕಕ್ಷಿದಾರರು ತೀವ್ರವಾದ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವ್ಯಾಜ್ಯಗಳ ತೀವ್ರ ಇತ್ಯರ್ಥ ಕುರಿತಂತೆ ಕರ್ನಾಟಕ ಉಚ್ಚನ್ಯಾಯಾಲಯದ ರೂಢಿ/ ನಿಯಮಾವಳಿಗಳಂತೆ ಜಿಲ್ಲಾ ನ್ಯಾಯಾಲಯುಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ (ಪೆಂಡಿಂಗ್) ಉಳಿದುಕೊಂಡ ಪ್ರತಿ ೨,೦೦೦ ವ್ಯಾಜ್ಯಗಳಿಗೆ ಒಂದು ಹೆಚ್ಚುವರಿ ಜಿಲ್ಲಾ ನ್ಯಾಯಾಲಯದ ಅವಶ್ಯಕತೆ ಇದೆ ಎಂದು ಪರಿಗಣಿಸಿ ಮತ್ತು ಅನುಪಾತದನ್ವಯ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪನೆ ಮಾಡಬೇಕೆನ್ನುವ ನಿಯಮದ ಕುರಿತಂತೆ ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಇ) ಹಾಗಿದ್ದಲ್ಲಿ, ಬಾಗಲಕೋಟೆಯ ಜಿಲ್ಲಾ ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಆಧರಿಸಿ ಇನ್ನೂ ೭ ಹೆಚ್ಚುವರಿ ನ್ಯಾಯಾಲಯಗಳ ಸ್ಥಾಪನೆ ಮಾಡಲು

ಕ್ರಮ ಕೈಗೊಳ್ಳುವಂತೆ ಕೋರಿ ಕರ್ನಾಟಕ ಉಚ್ಚ ನ್ಯಾಯಾಲಯವು ಕೂಡ ದಿನಾಂಕ: ೧೫.೦೬.೨೦೨೩ ರಂದು ಸರ್ಕಾರಕ್ಕೆ ಪತ್ರ ಬರೆದಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಬಾಗಲಕೋಟೆಗೆ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಸ್ಥಾಪನೆ ಮಾಡಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಸ್ಥಾಪನೆ ಯಾವಾಗ ರಚಿಸಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

## ವಿಜಯಪುರ ಜಿಲ್ಲೆಯಲ್ಲಿ ಕ್ರೀಡಾಭಿವೃದ್ಧಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೨೯ (೩೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಜಿಲ್ಲೆಯಲ್ಲಿ ಕ್ರೀಡಾ ಅಭಿವೃದ್ಧಿಗಾಗಿ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಆ) ಸೈಕ್ಲಿಸ್ಟ್‌ಗಳ ವೆಲೋಡ್ರೋಂ ಕಾಮಗಾರಿಯು ಕಳಪೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತನಿಖೆ ನಡೆಯುತ್ತಿದೆಯೇ ; (ವಿವರ ನೀಡುವುದು)

(ಇ) ಈ ಯೋಜನೆಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಈ) ಕ್ರೀಡೆಯಲ್ಲಿ ಅತ್ಯುತ್ತಮ ಸಾಧನೆಗೈದ ಕ್ರೀಡಾಪಟುಗಳಿಗೆ ಉದ್ಯೋಗ ನೀಡಲು ಸರ್ಕಾರ ಏನಾದರೂ ಕ್ರಮಕೈಗೊಳ್ಳುವುದೇ ?

## ವಿಜಯಪುರ ಜಿಲ್ಲೆಯಲ್ಲಿ ಅಮಾಯಕರ ಆಸ್ತಿಯನ್ನು ಕಬಳಿಸುತ್ತಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೦೦ (೩೬೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಅಮಾಯಕ, ಅಸಹಾಯಕರ ಆಸ್ತಿ ಪಾಸ್ತಿಯನ್ನು ಭೂಗಳ್ಳರು ನಕಲಿ ದಾಖಲೆ ಸೃಷ್ಟಿಸಿ ವಶಪಡಿಸಿಕೊಳ್ಳುತ್ತಿರುವ ಬಗ್ಗೆ ಎಷ್ಟು ದೂರುಗಳು ದಾಖಲಾಗಿವೆ ; (ವಿವರ ನೀಡುವುದು)

(ಆ) ದೂರುಗಳು ಬಂದಿದ್ದಲ್ಲಿ, ಭೂಗಳ್ಳರ ಮೇಲೆ ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಇ) ಈ ರೀತಿ ಅಸಹಾಯಕರ ಅಮಾಯಕರ ಆಸ್ತಿಗಳನ್ನು ವಶಪಡಿಸಿಕೊಳ್ಳುವವರ ವಿರುದ್ಧ ಶಾಶ್ವತವಾಗಿ ಏನಾದರೂ ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ ?

## ಬೆಂಗಳೂರಿನಿಂದ ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆ ವಿಸ್ತರಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೦೧ (೩೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸಂಚಾರ ದಟ್ಟಣೆಯಿಂದ ಸಕಾಲದಲ್ಲಿ ವಿಮಾನ ನಿಲ್ದಾಣಕ್ಕೆ ತೆರಳಲು ತುಂಬಾ ತೊಂದರೆಯಾಗುವುದರಿಂದ ಈ ದಟ್ಟಣೆಯನ್ನು ಕಡಿಮೆ ಮಾಡಲು ಸರ್ಕಾರ ಯಾವಾಗ ಕ್ರಮಕೈಗೊಳ್ಳುವುದು ;

(ಇ) ಹೆಬ್ಬಾಳ ಸುರಂಗ ಮಾರ್ಗ ಕಾಮಗಾರಿಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ , ಈ ಕಾಮಗಾರಿಗೆ ಆಯವ್ಯಯದಲ್ಲಿ ಹಣ ನಿಗದಿಪಡಿಸಲಾಗಿದೆಯೇ ; ಟೆಂಡರ್ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಭೀಮಾ ತೀರದಲ್ಲಿ ಪದೇ ಪದೇ ಗುಂಡಿನ ಸದ್ದು ಉಂಟಾಗುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೦೨ (೩೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಭೀಮಾ ನದಿ ತೀರದಲ್ಲಿ ಪದೇ ಪದೇ ಗುಂಡಿನ ಸದ್ದು ಮೊಳಗುತ್ತಿದ್ದು, ಇದರಿಂದ ಸ್ಥಳೀಯ ಜನರು ತುಂಬಾ ಭಯಭೀತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಪದೇ ಪದೇ ಗುಂಡಿನ ದಾಳಿ ನಡೆಯುತ್ತಿರುವುದನ್ನು ತಡೆಯಲು ಸರ್ಕಾರ ಶಾಶ್ವತ ಪರಿಹಾರ ಕಂಡು ಹಿಡಿಯುವುದೇ ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಹೊಸದಾಗಿ ಬಾರ್ ಮತ್ತು ರೆಸ್ಟೋರೆಂಟ್ ಪ್ರಾರಂಭಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೦೩ (೩೫೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಹೊಸದಾಗಿ ಬಾರ್ ಮತ್ತು ರೆಸ್ಟೋರೆಂಟ್ ಪ್ರಾರಂಭಿಸಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಬಾರ್ ಮತ್ತು ರೆಸ್ಟೋರೆಂಟ್‌ಗೆ ಹೊಸ ಪರವಾನಿಗೆ ಕೊಡುವುದರ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ;

(ಇ) ಅವುಗಳಲ್ಲಿ ಎಷ್ಟು ಅರ್ಜಿಗಳಿಗೆ ಪರವಾನಗಿ ನೀಡಲಾಗಿದೆ ; ಬಾಕಿ ಇರುವ ಅರ್ಜಿಗಳೆಷ್ಟು ; ಬಾಕಿ ಉಳಿಯಲು ಕಾರಣಗಳೇನು ;

(ಈ) ಬಾಕಿ ಉಳಿದಿರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ಪರವಾನಗಿ ನೀಡಲಾಗುವುದು ?

## ಕಾನ್‌ಸ್ಟೇಬಲ್ ಮತ್ತು ಹೆಡ್ ಕಾನ್‌ಸ್ಟೇಬಲ್‌ಗಳ ವರ್ಗಾವಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.(ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೪ (೨೭೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಂತಹ ಜಿಲ್ಲಾ ವರ್ಗಾವಣೆ ಹಾಗೂ ಪತಿ-ಪತ್ನಿ ಪ್ರಕರಣದಲ್ಲಿ ವರ್ಗಾವಣೆ ಕೋರಿ ಕಾನ್‌ಸ್ಟೇಬಲ್ ಮತ್ತು ಹೆಡ್

ಕಾನ್ಸ್‌ಸ್ಟೇಬಲ್ ದರ್ಜೆಯ ಹುದ್ದೆಯಲ್ಲಿರುವವರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ಈ ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಅರ್ಹತೆ ಹೊಂದಿರುವ ಎಷ್ಟು ಜನ ಕಾನ್ಸ್‌ಸ್ಟೇಬಲ್ ಮತ್ತು ಹೆಡ್ ಕಾನ್ಸ್‌ಸ್ಟೇಬಲ್ ದರ್ಜೆಯ ಹುದೆಯಲ್ಲಿರುವವರಿಗೆ ಇದುವರೆಗೆ ವರ್ಗಾವಣೆ ಮಾಡಲಾಗಿದೆ ;

(ಇ) ಈಗಾಗಲೇ ವರ್ಗಾವಣೆಗೆ ಅರ್ಜಿ ಸಲ್ಲಿಸಿ ಇನ್ನೂ ಬಾಕಿ ಉಳಿದಿರುವ ಅರ್ಜಿಗಳನ್ನು ಕೂಡಲೇ ಇತ್ಯರ್ಥ ಪಡಿಸುವ ಕುರಿತು ಸರ್ಕಾರದ ನಿಲುವೇನು ;

(ಈ) ಅರ್ಹತೆ ಹೊಂದಿರುವವರ ಅರ್ಜಿಗಳನ್ನಾದರೂ ಕೂಡಲೇ ವರ್ಗಾವಣೆಗೆ ಪರಿಗಣಿಸಿ ಅವರ ಬಹುಕಾಲದ ಬೇಡಿಕೆಯನ್ನು ಆದಷ್ಟು ಶೀಘ್ರವಾಗಿ ಈಡೇರಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ ?

## ಹಳೆಯ ಪಿಂಚಣಿ ಯೋಜನೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.(ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೫ (೨೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೬ರ ನಂತರದಲ್ಲಿ ನೇಮಕಗೊಂಡ ರಾಜ್ಯ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಸರ್ಕಾರ ಇದುವರೆವಿಗೂ "ಹಳೆ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸದಿರಲು ಕಾರಣಗಳೇನು ;

(ಇ) ಸರ್ಕಾರಿ ನೌಕರರಿಗೆ "ಹಳೆ ಪಿಂಚಣಿ ಯೋಜನೆ" ಯನ್ನು ದೇಶದ ಬಹುತೇಕ ರಾಜ್ಯಗಳು ಮರುಸ್ಥಾಪಿಸಿದ್ದು ಕರ್ನಾಟಕ ರಾಜ್ಯ ಕೂಡ ರಾಜ್ಯ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ"ಯನ್ನು ಜಾರಿಗೊಳಿಸಲು ಈ ಕೂಡಲೇ ಕ್ರಮ ವಹಿಸುವುದೇ ;

(ಈ) ಯಾವ ಕಾಲಮಿತಿಯೊಳಗೆ "ಹಳೆ ಪಿಂಚಣಿ ಯೋಜನೆ" ಯನ್ನು ಸರ್ಕಾರ ಜಾರಿಗೊಳಿಸುವುದು ?

## ಗುತ್ತಿಗೆದಾರರಿಗೆ ನೀಡಲು ಬಾಕಿ ಇರುವ ಮೊತ್ತದ ಕುರಿತು

**ಶ್ರೀ ಸಿ.ಟಿ. ರವಿ. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೬ (೨೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಲಸಂಪನ್ಮೂಲ ಇಲಾಖೆಯ ಅಧೀನದಲ್ಲಿರುವ ನಿಗಮಗಳಲ್ಲಿ ಗುತ್ತಿಗೆದಾರರಿಗೆ ನೀಡಲು ಬಾಕಿ ಇರುವ ಮೊತ್ತ ಎಷ್ಟು ; (ವರ್ಷವಾರು, ನಿಗಮವಾರು ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಎಷ್ಟು ಜನ ಗುತ್ತಿಗೆದಾರರಿಗೆ ಬಾಕಿ ಹಣ ನೀಡಲಾಗಿದೆ ; ನೀಡಿರುವ ಮೊತ್ತ ಎಷ್ಟು ; (ಗುತ್ತಿಗೆದಾರರ ವಿವರವನ್ನು ಅವರು ಪೂರ್ಣಗೊಳಿಸಿರುವ ಕಾಮಗಾರಿಯೊಂದಿಗೆ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಮೀಸಲಿಟ್ಟಿರುವ ಹಣ ಎಷ್ಟು ; ಗುತ್ತಿಗೆದಾರರಿಗೆ ಬಾಕಿ ಹಣ ಪಾವತಿಸಲು ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಬಾಕಿ ಹಣ ಪಾವತಿಸಲಾಗುವುದು ;

(ಈ) ಸರ್ಕಾರದಿಂದ ಬರಬೇಕಿರುವ ಬಾಕಿ ಬಿಲ್ ನೀಡಿಲ್ಲ ಎಂಬ ಕಾರಣ ನೀಡಿ ಗುತ್ತಿಗೆದಾರರು ಆತ್ಮಹತ್ಯೆ ಯತ್ನ ನಡೆಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಬಳಕೆಯಾಗದ ಅನುದಾನವನ್ನು ಸಂಚಿತ ನಿಧಿಯಿಂದ ಹೊರಗೆ ಇಟ್ಟಿರುವ ಬಗ್ಗೆ

**ಶ್ರೀ ಸಿ.ಟಿ. ರವಿ. (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭(೨೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨ – ೨೩ ನೇ ಸಾಲಿನ ಹಣಕಾಸು ವರ್ಷದಲ್ಲಿ ರಾಜ್ಯ ಸಂಚಿತ ನಿಧಿಗೆ ಬಂದಿರುವ ಮೊತ್ತ ಎಷ್ಟು ; ಈ ಪೈಕಿ ಬಳಕೆಯಾಗದ ಹಣ ಎಷ್ಟು ; ಈ ಮೊತ್ತವು ರಾಜ್ಯ ಖಜಾನೆಯಲ್ಲಿ ಸ್ವೀಕೃತವಾಗಿದೆಯೇ ;

(ಆ) ಈ ಮೊತ್ತವನ್ನು ಸಂಚಿತ ನಿಧಿಯಿಂದ ಹೊರಗೆ ಇರಿಸಲಾಗಿದೆಯೇ ; ಈ ಮೊತ್ತನ್ನು ರಿಕವರಿ ಆಫ್ ಓವರ್ ಪೇಮೆಂಟ್ ಎಂದು ವ್ಯಾಖ್ಯಾನಿಸಿರುವುದರ ಅರ್ಥ ಏನು ;

(ಇ) ಕಳೆದ ಒಂದು ವರ್ಷದಿಂದ ಸಂಚಿತ ನಿಧಿಯಿಂದ ಹೊರಗೆ ಇರಿಸಲಾದ ಒಟ್ಟು ಮೊತ್ತ ಎಷ್ಟು ; ಈ ರೀತಿ ಸಂಚಿತ ನಿಧಿಯಿಂದ ಹೊರಗೆ ಇರಿಸಲು ಕಾರಣಗಳೇನು ?

## ಸಣ್ಣ ನೀರಾವರಿ ಇಲಾಖೆಯಲ್ಲಿ ಬಾಕಿ ಇರುವ ಕಾಮಗಾರಿಗಳ ಕುರಿತು

**ಶ್ರೀ ಸಿ.ಟಿ. ರವಿ. (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೮ (೨೯೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧-೨೨ ನೇ ಸಾಲಿನಿಂದ ಇಲ್ಲಿಯವರೆಗೆ ಚಿಕ್ಕಮಗಳೂರು ವಿಧಾನಸಭಾ ಕೇತ್ರ ವ್ಯಾಪ್ತಿಗೆ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾಗಿರುವ ಅನುದಾನವೆಷ್ಟು ; ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಕಾಮಗಾರಿವಾರು ಅನುದಾನ ಹಂಚಿಕೆ ವಿವರ ಒದಗಿಸುವುದು)

(ಆ) ಈ ಪೈಕಿ ಪೂರ್ಣಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು ; ಕಾಮಗಾರಿಗಳು ಪೂರ್ಣಗೊಳ್ಳದಿರಲು ಕಾರಣಗಳೇನು ;

(ಇ) ಬಾಕಿ ಇರುವ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವುದು)

## ಜನತಾ ದರ್ಶನ ವೇಳೆ ಸ್ವೀಕೃತಗೊಂಡಿರುವ ಅರ್ಜಿಗಳಿಗೆ ಪರಿಹಾರ ಕಲ್ಪಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೯ (೨೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಿಂದ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಂಡಿದ್ದ ಜನತಾ ದರ್ಶನದಲ್ಲಿ ಜೂನ್, ೨೦೨೪ರ ಅಂತ್ಯಕ್ಕೆ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅರ್ಜಿಗಳ ಪೈಕಿ ಎಷ್ಟು ಅರ್ಜಿಗಳಿಗೆ ಪರಿಹಾರ ಕಲ್ಪಿಸಲಾಗಿದೆ ; ಬಾಕಿ ಇರುವ ಅರ್ಜಿಗಳೆಷ್ಟು ; ಬಾಕಿ ಅರ್ಜಿಗಳ ವಿಲೇವಾರಿಗೆ

ಕೈಗೊಂಡಿರುವ ಕ್ರಮಗಳೇನು ; (ಸಮಗ್ರ ವಿವರವನ್ನು ಇಲಾಖೆವಾರು ಒದಗಿಸುವುದು)

(ಇ) ಜಿಲ್ಲಾ ಮಟ್ಟದಲ್ಲಿ ಸಚಿವರಿಂದ ಎಷ್ಟು ಬಾರಿ ಜನತಾ ದರ್ಶನ ನಡೆದಿದೆ ; ಸಚಿವರಿಂದ ನಿಯಮಿತವಾಗಿ ಜನತಾ ದರ್ಶನ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಜನತಾ ದರ್ಶನ ವೇಳೆ ಎಷ್ಟು ಜನ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ದೂರುಗಳು ಬಂದಿವೆ ; ಈ ದೂರುಗಳ ಆಧಾರದ ಮೇಲೆ ಸದರಿ ಅಧಿಕಾರಿ/ನೌಕರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಬನಶಂಕರಿಯಿಂದ ತಲಘಟ್ಟಪುರದವರೆಗೆ ಫ್ಲೈಓವರ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎಸ್. ರವಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦ (೨೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಬನಶಂಕರಿಯಿಂದ ತಲಘಟ್ಟಪುರದವರೆಗಿನ ರಸ್ತೆಯಲ್ಲಿ ವಾಹನಗಳ ದಟ್ಟಣೆ ದಿನೇ ದಿನೇ ಹೆಚ್ಚಾಗುತ್ತಿದ್ದು, ಈ ರಸ್ತೆಯಲ್ಲಿ ಸುಗಮ ಸಂಚಾರ ದುಸ್ತರವಾಗಿ ಸಾರ್ವಜನಿಕರಿಗೆ ಬಹಳ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬನಶಂಕರಿಯಿಂದ ತಲಘಟ್ಟಪುರದವರೆಗಿನ ರಸ್ತೆಯಲ್ಲಿ ಉಂಟಾಗುತ್ತಿರುವ ವಾಹನ ದಟ್ಟಣೆಯನ್ನು ಸುಗಮಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ರಸ್ತೆಯಲ್ಲಿ ಫ್ಲೈ ಓವರ್ ನಿರ್ಮಾಣ ಅಥವಾ ಬೇರೆ ಯಾವುದಾದರೂ ಯೋಜನೆಯನ್ನು ರೂಪಿಸಲು ಸರ್ಕಾರ ಕ್ರಮ ವಹಿಸುವುದೇ ; (ವಿವರ ನೀಡುವುದು)

## ರಾಜ್ಯದಲ್ಲಿ ಕುಸಿಯುತ್ತಿರುವ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೧ (೨೮೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ತಾಲ್ಲೂಕುವಾರು ಅಂತರ್ಜಲ ಮಟ್ಟದ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಕುಸಿಯುತ್ತಿರುವ ಅಂತರ್ಜಲದ ಮಟ್ಟವನ್ನು ಹೆಚ್ಚಿಸಲು ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಕುಸಿಯುತ್ತಿರುವ ಅಂತರ್ಜಲದ ಮಟ್ಟವನ್ನು ಹೆಚ್ಚಿಸಲು ಸರ್ಕಾರ ರೂಪಿಸಿರುವ ಯೋಜನೆಗಳಿಗಾಗಿ ಕಳೆದ ೫ ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಯೋಜನೆಗಳಿಂದ ಅಂತರ್ಜಲದ ಮಟ್ಟ ಹೆಚ್ಚಳವಾಗಿದೆಯೇ ಅಥವಾ ಇಲ್ಲವೇ ? (ತಾಲ್ಲೂಕುವಾರು ವಿವರ ನೀಡುವುದು)

## ಸೈಬರ್ ಕ್ರೈಂಗಳನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೨ (೨೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇಂಟರ್‌ನೆಟ್/ಮೊಬೈಲ್ ಫೋನ್/ಆನ್‌ಲೈನ್ ಮೂಲಕ ವಂಚನೆಗೊಳಗಾಗುತ್ತಿರುವವರ ಸಂಖ್ಯೆ ಪ್ರತಿದಿನ ಏರಿಕೆಯಾಗುತ್ತಿದ್ದು, ಇದಕ್ಕೆ ಅನುಸಾರವಾಗಿ ಸೈಬರ್ ಕ್ರೈಂ ಕೇಸ್‌ಗಳನ್ನು ಇತ್ಯರ್ಥಪಡಿಸಲು ಪ್ರತ್ಯೇಕ ಸಿಬ್ಬಂದಿಗಳನ್ನು ನೇಮಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಪೊಲೀಸ್ ಠಾಣೆಗಳನ್ನು ಮತ್ತು ಸಿಬ್ಬಂದಿಗಳನ್ನು ನೇಮಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಇಂಟರ್‌ನೆಟ್/ಮೊಬೈಲ್ ಫೋನ್/ಆನ್‌ಲೈನ್ ಬಳಸಿ ಹಣ ವಂಚನೆ ಮಾಡುವ (ಸೈಬರ್ ಕ್ರೈಂ) ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಈ ಪೈಕಿ ಎಷ್ಟು ಪ್ರಕರಣಗಳಿಗೆ ಕೇಸ್ ದಾಖಲಿಸಲಾಗಿದೆ ; ಎಷ್ಟು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ; ಈ ಮೂಲಕ ಎಷ್ಟು ಹಣ ವಂಚಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಸೈಬರ್ ಕ್ರೈಂ ಕೇಸ್‌ಗಳನ್ನು ಇತ್ಯರ್ಥಪಡಿಸಲು ಸಿಬ್ಬಂದಿಗಳಿಗೆ ಬೇಕಾದ ಆಧುನಿಕ ತಂತ್ರಜ್ಞಾನದ ಪರಿಕರಗಳು ಮತ್ತು ತರಬೇತಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

# ಮದ್ಯ ಮಾರಾಟ ಮಳಿಗೆಗಳಲ್ಲಿ ಆನ್‌ಲೈನ್ ಸೇವೆ ಅಳವಡಿಸುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೩ (೨೮೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದಿಂದ ಪರವಾನಗಿ ಪಡೆದಿರುವ ಮದ್ಯ ಮಾರಾಟ ಸನ್ನದುದಾರರ ಅಂಗಡಿಗಳಲ್ಲಿ ಮದ್ಯವನ್ನು ಖರೀದಿ ಮಾಡಿ ಸ್ವಿಗ್ಗಿ/ಝೊಮೊಟೊ ಮಾದರಿಯಲ್ಲಿ ಆನ್‌ಲೈನ್ ಮೂಲಕ ಗ್ರಾಹಕರು ತಮ್ಮ ಮನೆಗಳಿಗೆ ತರಿಸಿಕೊಳ್ಳಲು ಅನುಮತಿ ಇದೆಯೇ ; ಇದ್ದಲ್ಲಿ, ಈ ರೀತಿ ಸೇವೆ ನೀಡಲು ಅಬಕಾರಿ ಕಾನೂನುಗಳಲ್ಲಿ ಅವಕಾಶಗಳಿವೆಯೇ ; ಇಲ್ಲದಿದ್ದಲ್ಲಿ,ಇದಕ್ಕಿರುವ ಕಾನೂನು ತೊಡಕುಗಳೇನು ; (ಆದೇಶಗಳ ಸಹಿತ ಸವಿವರವಾದ ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಪರವಾನಗಿ ಪಡೆದಿರುವ ಮದ್ಯ ಮಾರಾಟ ಸನ್ನದುದಾರರ ಅಂಗಡಿಗಳಲ್ಲಿಯೇ ಮದ್ಯವನ್ನು ಖರೀದಿ ಮಾಡಿ ಗ್ರಾಹಕರಿರುವ ಸ್ಥಳಕ್ಕೆ ತಲುಪಿಸುವುದರಿಂದ ಸರ್ಕಾರದ ಆದಾಯವು ಹೆಚ್ಚಾಗಿ, ಮದ್ಯ ಸೇವಿಸಿ ವಾಹನ ಚಾಲನೆ ಮಾಡಿ ಉಂಟಾಗುವ ಅಪಘಾತಗಳು ಸಹ ಕಡಿಮೆಯಾಗುವುದರಿಂದ ಈ ರೀತಿ ಸೇವೆಯನ್ನು ನೀಡಲು ಸರ್ಕಾರವು ಯಾವುದೇ ಅಡ್ಡಿಯನ್ನು ಉಂಟು ಮಾಡದಿರುವುದು ಒಳಿತಲ್ಲವೇ ? (ವಿವರವಾದ ಮಾಹಿತಿ ನೀಡುವುದು)

## "ದ ಪಾಲಿಸಿ ಫ್ರಂಟ್" ಕಂಪನಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೪ (೨೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) "ದ ಪಾಲಿಸಿ ಫ್ರಂಟ್" ಎಂಬ ನಿಗೂಡ ಕಂಪನಿಗೆ ರೂ.೫೦ ಕೋಟಿ ಮೊತ್ತವನ್ನು ಯಾವ ಕಾರಣಕ್ಕಾಗಿ ನೀಡಲಾಗಿದೆ ; ಸದರಿ ಕಂಪನಿಯು ಸರ್ಕಾರಕ್ಕೆ ಯಾವ ರೀತಿಯ ಸೇವೆಯನ್ನು ಒದಗಿಸುತ್ತಿದೆ ; (ವಿವರ ನೀಡುವುದು)

(ಆ) ಈ ಕಂಪನಿಯ ವಿಳಾಸ ಎಲ್ಲಿದೆ ; ಸದರಿ ಕಂಪನಿಯ ಮಾಲೀಕರು ಹಾಗೂ ನಿರ್ದೇಶಕರುಗಳ ಹೆಸರಿನೊಂದಿಗೆ ಈ ಕಂಪನಿಯು ಯಾವಾಗ ಪ್ರಾರಂಭವಾಯಿತು ಹಾಗೂ ಸದರಿ ಕಂಪನಿಯ ಮೂಲ ಬಂಡವಾಳ ಎಷ್ಟು; (ವಿವರ ನೀಡುವುದು)

(ಇ) ಸದರಿ ಕಂಪನಿಗೆ ಗುತ್ತಿಗೆ ನೀಡಿರುವ ಕುರಿತು ಕಡತದ ಸಮಗ್ರ ದಾಖಲೆಗಳೊಂದಿಗೆ ಯಾವ ಕಾರಣಕ್ಕಾಗಿ ವಾರ್ಷಿಕ ೭.೨ ಕೋಟಿ ರೂ.ಗಳ ಗುತ್ತಿಗೆ ನೀಡಲಾಗುತ್ತಿದೆ ; ಕಡತದ ಪ್ರತಿ ಹಾಗೂ ಕಡತದಲ್ಲಿನ ಟಿಪ್ಪಣಿ ಪ್ರತಿಗಳ ಸಮಗ್ರ ವಿವರ ನೀಡುವುದು ;

(ಈ) SC/ST ಉಪಯೋಜನೆಯ ಅನುದಾನ ರೂ.೧೪.೮೬ ಕೋಟಿ ರೂಗಳನ್ನು "ದ ಪಾಲಿಸಿ ಫ್ರಂಟ್" ಎಂಬ ಕಂಪನಿಗೆ ಯಾವ ಆಧಾರದಲ್ಲಿ ವರ್ಗಾಯಿಸಲಾಯಿತು ? (ವಿವರ ನೀಡುವುದು)

## ಕುಡಿಯುವ ನೀರಿನ ಸಮಸ್ಯೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೫ (೨೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲಾಗಿದೆ ;

(ಇ) ಸ್ಮಾರ್ಟ್ ಸಿಟಿ ಯೊಜನೆಯಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು ;

(ಈ) ಗಾರ್ಡನ್ ಸಿಟಿ ಈಗ ಟ್ಯಾಂಕರ್ ಸಿಟಿಯಾಗಿ ಬದಲಾಗುತ್ತಿರುವ ಕುರಿತು ಸರ್ಕಾರದ ನಿಲುವೇನು ?

## ಮಹಿಳೆಯರು ಕಾಣೆಯಾಗುತ್ತಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೬ (೨೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೧ ವರ್ಷದಲ್ಲಿ ರಾಜ್ಯದಿಂದ ಎಷ್ಟು ಯುವತಿಯರು/ ಮಹಿಳೆಯರು/ಹೆಣ್ಣು ಮಕ್ಕಳು ಕಾಣೆಯಾಗಿರುತ್ತಾರೆ ; (ಜಿಲ್ಲಾವಾರು, ಜಾತಿವಾರು ಮಾಹಿತಿ ನೀಡುವುದು)

(ಆ) ಕಳೆದ ೧ ವರ್ಷದಲ್ಲಿ ರಾಜ್ಯದಿಂದ ಎಷ್ಟು ಯುವತಿಯರು / ಮಹಿಳೆಯರು/ಹೆಣ್ಣು ಮಕ್ಕಳು ಪ್ರೀತಿಯ ಹೆಸರಿನಲ್ಲಿ ಮನೆ ಬಿಟ್ಟು ಹೋಗಿರುವ ಪ್ರಕರಣಗಳು ದಾಖಲಾಗಿವೆ ; ಇದರಲ್ಲಿ ಹಿಂದು ಧರ್ಮದ ಯುವತಿಯರು/ಮಹಿಳೆಯರು/ಹೆಣ್ಣು ಮಕ್ಕಳು ಮುಸ್ಲಿಂ

ಧರ್ಮದ ಯುವಕರೊಂದಿಗೆ ತೆರಳಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯುವತಿಯರು/ಮಹಿಳೆಯರು/ಹೆಣ್ಣು ಮಕ್ಕಳು ಕಾಣೆಯಾದ ಬಳಿಕ ಪತ್ತೆಯಾದ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಯುವತಿಯರು/ಮಹಿಳೆಯರು/ಹೆಣ್ಣು ಮಕ್ಕಳ ಅಪಹರಣ ಮತ್ತು ಸಾರ್ವಜನಿಕವಾಗಿ ಹಲ್ಲೆಯ ಪ್ರಕರಣಗಳು ಎಷ್ಟು; ಕಳೆದ ೨ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಐ.ಎಂ.ಐ ಹಗರಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೭ (೨೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಐ.ಎಂ.ಐ ಹಗರಣದಲ್ಲಿ ಐ.ಪಿ.ಎಸ್ ಅಧಿಕಾರಿಗಳು ೨೦ ಕೋಟಿಗೂ ಅಧಿಕ ಹಣ ಪಡೆದಿರುವುದಾಗಿ ಸಿ.ಬಿ.ಐ ಚಾರ್ಜ್‌ಶೀಟ್‌ನಲ್ಲಿ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಐ.ಪಿ.ಎಸ್ ಅಧಿಕಾರಿಗಳು ೨೦ ಕೋಟಿಗೂ ಅಧಿಕ ಹಣ ಪಡೆದಿರುವ ಆರೋಪದ ಬಗ್ಗೆ ಲೋಕಾಯುಕ್ತ ಎ.ಸಿ.ಬಿ, ಈಡಿ, ಇನ್ ಕಮ್ ಟ್ಯಾಕ್ಸ್ ವಿಭಾಗಗಳಿಗೆ ಮಾಹಿತಿ ನೀಡಲಾಗಿದೆಯೇ; ಇಲ್ಲವಾದಲ್ಲಿ ನೀಡದಿರಲು ಕಾರಣವೇನು;

(ಇ) ಕೇವಲ ಭ್ರಷ್ಟಾಚಾರದ ಆರೋಪದ ಕಾರಣಕ್ಕಾಗಿ ರಾಜಕಾರಣಿಗಳು ರಾಜೀನಾಮೆ ನೀಡಿ ಜೈಲಿಗೆ ಹೋಗಿರುವಾಗ ಐ.ಪಿ.ಎಸ್ ಅಧಿಕಾರಿಗಳನ್ನು ಬಂಧಿಸದಿರಲು ಕಾರಣವೇನು ;

(ಈ) ಐ.ಎಂ.ಐ ಹಗರಣಕ್ಕೆ ಸಂಬಂಧಿಸಿದಂತೆ ೧೦೦೦೦ ಪುಟಗಳ ಚಾರ್ಜ್‌ಶೀಟ್ ದಾಖಲಾದರೂ ಐ.ಪಿ.ಎಸ್ ಅಧಿಕಾರಿಗಳಿಗೆ ಯಾರ ಒತ್ತಡದಲ್ಲಿ ಪೋಸ್ಟಿಂಗ್ ನೀಡಲಾಗಿದೆ ; ಐ.ಪಿ.ಎಸ್ ಅಧಿಕಾರಿಗಳ ಮೇಲೆ ಭ್ರಷ್ಟಾಚಾರದ ಆರೋಪ ಇರುವ ಕುರಿತು ಕೇಂದ್ರ ಸರ್ಕಾರಕ್ಕೆ ಅಮಾನತ್ತಿಗೆ ಅನುಮತಿ ಕೋರಲಾಗಿ ಪತ್ರ ಬರೆಯಲಾಗಿದೆಯೇ; ಇಲ್ಲವಾದಲ್ಲಿ ಪತ್ರ ಬರಯದಿರಲು ಕಾರಣವೇನು ;

(ಉ) ನ್ಯಾಯಲಯಕ್ಕೆ ಚಾರ್ಜ್‌ಶೀಟ್ ದಾಖಲಾದ ಸರ್ಕಾರಿ ನೌಕರರ ಮೇಲೆ ಸಾಮಾನ್ಯವಾಗಿ ಕೈಗೊಳ್ಳುವ ಕ್ರಮಗಳೇನು ; ಈ ಕುರಿತು ಇರುವ ನಿಯಮಗಳೇನು ?

## ಡ್ರಗ್ಸ್ ದಂಧೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೮ (೨೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಡ್ರಗ್ಸ್ ದಂಧೆಯ ಕೇಸ್‌ನಲ್ಲಿ ಬಂಧಿತರಾದ ವ್ಯಕ್ತಿಗಳ ಸಂಖ್ಯೆ ಎಷ್ಟು ; (ಹೆಸರಿನೊಂದಿಗೆ ವಿವರ ನೀಡುವುದು)

(ಆ) ಸದರಿ ಡ್ರಗ್ಸ್ ದಂಧೆಯ ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ಸಾಬೀತಾಗಿ ಶಿಕ್ಷೆಯಾಗಿದೆ ; (ಪ್ರಕರಣದೊಂದಿಗೆ ವಿವರ ನೀಡುವುದು)

(ಇ) ಮೇಲ್ಕಂಡ ಅವಧಿಯಲ್ಲಿ ಡ್ರಗ್ಸ್ ದಂಧೆಯಲ್ಲಿ ಶಾಮೀಲಾಗಿರುವ ಕುರಿತು ಎಷ್ಟು ಪೊಲೀಸ್ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಾಗಿದೆ ; ಅಮಾನತ್ತುಗೊಂಡ ಪೊಲೀಸ್ ಅಧಿಕಾರಿಗಳ ಸಂಖ್ಯೆ ಎಷ್ಟು; (ಹೆಸರಿನೊಂದಿಗೆ ವಿವರ ನೀಡುವುದು)

(ಈ) ಬೆಂಗಳೂರು ಮಹಾನಗರವು ಡ್ರಗ್ಸ್ ದಂಧೆಯ ರಾಜಧಾನಿಯಾಗಿರುವ ಕುರಿತು ಸರ್ಕಾರದ ನಿಲುವೇನು ?

## ರಾಜ್ಯ ಪೊಲೀಸ್ ಇಲಾಖೆಯ ಸಿಬ್ಬಂದಿ/ಅಧಿಕಾರಿಗಳಿಗೆ ದೈಹಿಕ ಸಾಮರ್ಥ್ಯ ಹೆಚ್ಚಿಸುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೯೯ (೩೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಪೊಲೀಸರಿಗೆ ಇರುವ ನಿವೃತ್ತಿಯ ವಯಸ್ಸೆಷ್ಟು ; ಇವರುಗಳಲ್ಲಿ ಕೆಳಹಂತದ ಕಾನ್ಸ್‌ಟೇಬಲ್/ ಹೆಡ್ ಕಾನ್ಸ್‌ಟೇಬಲ್‌ಗಳಂತಹ ಸಿಬ್ಬಂದಿಗಳು ದೈಹಿಕ ಸಾಮರ್ಥ್ಯವನ್ನು ಹೊಂದಿರುವ ಕೆಲಸಗಳಲ್ಲಿ ಈ ವಯಸ್ಸಿನವರೆಗೂ ಕಾರ್ಯನಿರ್ವಹಿಸಲು ಸಾಧ್ಯವೇ ; ಇಲ್ಲವಾದಲ್ಲಿ, ಈ ಕುರಿತು ಇಲಾಖೆಯ ಕ್ರಮಗಳೇನು ;

(ಆ) ಪೊಲೀಸ್ ಇಲಾಖೆಯಲಿನ್ನ ಕಾನ್ಸ್‌ಟೇಬಲ್/ಹೆಡ್ ಕಾನ್ಸ್‌ಟೇಬಲ್‌ಗಳಂತಹ ಕೆಳಹಂತದ ಸಿಬ್ಬಂದಿಗಳಿಗೆ ಅವರ ಪೂರ್ಣ ಗ್ರಾಚ್ಯೂಟಿಗಳನ್ನು ನೀಡುವ ಜೊತೆಗೆ ನಿವೃತ್ತಿ ವಯಸ್ಸನ್ನು ಕಡಿಮೆ ಮಾಡಲು ಸರ್ಕಾರದ ಕ್ರಮಗಳೇನು ; (ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ವಯಸ್ಸಾದಂತೆ ಮನುಷ್ಯನ ದೈಹಿಕ ಸಾಮರ್ಥ್ಯ ಕುಸಿಯುತ್ತಿದ್ದು, ಪೊಲೀಸ್ ಇಲಾಖೆಯಲ್ಲಿನ ಸಿಬ್ಬಂದಿಗಳಿಗೆ ಮುಖ್ಯವಾಗಿ ಮಾನಸಿಕ ಮತ್ತು ದೈಹಿಕ ಸಾಮರ್ಥ್ಯದ ಅವಶ್ಯಕತೆಯಿದ್ದು, ಈ ಕುರಿತಾಗಿ ಒಂದು ಸಮಿತಿಯನ್ನು ರಚಿಸಿ ಇದರ ಸಾಧಕ ಬಾಧಕಗಳನ್ನು ಚರ್ಚಿಸಿ ವರದಿ ಪಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ?(ವಿವರಗಳೊಂದಿಗೆ ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯ ಸಿಬ್ಬಂದಿ/ಅಧಿಕಾರಿಗಳಿಗೆ ವಾರದ ರಜೆ ನೀಡುತ್ತಿರುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೦ (೩೨೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೊಲೀಸ್ ಇಲಾಖೆಯಲ್ಲಿ ಬೇರೆ ಇಲಾಖೆಗಳಂತೆಯೇ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ವಾರದ ಮತ್ತು ವಿಶೇಷ ರಜೆಗಳನ್ನು ನೀಡಲಾಗುತ್ತಿದೆಯೇ; ಇದ್ದಲ್ಲಿ, ಯಾರು ಯಾರಿಗೆ ಯಾವ ರೀತಿಯಲ್ಲಿ ರಜೆಗಳನ್ನು ನೀಡಲಾಗುತ್ತಿದೆ ;

(ಆ) ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ದೈಹಿಕ ಮತ್ತು ಮಾನಸಿಕ ವಿಶ್ರಾಂತಿಗೆ ರಜೆಗಳು ಅವಶ್ಯವಾಗಿದ್ದು, ಎಲ್ಲಾ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ವಾರದ ರಜೆಯನ್ನು ನೀಡಲು ಇಲಾಖೆಯ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಪೊಲೀಸ್ ಇಲಾಖೆಯ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ನಿಗದಿಪಡಿಸಿದ ಕೆಲಸದ ಅವಧಿ ಎಷ್ಟು; ಈ ಕೆಲಸದ ಸಮಯವನ್ನು ತುರ್ತು ಸಂದರ್ಭಗಳನ್ನು ಹೊರತುಪಡಿಸಿ ೮ ಗಂಟೆಗಳಿಗೆ ಸೀಮಿತಗೊಳಿಸಲು ಇಲಾಖೆಯ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## BWSSBಯ ಸಂಸ್ಕರಿಸಿದ ನೀರನ್ನು ಕೆರೆಗೆ ತುಂಬಿಸುತ್ತಿರುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೧ (೩೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಬೆಂಗಳೂರಿನ ಎಷ್ಟು ಕಡೆಗಳಲ್ಲಿ ನೀರು ಸಂಸ್ಕರಣ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; ಅವುಗಳ ನಿರ್ಮಾಣಕ್ಕೆ ತಗುಲಿದ ವೆಚ್ಚ ಮತ್ತು ಅವುಗಳ ಸಾಮರ್ಥ್ಯ ಎಷ್ಟು ; ಅವುಗಳಲ್ಲಿನ ಸಂಸ್ಕರಿಸಿದ ನೀರನ್ನು ಬಳಸಿಕೊಳ್ಳಲಾಗುವುದೆ ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಕಳೆದ ಬೇಸಿಗೆ ಸಮಯದಲ್ಲಿ ಜಲಮಂಡಳಿಯು ಸಂಸ್ಕರಿಸಿದ ನೀರನ್ನು ಬೆಂಗಳೂರಿನ ಕೆರೆಗಳಿಗೆ ತುಂಬಿಸಲು ಬಳಸಲಾಗಿದೆ ಎಂದು ತಿಳಿದು ಬಂದಿದ್ದು, ಯಾವ ಯಾವ ಕೆರೆಗಳಿಗೆ ಈ ನೀರನ್ನು ತುಂಬಿಸಲಾಗಿದೆ ; ಇದರಿಂದಾದ ಅನುಕೂಲಗಳೇನು ; (ಮಾಹಿತಿ ಒದಗಿಸುವುದು)

(ಇ) ಸಂಸ್ಕರಿಸಿದ ನೀರನ್ನು ಬಳಸಬಹುದಾದಂತಹ ಉದ್ಯಮಗಳಲ್ಲಿ ಕಾಮಗಾರಿಗಳಲ್ಲಿ ಕಡ್ಡಾಯವಾಗಿ ಸಂಸ್ಕರಿಸಿದ ನೀರನ್ನೇ

ಬಳಸುವಂತೆ ಮಾಡಲು ಇಲಾಖೆಯ ಕ್ರಮಗಳೇನು ?
(ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಬೆಂಗಳೂರಿನ ಹೆಬ್ಬಾಳ ಕೆರೆಯ ಅಭಿವೃದ್ಧಿ ಕುರಿತು

**ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೨ (೩೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಐತಿಹಾಸಿಕ ಹೆಬ್ಬಾಳ ಕೆರೆಯ ಅಭಿವೃದ್ಧಿ ಕಾರ್ಯವು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕೆರೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಕೆರೆಯ ಅಭಿವೃದ್ಧಿಗೆ ಅನುದಾನ ಕೊರತೆ ಇದೆಯೇ ; ಇಲ್ಲದಿದ್ದಲ್ಲಿ, ಕೆರೆಯ ಅಭಿವೃದ್ಧಿ ಕಾರ್ಯಕ್ಕೆ ಇರುವ ತೊಂದರೆಗಳೇನು ; (ವಿವರ ನೀಡುವುದು)

(ಇ) ಈ ಕೆರೆಯ ಬಹಳಷ್ಟು ಭಾಗವನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅತಿಕ್ರಮಣ ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಸ ಹಾಗೂ ಮತ್ತಿತರ ತ್ಯಾಜ್ಯವನ್ನು ಸದರಿ ಕೆರೆಗೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸದರಿ ಕೆರೆಯ ಅಭಿವೃದ್ಧಿಗೆ ಸರ್ಕಾರ ಯಾವ ಯೋಜನೆ ಹಮ್ಮಿಕೊಂಡಿದೆ ಮತ್ತು ಕೆರೆಯ ಅಭಿವೃದ್ಧಿಗೆ ಸರ್ಕಾರ ಎಷ್ಟು ಹಣವನ್ನು ಮೀಸಲಿರಿಸಿದೆ ; (ವಿವರ ನೀಡುವುದು)

(ಊ) ಪ್ರಸ್ತುತ ಸದರಿ ಕೆರೆಯ ನಿರ್ವಹಣೆಯನ್ನು ಯಾರು ಮಾಡುತ್ತಿದ್ದಾರೆ ? (ವಿವರ ನೀಡುವುದು)

## ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೩ (೪೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಗುರುತಿಸಲು ಸರ್ಕಾರದ ಬಳಿಯಿರುವ ನೀತಿ ನಿಯಮಗಳೇನು ;

(ಆ) ಇವರು ಪ್ರವಾಸಿ ವೀಸಾ ಪಡೆದು ಭಾರತಕ್ಕೆ ಬಂದು ವೀಸಾ ಅವಧಿ ಮುಗಿದ ಮೇಲೂ ಅಕ್ರಮವಾಗಿ ದೇಶದಲ್ಲಿ ನೆಲೆಸಿ ಸಮಾಜ ಬಾಹಿರ ಕೃತ್ಯದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇಂತಹ ಅಕ್ರಮ ವಲಸಿಗಳು ತಾಂತ್ರಿಕ ನೈಪುಣ್ಯತೆ ಪಡೆದಿದ್ದು, ಅಮಾಯಕ ಗ್ರಾಮೀಣ ಅನಕ್ಷರಸ್ಥ ಬಡಜನರ ಬ್ಯಾಂಕ್ ಖಾತೆಗಳಲ್ಲಿನ ಹಣ ದೋಚುತ್ತಿದ್ದು ಇಂತಹ ಪ್ರಕರಣಗಳಲ್ಲಿ ಹಣ ಕಳೆದುಕೊಂಡವರಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಇವರು ಅಕ್ರಮವಾಗಿ ಗಾಂಜಾ, ಅಫೀಮು, ಚರಸ್ ಮಾರಾಟ ದಂಧೆಯಲ್ಲಿ ತೊಡಗಿದ್ದು, ಇದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಅಕ್ರಮ ವಿದೇಶಿ ವಲಸಿಗರ ವಿರುದ್ಧ ಸರ್ಕಾರ

ಯಾವ ಕ್ರಮ ಕೈಗೊಂಡಿದೆ ? (ಕಳೆದ ಮೂರು ವರ್ಷದ ಮಾಹಿತಿ ನೀಡುವುದು)

## ಕೆರೆಗಳ ಅಭಿವೃದ್ಧಿ ಮತ್ತು ಅಂತರ್ಜಲ ಕುಸಿತದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೪ (೪೧೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಕೆರೆಗಳ ಹೂಳೆತ್ತುವ ಕಾರ್ಯ ಕೈಗೊಳ್ಳಲಾಗಿದೆ ; ಇದಕ್ಕಾಗಿ ಎಷ್ಟು ಹಣ ಖರ್ಚಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೂಳೆತ್ತುವ ಕಾರ್ಯ ಪ್ರಗತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; ಇದಕ್ಕಾಗಿ ಸರ್ಕಾರ ಮೀಸಲಿಟ್ಟ ಹಣ ಎಷ್ಟು ; ಯಾವ ಕಾಲಮಿತಿಯಲ್ಲಿ ಈ ಕಾರ್ಯ ಪೂರ್ಣಗೊಳಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಎಷ್ಟು ಕೆರೆಗಳ ಹೂಳು ತೆಗೆಯಲಾಗಿದೆ ; ಇದಕ್ಕಾಗಿ ಈ ಯೋಜನೆಯಡಿ ಎಷ್ಟು ಮಾನವ ದಿನಗಳನ್ನು ಸೃಜಿಸಲಾಗಿದೆ ಹಾಗೂ ಇದಕ್ಕೆ ಖರ್ಚು ಮಾಡಲಾದ ಹಣ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಅಂತರ್ಜಲ ತೀವ್ರ ಪ್ರಮಾಣದಲ್ಲಿ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ಜಿಲ್ಲೆಗಳಲ್ಲಿ ಅಂತರ್ಜಲ ಯಾವ ಪ್ರಮಾಣದಲ್ಲಿ ಕುಸಿದಿದೆ ಅವುಗಳ ಪೈಕಿ ಕೆಂಪು ವಲಯದಲ್ಲಿರುವ ಜಿಲ್ಲೆ ಮತ್ತು ತಾಲ್ಲೂಕುಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

# ಅಬಕಾರಿ ಇಲಾಖೆಯ ವರಮಾನ ಮತ್ತು ಪರವಾನಿಗೆ ನಿಯಮಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೨೫ (೪೧೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ವರಮಾನಕ್ಕೆ ನಿಗಧಿಪಡಿಸಲಾದ ಗುರಿ ಎಷ್ಟು; ಮತ್ತು ಸರ್ಕಾರಕ್ಕೆ ಬಂದಿರುವ ವರಮಾನ ಎಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ವಿದಧ ಮದ್ಯದಂಗಡಿಗಳಿಗೆ ಪರವಾನಿಗೆಗಳನ್ನು ನೀಡಲಾಗುತ್ತಿದೆ ; ಈ ಪರವಾನಿಗೆ ಪಡೆಯಲು ಇರುವ ಮಾನದಂಡಗಳೇನು ; ಮದ್ಯದಂಗಡಿ ಪರವಾನಿಗೆ ಪಡೆದವರು ಮದ್ಯದಂಗಡಿ ಹಾಗೂ ಬಾರ್‌ಗಳಲ್ಲಿ ನಿಯಮಾವಳಿಗಳ ಸೂಚನಾ ಫಲಕಗಳನ್ನು ಪ್ರದರ್ಶಿಸಲಾಗುತ್ತಿದೆಯೇ ;

(ಇ) ಖಾಸಗಿ ಬಾರ್ ಮತ್ತು ವೈನ್ ಶಾಪ್ ಮಾಲೀಕರು ಮನಬಂದಂತೆ ಮದ್ಯದ ದರ ಹೆಚ್ಚು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ಯಾವ ವರ್ಗದ ಪರವಾನಗಿಗಳಿಗೆ ಗರಿಷ್ಠ ಮಾರಾಟ ದರದ ಮೇಲೆ ಎಷ್ಟು ಪ್ರತಿಶತಃ ದರ ಹೆಚ್ಚಳ ಮಾಡಲು ಸರ್ಕಾರದ ನಿಯಮಾವಳಿಯಲ್ಲಿ ಅವಕಾಶವಿದೆ ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಈ) ಎಂ.ಎಸ್.ಐ.ಎಲ್ ಮದ್ಯದಂಗಡಿಗಳನ್ನು ತೆರೆಯಲು ಪರವಾನಿಗೆ ಪಡೆಯಲು ಇರುವ ಮಾನದಂಡವೇನು ; ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಎಂ.ಎಸ್.ಐ.ಎಲ್ ಮಳಿಗೆಗಳಿಗೆ ಪರವಾನಿಗೆ ನೀಡಲಾಗಿದೆ ? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಹಳೆ ಪಿಂಚಣಿ ಯೋಜನೆ ಜಾರಿಗೊಳಿಸುವ ಬಗ್ಗೆ

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೨೬ (೩೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ: ೦೧-೦೪-೨೦೦೬ರಿಂದ ಜಾರಿಗೆ ಬಂದಿರುವ ಹೊಸ ಪಿಂಚಣಿ ಯೋಜನೆಯಿಂದ (ಎನ್.ಪಿ.ಎಸ್) ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಪಿಂಚಣಿಯಿಂದ ವಂಚಿತರಾಗಿ ಅತೀವ ಆರ್ಥಿಕ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುವ ರಾಜ್ಯಗಳಲ್ಲಿ ಅಧ್ಯಯನ ನಡೆಸಿ, ವರದಿಯನ್ನು ಸಲ್ಲಿಸುವಂತೆ ಸರ್ಕಾರ ಅಧಿಕಾರಿಗಳ ಸಮಿತಿಯನ್ನು ರಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಅಧಿಕಾರಿಗಳ ಸಮಿತಿಯು ಈ ಸಂಬಂಧ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ ; ವರದಿಯನ್ನು ಸಲ್ಲಿಸಿದ್ದಲ್ಲಿ ಸದರಿ ವರದಿಯ ಮುಖ್ಯಾಂಶಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸರ್ಕಾರಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗುವುದು ;

(ಉ) ರಾಜ್ಯದಲ್ಲಿ ಹಳೆ ನಿವೃತ್ತಿ ವೇತನ ಪಡೆಯುತ್ತಿರುವ ಸಂಖ್ಯೆ ಎಷ್ಟು ; ಸರ್ಕಾರ ನೌಕರರಿಗೆ ವಿತರಿಸುತ್ತಿರುವ ಹಳೆ ನಿವೃತ್ತಿ ಪಿಂಚಣಿ ಮೊತ್ತವೆಷ್ಟು ; (ಪ್ರಸಕ್ತ ಸಾಲಿನ ಮಾಹಿತಿ ನೀಡುವುದು)

(ಊ) ಈ ಹೊಸ ಪಿಂಚಣಿ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಇಂತಹ ನೌಕರರನ್ನು ಹಳೆ ಪಿಂಚಣಿ ವ್ಯವಸ್ಥೆಗೆ ಜಾರಿಗೊಳಿಸಿದರೆ ತಗಲಬಹುದಾದ ಅಂದಾಜು ವೆಚ್ಚ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ನೀಡಲಾಗುವ ಮಾಶಾಸನ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೨೭ (೩೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಪತ್ರಕರ್ತರು ಎಷ್ಟು ; ಈ ಪತ್ರಕರ್ತರಿಗೆ ಸಿಗುತ್ತಿರುವ ಸೌಲಭ್ಯಗಳೇನು ;

(ಆ) ರಾಜ್ಯದಲ್ಲಿ ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಪತ್ರಕರ್ತರಿಗೆ ಕಳೆದ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ

ಮಾಶಾಸನ ಮೊತ್ತವನ್ನು ರೂ. ೧೦,೦೦೦/-ರಿಂದ ೧೨,೦೦೦/- ಗೆ ಹೆಚ್ಚಿಸಲಾಗುತ್ತಿದೆಂದು ಹಾಗೂ ಮಾಶಾಸನ ಪಡೆಯುವ ಪತ್ರಕರ್ತರು ಮೃತಪಟ್ಟಾಗ ಕುಟುಂಬದವರಿಗೆ ಮಾಶಾಸನವನ್ನು ೩,೦೦೦/-ರಿಂದ ೬,೦೦೦/-ರವರೆಗೆ ಹೆಚ್ಚಿಸಲಾಗುವುದೆಂದು ತಿಳಿಸಲಾಗಿದೆಯೇ ; ಈ ಪ್ರಕ್ರಿಯೆ ಯಾವ ಹಂತದಲ್ಲಿದೆ ?

## ರಾಜ್ಯದ ವಿವಿಧ ಇಲಾಖೆಗಳ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಸ್ಪರ್ಧಾತ್ಮಕ ಪರೀಕ್ಷಾ ದಿನಾಂಕಗಳ ನಿಗದಿಪಡಿಸುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೨೮ (೪೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಲೋಕಸೇವಾ ಆಯೋಗ, ಕರ್ನಾಟಕ ಪರೀಕ್ಷಾ ಹಾಗೂ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ದಿನಾಂಕಗಳು ಪದೇ ಪದೇ ಬದಲಾಗುತ್ತಿರುವುದರಿಂದ ಅಭ್ಯರ್ಥಿಗಳು ಗೊಂದಲಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಅಭ್ಯರ್ಥಿಗಳ ಅನುಕೂಲಕ್ಕಾಗಿ ಈ ಗೊಂದಲವನ್ನು ಪರಿಹರಿಸಲು ತೆಗೆದುಕೊಳ್ಳಬಹುದಾದ ಕ್ರಮಗಳೇನು ;

(ಆ) ರಾಜ್ಯದಲ್ಲಿ ನೇಮಕಾತಿ ನಡೆಸುವ ಪರೀಕ್ಷಾ ಪ್ರಾಧಿಕಾರಗಳು ಯಾವ ಮಾನದಂಡಗಳಲ್ಲಿ ಪರೀಕ್ಷಾ ದಿನಾಂಕ ಹಾಗೂ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುತ್ತಿವೆ ;

(ಇ) ರಾಜ್ಯದ ನೇಮಕಾತಿ ಪರೀಕ್ಷಾ ಪ್ರಾಧಿಕಾರಗಳು ವೇಳಾಪಟ್ಟಿಯನ್ನು ಸಿದ್ಧಪಡಿಸುವಾಗ ಕೇಂದ್ರ ಸರ್ಕಾರದ ನೇಮಕಾತಿ ಪ್ರಾಧಿಕಾರಗಳು (UPSC, SSC, IBPS, NTA ಸೇರಿದಂತೆ) ನಡೆಸುವ ನೇಮಕಾತಿ ವೇಳಾಪಟ್ಟಿಗಳನ್ನು ಪರಿಗಣನೆಗೆ ತೆಗೆದುಕೊಳ್ಳುತ್ತವೆಯೇ ; (ವಿವರ ನೀಡುವುದು)

(ಈ) ಈ ಗೊಂದಲಗಳನ್ನು ನಿವಾರಿಸಲು ರಾಜ್ಯದ ಪರೀಕ್ಷಾ ಪ್ರಾಧಿಕಾರಗಳು ಕೇಂದ್ರ ಲೋಕಸೇವಾ ಆಯೋಗ ಮತ್ತು ಸಿಬ್ಬಂದಿ ನೇಮಕಾತಿ ಆಯೋಗಗಳ ಮಾದರಿಯಲ್ಲಿ ನೇಮಕಾತಿಯ ವರ್ಷದ ಕ್ಯಾಲೆಂಡರ್ (ಪರೀಕ್ಷಾ ವೇಳಾ ಪಟ್ಟಿಯನ್ನು) ಬಿಡುಗಡೆ ಮಾಡಬಹುದಲ್ಲವೇ ; ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು ? (ವಿವರ ನೀಡುವುದು)

## ಸಾರ್ವಜನಿಕರ ಮೊಬೈಲ್ ಸಂಖ್ಯೆಗಳ ಕರೆಗಳ ವಿವರಗಳನ್ನು ಪಡೆದು ದುರುಪಯೋಗ ಪಡಿಸಿಕೊಳ್ಳುತ್ತಿರುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೨೯ (೪೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಅಧಿಕೃತ ಖಾಸಗಿ ಪತ್ತೇದಾರಿ ಏಜೆನ್ಸಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಖಾಸಗಿ ಪತ್ತೇದಾರಿ ಏಜೆನ್ಸಿಗಳಿಗೆ ಅನುಮತಿ ನೀಡಲು ಸರ್ಕಾರ ವಿಧಿಸಿರುವ ನಿಯಮ ಹಾಗೂ ನಿಬಂಧನೆಗಳೇನು ;

(ಆ) ರಾಜ್ಯದಲ್ಲಿ ಸಾರ್ವಜನಿಕರ ಮೊಬೈಲ್ ಸಂಖ್ಯೆಗಳನ್ನು ಬಳಸಿ ಅವರ ಕರೆಯ ವಿವರಗಳನ್ನು (ಸಿಡಿಆರ್) ಇಲಾಖೆಯ

ಸಿಬ್ಬಂದಿಗಳೇ ಶಾಮೀಲಾಗಿ ಖಾಸಗಿ ಪತ್ತೇದಾರಿ ಏಜೆನ್ಸಿಗಳಿಗೆ ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದುವರೆಗೂ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಸಂಪೂರ್ಣ ವಿವರ ನೀಡುವುದು)

(ಇ) ಸಾರ್ವಜನಿಕರಷ್ಟೇ ಅಲ್ಲದೇ ಸರ್ಕಾರದ ಉನ್ನತ ಅಧಿಕಾರಿಗಳ ಕರೆಯ ವಿವರಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; (ವಿವರ ನೀಡುವುದು)

(ಈ) ಇಂತಹ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಕೈಗೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳೇನು ?

## ಚಾಮರಾಜನಗರ ಜಿಲ್ಲೆಯ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗದ ಸಮಸ್ಯೆಗಳ ಕುರಿತು

**ಶ್ರೀ ಶಾಂತಾರಾಮ್** ಬುಡ್ನ ಸಿದ್ದಿ **(ನಾಮನಿರ್ದೇಶನ ಹೊಂದಿದವರು) :-**

೩೩೦ (೨೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಅಸ್ತಿತ್ವದ ಅಳಿವಿನಂಚಿನಲ್ಲಿರುವ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗದ ಒಟ್ಟು ಎಷ್ಟು ಕುಟುಂಬಗಳಿವೆ; ಈ ಕುಟುಂಬಗಳಲ್ಲಿ ಜಮೀನು ಮತ್ತು ಪಕ್ಕಾ ಮನೆ ಇರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಡಿಮೆ ಜನಸಂಖ್ಯೆ ಇರುವ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗವು ಕನಿಷ್ಟ ಮೂಲಭೂತ ಸೌಲಭ್ಯ ಮತ್ತು ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ? (ವಿವರ ನೀಡುವುದು)

## ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಹಕ್ಕು ಪತ್ರ ನೀಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೩೩೧ (೪೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ರಾಜ್ಯದ ಬುಡಕಟ್ಟು ಜನರಿಗೆ ಹಕ್ಕು ಪತ್ರ ನೀಡುವ ಪ್ರಕ್ರಿಯೆ ಸಮರ್ಪಕವಾಗಿ ಆಗುತ್ತಿದೆಯೇ ;

(ಆ) ರಾಜ್ಯದಲ್ಲಿ ಈವರೆಗೆ ಬುಡಕಟ್ಟು ಜನಾಂಗದವರಿಂದ ಸ್ವೀಕೃತವಾದ ಒಟ್ಟು ಅರ್ಜಿಗಳು, ಹಕ್ಕ ಪತ್ರ ನೀಡಿದ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಅಂಕಿ ಸಂಖ್ಯೆ ನೀಡುವುದು)

## ಪರಿಶಿಷ್ಟ ಪಂಗಡಗಳ ಇಲಾಖೆಯಲ್ಲಿ ಬರುವ ನಿಗಮ ಮತ್ತು ಯೋಜನೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೩೩೨ (೪೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ನಿಗಮಗಳು ಯಾವುವು ;

(ಆ) ಬುಡಕಟ್ಟು ಜನಾಂಗಗಳಿಗಾಗಿ ಇರುವ ಯೋಜನೆಗಳು ಮತ್ತು ಮಾನದಂಡಗಳು ಯಾವುವು ;

(ಇ) ರಾಜ್ಯದಲ್ಲಿರುವ ಒಟ್ಟು ಬುಡಕಟ್ಟು ಜನಾಂಗಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಜನಾಂಗಗಳ ಸಂಖ್ಯಾವಾರು ವಿವರ ನೀಡುವುದು)

(ಈ) ಒಟ್ಟು ಬುಡಕಟ್ಟು ಜನಾಂಗಗಳಲ್ಲಿ ಪರಿಶಿಷ್ಟ ಪಂಗಡ, ಅಲೆಮಾರಿ ಮತ್ತು ಅರೆ ಅಲೆಮಾರಿ ಪಟ್ಟಿಯಲ್ಲಿ ಇರುವ ಜನಾಂಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯ ಮಂಗೇಮಾರಿ ಜನಾಂಗದವರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೩೩೩ (೪೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯಲ್ಲಿ ಬುಡಕಟ್ಟು ಮಂಗೇಮಾರಿ ಜನಾಂಗದ ಒಟ್ಟು ಎಷ್ಟು ಕುಟುಂಬಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಜನಾಂಗದವರು ಇವತ್ತಿನವರೆಗೂ ಸರ್ಕಾರದ ಯೋಜನೆಗಳು ಮತ್ತು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?

## ಉತ್ತರ ಕನ್ನಡ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೩೩೪ (೪೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕನ್ನಡ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಜಿಲ್ಲೆಯ ಯಾವ ಯಾವ ಪ್ರವಾಸಿ ತಾಣಗಳು ಈ ಅಭಿವೃದ್ಧಿ ಯೋಜನೆಯಲ್ಲಿ ಒಳಗೊಂಡಿದೆ ;

(ಇ) ಉತ್ತರ ಕನ್ನಡ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಸರ್ಕಾರ ಮೀಸಲಿಟ್ಟ ಅನುದಾನವೆಷ್ಟು ?

## ಕೋಲಿ/ಕಬ್ಬಲಿಗ/ಬೆಸ್ತ ಮತ್ತು ಪರ್ಯಾಯ ಪದಗಳನ್ನು ಎಸ್.ಟಿ. ಪಟ್ಟಿಯಲ್ಲಿ ಸೇರಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೩೩೫ (೨೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಿ/ಕಬ್ಬಲಿಗ/ಬೆಸ್ತ ಮತ್ತು ಪರ್ಯಾಯ ಪದಗಳನ್ನು ಪರಿಶಿಷ್ಟ ಪಂಗಡದ (ಎಸ್.ಟಿ) ಪಟ್ಟಿಯಲ್ಲಿ ಸೇರಿಸಬೇಕು ಎಂದು ಕರ್ನಾಟಕ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಿರುವುದು ನಿಜವೇ ;

(ಆ) ಕೇಂದ್ರ ಸರ್ಕಾರದ ರಿಜಿಸ್ಟಾರ್ ಜನರಲ್ ಆಫ್ ಇಂಡಿಯಾ (ಆರ್.ಜಿ.ಐ)ರವರು ಕೋಲಿ/ಕಬ್ಬಲಿಗ/ಬೆಸ್ತ ಮತ್ತು ಪರ್ಯಾಯ

ಪದಗಳನ್ನು ಗಂಗಾಮತ ಎಂಬ ಗುಂಪಿನಲ್ಲಿ ಸೇರಿಸಲಾಗಿದೆ ಎಂದು ಪ್ರಸ್ತಾವನೆಯನ್ನು ದಿನಾಂಕ: ೩೦-೧೦-೨೦೨೩ರಂದು ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಿರುವುದು ನಿಜವೇ ;

(ಇ) ಸದರಿ ಪ್ರಸ್ತಾವನೆ ವಾಪಸ್ಸು ಬಂದಿದ್ದರೆ, ರಾಜ್ಯ ಸರ್ಕಾರವು ಯಾವ ಕ್ರಮವನ್ನು ಕೈಗೊಳ್ಳುತ್ತದೆ ;

(ಈ) ಅತ್ಯಂತ ಹಿಂದುಳಿದ ಜಾತಿ ಕೋಲಿ/ಕಬ್ಬಲಿಗ/ಬೆಸ್ತ ಮತ್ತು ಪರ್ಯಾಯ ಪದಗಳನ್ನು ಎಸ್.ಟಿ. ಪಟ್ಟಿಯಲ್ಲಿ ಸೇರಿಸಲು ಸುಮಾರು ನಲವತ್ತು ವರ್ಷಗಳಿಂದ ನಡೆಯುತ್ತಿರುವ ಹೋರಾಟಕ್ಕೆ ಸರ್ಕಾರದ ಪ್ರತಿಕ್ರಿಯೆ ಏನು ;

(ಉ) ಕೋಲಿ/ಕಬ್ಬಲಿಗ/ಬೆಸ್ತ/ಬಾರಿಕ/ಅಂಬಿಗಾ/ಮೊಗವೀರ ಮತ್ತು ಪರ್ಯಾಯ ಪದಗಳನ್ನು ಮಾತ್ರ ಎಸ್.ಟಿ. ಪಟ್ಟಿಯಲ್ಲಿ ಸೇರಿಸಲು ಮತ್ತೊಮ್ಮೆ ಹೊಸದಾಗಿ ಪ್ರಸ್ತಾವನೆಯನ್ನು ಕಳುಹಿಸಿ ತೀರಾ ಹಿಂದುಳಿದ ಈ ಸಮುದಾಯಕ್ಕೆ ನ್ಯಾಯ ಒದಗಿಸಲು ಸರ್ಕಾರ ಪ್ರಯತ್ನಿಸುವುದೇ ?

## ರಾಜ್ಯ ಸರ್ಕಾರ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿಯ ಅಳವಡಿಸುವ ತೀರ್ಮಾನದ ಬಗ್ಗೆ

**ಶ್ರೀ ಕೆ.ಎಸ್.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೩೬ (೪೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿವಿಧ ಇಲಾಖೆ, ನಿಗಮ ಮತ್ತು ಮಂಡಳಿಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವರ್ಷಾವಾರು ಇಲಾಖೆ/ನಿಗಮ/ಮಂಡಳಿವಾರು ಪೂರ್ಣ

ಮಾಹಿತಿ ನೀಡುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳು ಯಾವುವು ; ಮತ್ತು ಈ ಹುದ್ದೆಗಳನ್ನು ಯಾವ ಆಯೋಗ ಮತ್ತು ಪ್ರಾಧಿಕಾರಗಳಿಂದ ಈ ತಹಲ್‌ವರೆಗೂ ನೇಮಕಾತಿ ಮಾಡಲಾಗಿದೆ ; (ನೇಮಕಾತಿ ವಿಧಾನ ಒಳಗೊಂಡಂತೆ ಇಲಾಖಾವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಈ ರೀತಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಹೊರಗುತ್ತಿಗೆ ಆಧಾರದ ಮೇಲೆ ಹೊರ ಸಂಪನ್ಮೂಲ ಏಜೆನ್ಸಿಗಳ ಮುಖೇನ ನೇಮಕಾತಿ ಮಾಡುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಹೊರಗುತ್ತಿಗೆ ಆಧಾರದ ಮೇಲೆ ಯಾವ ಗ್ರೂಪ್‌ನ ಹುದ್ದೆಗಳನ್ನು ನೇಮಕಾತಿ ಮಾಡಲಾಗುತ್ತಿದೆ ಮತ್ತು ಇಂತಹ ನೇಮಕಾತಿಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯ ಸರ್ಕಾರ ಇತ್ತೀಚೆಗೆ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿಯನ್ನು ಅಳವಡಿಸಲು ಆದೇಶ ಹೊರಡಿಸಿರುವುದು ನಿಜವೇ ; ಹಾಗಿದ್ದಲ್ಲಿ, ಈ ಆದೇಶದ ಸಂಕ್ಷಿಪ್ತ ವಿವರಗಳು ಯಾವುವು ;

(ಉ) ರಾಜ್ಯ ಸರ್ಕಾರದ ಆದೇಶದಲ್ಲಿ ವಿವರಿಸಿದ ವಿವಿಧ ವರ್ಗಗಳ ಮೀಸಲಾತಿ ನೇಮಕಾತಿಗಳಲ್ಲಿ ವಿವಿಧ ಜಾತಿ, ಪಂಗಡ ಮತ್ತು ಸಮುದಾಯಗಳಿಗೆ ಸರಿಸಮನಾಗಿ ಪ್ರಾತಿನಿಧ್ಯ ಇರುವಂತೆ ಉಸ್ತುವಾರಿ ವಹಿಸಲು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪ್ರವಾಸೋದ್ಯಮ ಪ್ರಗತಿ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೩೭ (೪೧೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆ ಅಡಿ ಪ್ರವಾಸೋದ್ಯಮ ಉತ್ತೇಜನಕ್ಕೆ ಮತ್ತು ಪ್ರವಾಸಿಗರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರಕ್ಕೆ ಈ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ದೊರೆತಿರುವ ನೆರವು ಮತ್ತು ಸವಲತ್ತುಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಿಂದ ಪ್ರಾಯೋಜಿತವಾದ Golden Chariat Tour ನಡಿ ಕಳೆದ ೩ ವರ್ಷಗಳಲ್ಲಿ ಸಾಧಿಸಿರುವ ಪ್ರಗತಿ ಎಷ್ಟು ? (ಭೌತಿಕ-ಆರ್ಥಿಕ ಗುರಿ ಮತ್ತು ಸಾಧನೆಗಳು ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಜಲಮಂಡಳಿಯಿಂದ ೧೧೦ ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೩೮ (೪೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಜಲ ಮಂಡಳಿ ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಪೂರೈಕೆಗೆ ಕಾವೇರಿ ನದಿಯಿಂದ ವಿವಿಧ ಹಂತದಲ್ಲಿ ಹೊರ ತರುತ್ತಿರುವ ಕುಡಿಯುವ ನೀರಿನ ಪ್ರಮಾಣವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ಜಲ ಮಂಡಳಿ ನಗರಕ್ಕೆ ಕುಡಿಯುವ ನೀರಿನ ಪೂರೈಕೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಾಗೂ ಬಾಹ್ಯ ಸಂಸ್ಥೆಗಳಿಂದ ಪಡೆದಿರುವ ಆರ್ಥಿಕ ನೆರವುಗಳು ಯಾವುವು ; ಮತ್ತು ಈ ನೆರವುಗಳ ಪ್ರಸ್ತುತ ಪರಿಸ್ಥಿತಿ ಏನು ; (ಪೂರ್ಣ ಮಾಹಿತಿ ನೀಡುವುದು)

(ಇ) ಬೆಂಗಳೂರು ಜಲ ಮಂಡಳಿ ೨೦೫೦ನೇ ಇಸವಿಯವರೆಗೆ ಬೆಂಗಳೂರು ನಗರದ ಬೆಳವಣಿಗೆ ಮತ್ತು ಜನಸಂಖ್ಯೆ ಆಧರಿಸಿ ಅಗತ್ಯವಿರುವ, ಅಂದಾಜಿಸಿರುವ ಕುಡಿಯುವ ನೀರಿನ ಪ್ರಮಾಣವೆಷ್ಟು; ಮತ್ತು ಈ ನೀರನ್ನು ಯಾವ ಮೂಲಗಳಿಂದ ತರಲು ಯೋಜನೆಗಳನ್ನು ರೂಪಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರ್ಪಡೆಯಾಗಿರುವ ಬೆಂಗಳೂರು ಸುತ್ತಲಿನ ೧೧೦ ಹಳ್ಳಿಗಳ ಪ್ರದೇಶಗಳಿಗೆ ಹಾಗೂ ಹೊಸದಾಗಿ ಸೇರ್ಪಡೆಗೊಂಡಿರುವ ಪ್ರದೇಶಗಳಿಗೆ ಪೂರ್ಣ ಪ್ರಮಾಣದ ಕುಡಿಯುವ ನೀರು ಪೂರೈಸುವ ಯೋಜನೆ ಯಾವ ಹಂತದಲ್ಲಿದೆ ? (ಈ ಯೋಜನೆ ಪೂರ್ಣ

ವಿವರ ನೀಡುವುದು)

## ಜನಗಣತಿ ಮತ್ತು ಪೌರತ್ವ ಕಾಯ್ದೆ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೩೯ (೪೧೭೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಭಾರತದ ಜನಗಣತಿ ಕಾಯ್ದೆ ೧೯೪೮ರ ಪ್ರಕಾರ ಪ್ರತಿ ೧೦ ವರ್ಷಗಳಿಗೊಮ್ಮೆ ದೇಶದಲ್ಲಿ ಕೈಗೊಳ್ಳುವ ಜನಗಣತಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಜನಗಣತಿ ಕೈಗೊಳ್ಳಲು ಅನುಸರಿಸಬೇಕಾದ ಪೂರ್ವಭಾವಿ ತಯಾರಿ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಪೌರತ್ವ ಕಾಯಿದೆ - ೨೦೧೯ ಮತ್ತು ಇದರಡಿ ರೂಪಿತವಾಗಿರುವ ನಿಯಮಗಳನ್ನು ಜಾರಿಗೊಳಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈ ಕಾಯಿದೆ ಅಡಿ ಇದುವರೆಗೂ ಎಷ್ಟು ಅರ್ಹರಿಗೆ ಪೌರತ್ವ ನೀಡಲಾಗಿದೆ ;

(ಉ) ರಾಜ್ಯದಲ್ಲಿ ಪೌರತ್ವ ಕಾಯಿದೆ ಅಡಿಯಲ್ಲಿ ರೂಪಿಸಿರುವಂತೆ ನಾಗರಿಕ ರಾಷ್ಟ್ರೀಯ ನೋಂದಣಿ (ಎನ್.ಆರ್.ಸಿ) ಮತ್ತು ರಾಷ್ಟ್ರೀಯ ಜನಸಂಖ್ಯೆ ರಿಜಿಸ್ಟರ್ (ಎನ್‌ಪಿಆರ್)ಗಳನ್ನು ಇಡಲಾಗಿದೆಯೇ ;

ಇಲ್ಲದಿದ್ದಲ್ಲಿ ಕಾರಣಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಹೊಸಕೋಟೆ ತಾಲ್ಲೂಕಿನ ರಕ್ತಚಂದನ ಸಾಗಾಣಿಕೆ ಬಗ್ಗೆ

**ಶ್ರೀ ಎನ್.ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೦ (೩೩೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ತಾಲ್ಲೂಕಿನ ಕಟ್ಟಿಗೇನಹಳ್ಳಿ, ಬೈಲನರಸಾಪುರ, ಮೇಡಿಮಲ್ಲಸಂದ್ರ ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ರಕ್ತಚಂದನ ಮರಗಳ ಸಾಗಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿರುತ್ತವೆ ; ಹಾಗೂ ಸರ್ಕಾರ ವಶಪಡಿಸಿಕೊಂಡಿರುವ ರಕ್ತಚಂದನವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಕ್ತಚಂದನ ಸಾಗಾಣಿಕೆಯಲ್ಲಿ ಭಾಗಿಯಾಗಿರುವವರ ಮೇಲೆ ಎಷ್ಟು ಎಫ್ಐಆರ್ ದಾಖಲಾಗಿರುತ್ತದೆ ; ಎಷ್ಟು ಆರೋಪಿಗಳಿಗೆ ಶಿಕ್ಷೆಯಾಗಿದೆ ; ಯಾವ ಯಾವ ಸೆಕ್ಷನ್ ಅಡಿಯಲ್ಲಿ ಶಿಕ್ಷೆಯಾಗಿರುತ್ತದೆ ; (ಹೆಸರು ಮತ್ತು ವಿಳಾಸವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ರಕ್ತಚಂದನ ಸಾಗಾಣಿಕೆ ತಡೆಗಟ್ಟಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಅಂತರ್ಜಲ ವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೩೪೧ (೨೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಅಂತರ್ಜಲ ವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಮಾಹಿತಿ ಪ್ರಕಾರ ಬೆಂಗಳೂರು ಜಲ ಮಂಡಳಿಯ ೫೦ ಕೆರೆಗಳಿಗೆ ಸಂಸ್ಕರಿತ ನೀರು ತುಂಬಿಸುವ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದು; ಈವರೆಗೆ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ;

(ಇ) ಅಂತರ್ಜಲ ಮಟ್ಟವನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ನಿರ್ದಿಷ್ಟ ಕಾರ್ಯಕ್ರಮಗಳನ್ನು ರೂಪಿಸುವುದೇ ?

## ಬೆಂಗಳೂರು ನಗರದಲ್ಲಿ ಬಹುಮಹಡಿ ಪಾರ್ಕಿಂಗ್ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೩೪೨ (೨೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಎಲ್ಲೆಲ್ಲಿ ಬಹುಮಹಡಿ ಪಾರ್ಕಿಂಗ್ ಕಟ್ಟಡಗಳನ್ನು ನಿರ್ಮಿಸಲಾಗಿದೆ ; (ಸಂಪೂರ್ಣ ವಿವರವನ್ನು ಒದಗಿಸುವುದು)

(ಆ) ಬಹುಮಹಡಿ ಪಾರ್ಕಿಂಗ್ ಕಟ್ಟಡಗಳಿಗಾಗಿ ಬೇಡಿಕೆ ಬಂದಿರುವ ಪ್ರದೇಶಗಳಾವುವು ; ಸರ್ಕಾರ ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ?

## ಸಂಚಾರ ದಟ್ಟಣೆ ಕುರಿತು

**ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೩೪೩ (೪೦೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ನಗರದಲ್ಲಿ ಸಂಚಾರ ದಟ್ಟಣೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸುಗಮ ಸಂಚಾರಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಆ) ಕಲಬುರಗಿ ನಗರದಲ್ಲಿ ಇರುವ ವರ್ತುಲ ರಸ್ತೆಯಲ್ಲಿ ಸಂಚಾರ ದಟ್ಟಣೆಯಿಂದಾಗಿ ಅಪಘಾತಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ?

## ಕಲ್ಯಾಣ ಕರ್ನಾಟಕದಲ್ಲಿರುವ ಪ್ರವಾಸಿ ತಾಣಗಳ ಬಗ್ಗೆ

**ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೩೪೪ (೪೦೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದಲ್ಲಿರುವ ಪ್ರವಾಸಿ ತಾಣಗಳೆಷ್ಟು ಮತ್ತು ಅವು ಯಾವುವು ;

(ಆ) ಈ ಪ್ರವಾಸಿ ತಾಣಗಳ ಅಭಿವೃದ್ಧಿ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಯಾವ ಯಾವ ಪ್ರವಾಸಿ ತಾಣಗಳಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ೭ನೇ ವೇತನ ಆಯೋಗದ ಶಿಫಾರಸ್ಸು ಜಾರಿ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೪೫ (೪೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದ ಕಾರಣ ಸರ್ಕಾರಕ್ಕೆ ವಾರ್ಷಿಕವಾಗಿ ಉಳಿತಾಯವಾಗುತ್ತಿರುವ ಹಣವೆಷ್ಟು ;

(ಇ) ರಾಜ್ಯದಲ್ಲಿ ಇಲ್ಲಿಯವರೆಗೆ ರಚನೆಯಾದ ವೇತನದ ಆಯೋಗಗಳು ಎಷ್ಟು ; ಸದರಿ ಆಯೋಗಗಳು ರಚನೆಯಾಗಿ ಎಷ್ಟು ದಿನಗಳಲ್ಲಿ ವರದಿ ನೀಡಿವೆ ; (ಆಯೋಗವಾರು ವಿವರ ನೀಡುವುದು)

(ಈ) ರಾಜ್ಯ ಸರ್ಕಾರಿ ನೌಕರರ ವೇತನ, ಕೇಂದ್ರ ಸರ್ಕಾರಿ ನೌಕರರ ವೇತನಕ್ಕೆ ಹೋಲಿಕೆ ಮಾಡಿದಲ್ಲಿ ಸರಾಸರಿ ಎಷ್ಟು ವ್ಯತ್ಯಾಸವನ್ನು ಹೊಂದಿದೆ ;

(ಉ) ೭ನೇ ವೇತನ ಆಯೋಗದ ವರದಿ ನೀಡಿ ಎಷ್ಟು ತಿಂಗಳು ಕಳೆದಿವೆ ; ಏಳನೇ ವೇತನ ಆಯೋಗದ ಶಿಫಾರಸ್ಸು ಜಾರಿಗೆ ವಿಳಂಬ ಮಾಡಲು ಕಾರಣಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಏಳನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿ ಮಾಡಲಾಗುವುದು ; ಯಾವ ದಿನಾಂಕದಿಂದ ಜಾರಿಗೆ ಬರುವಂತೆ ಅನ್ವಯಿಸಲಾಗುವುದು ?

## ಡಾ॥ ಕೆ.ಶಿವರಾಮ ಕಾರಂತ ಬಡಾವಣೆಯ ವ್ಯಾಪ್ತಿಯ ಸಾರ್ವಜನಿಕರ ಸಮಸ್ಯೆಗಳ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೩೪೬ (೪೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಡಿ.ಎ ವತಿಯಿಂದ ನಿರ್ಮಾಣವಾಗುತ್ತಿರುವ ಡಾ: ಕೆ.ಶಿಮರಾಮ ಕಾರಂತ ಬಡಾವಣೆಯ ವ್ಯಾಪ್ತಿಗೆ ಒಳಪಡುವ ಗ್ರಾಮಗಳ ಸಂಖ್ಯೆ ಎಷ್ಟು ;

(ಆ) ಬಿ.ಡಿ.ಎ ಅಧಿಸೂಚನೆಯಲ್ಲಿ ಸೇರ್ಪಡೆಯಾಗದ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಬಿ.ಡಿ.ಎ ವತಿಯಿಂದ ಅನುಮತಿ ಪಡೆಯುವುದು ಕಡ್ಡಾಯವೇ ; ಕಡ್ಡಾಯವಾಗಿದ್ದಲ್ಲಿ ಸಾರ್ವಜನಿಕರು ಇದಕ್ಕೆ ಸಲ್ಲಿಸಬೇಕಾದ ದಾಖಲೆಗಳು ಯಾವುವು ;

(ಇ) ಡಾ: ಕೆ.ಶಿಮರಾಮ ಕಾರಂತ ಬಡಾವಣೆಯ ವ್ಯಾಪ್ತಿಯಲ್ಲಿ ನಿರ್ಮಾಣ ಮಾಡುತ್ತಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡದಂತೆ ಬಿ.ಡಿ.ಎ ವತಿಯಿಂದ ಬೆಸ್ಕಾಂಗೆ ಪತ್ರ ಬರೆಯಲಾಗೆದೆಯೇ ; ಬರೆಯಲಾಗಿದ್ದಲ್ಲಿ, ಸದರಿ ಪತ್ರದ ಪ್ರತಿಯನ್ನು ನೀಡುವುದು ;

(ಈ) ಜೆ.ಬಿ ಕಾವಲ್ ವ್ಯಾಪ್ತಿಯಲ್ಲಿ ನಿರ್ಮಾಣ ಮಾಡಲಾದ ಕಟ್ಟಡಗಳನ್ನು ಬಿ.ಡಿ.ಎ ಅಧಿಕಾರಿಗಳು ನೋಟೀಸ್ ನೀಡದೆ ನಿಯಮ ಬಾಹಿರವಾಗಿ ಕೆಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸದರಿ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಡಾ: ಕೆ.ಶಿವರಾಮ ಕಾರಂತ ಬಡಾವಣೆಯ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಮಾಡಲು, ನಿವೇಶನ ಕಟ್ಟಡ ಮಾರಾಟ ಮಾಡಲು ನಿರಾಕ್ಷೇಪಣಾ ಪತ್ರ ಕೋರಿ ಬಿ.ಡಿ.ಎ ಗೆ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ? (ವಿಲೇಯಾದ ಅರ್ಜಿಗಳ ಸಂಖ್ಯೆ ಎಷ್ಟು)

## ಅಪರಾಧ ಚಟುವಟಿಕೆಯಲ್ಲಿ ತೊಡಗಿದ ಸಿಬ್ಬಂದಿಯ ಮೇಲೆ ಕ್ರಮ ತೆಗೆದುಕೊಳ್ಳುವ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೩೪೭ (೪೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಪರಾಧ ಚಟುವಟಿಕೆಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಅಪರಾಧ ಹಿನ್ನಲೆಯಲ್ಲಿ ವ್ಯಕ್ತಿಗಳು ಪದೇ ಪದೇ ಅಪರಾಧ ಕೃತ್ಯದಲ್ಲಿ ಭಾಗವಹಿಸುತ್ತಿದ್ದಲ್ಲಿ ಇಂತಹ ವ್ಯಕ್ತಿಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಇ) ಅಪರಾಧ ಹಿನ್ನೆಲೆಯ ವ್ಯಕ್ತಿಗಳೊಂದಿಗೆ ಪೊಲೀಸ್ ಇಲಾಖೆ ಸಿಬ್ಬಂದಿ ಸಂಪರ್ಕದಲ್ಲಿದ್ದರೆ ಅವರ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಈ) ತುಮಕೂರಿನಲ್ಲಿ ಕ್ರಿಮಿನಲ್ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದ ಕಾನ್ಸ್‌ಸ್ಟೇಬಲ್‌ಗಳ ಮೇಲೆ ಕೈಗೊಂಡ ಕ್ರಮವೇನು ;

(ಉ) ಕ್ರಿಮಿನಲ್ ಚಟುವಟಿಕೆಯಲ್ಲಿ ತೊಡಗಿಸಿಕೊಂಡ ಪೊಲೀಸ್ ಸಿಬ್ಬಂದಿಯನ್ನು ಸೇವೆಯಿಂದ ವಜಾ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇಲ್ಲದಿದ್ದಲ್ಲಿ, ಇಂತಹ ಅಪರಾಧಕ್ಕೆ ನೀಡುವ ಶಿಕ್ಷೆ ಯಾವುದು ?

## ಸರ್ಕಾರಿ ಅಧಿಕಾರಿ/ ಸಿಬ್ಬಂದಿಗಳ ಸೇವಾನಿಯಮಗಳ ಕುರಿತು

**ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೮ (೩೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗಾಗಿ ವೃಂದ ಹಾಗೂ ನೇಮಕಾತಿ ನಿಯಮಗಳನ್ನು ರಚಿಸಲಾಗಿದೆಯೇ ; ಇವುಗಳ ಪರಿಷ್ಕರಣ ನಿಯಮಗಳೇನು ; (ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ಅಧಿಕಾರಿ / ಸಿಬ್ಬಂದಿಗಳಿಗೆ ಹೆಚ್. ಆರ್. ಎಂ. ಎಸ್ ಮೂಲಕ ವೇತನ ಪಾವತಿಯಾಗುತ್ತಿದೆಯೇ ; ಹೆಚ್.ಆರ್.ಎಂ.ಎಸ್ ರಹಿತವಾಗಿ ಯಾರ್ಯಾರಿಗೆ ವೇತನ/ಸಂಭಾವನೆ ಗೌರವಧನ ಪಾವತಿಯಾಗುತ್ತಿದೆ ; ಅದರ ವಾರ್ಷಿಕ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಲಹೆಗಾರ ಸಂಯೋಜಕರ ಹುದ್ದೆಗಳಲ್ಲಿ ನೇಮಕವಾದ ನಿವೃತ್ತ ಅಧಿಕಾರಿಗಳನ್ನು ಮುಖ್ಯ ಮಂತ್ರಿಗಳ ಸೂಚನೆ ಮೇರೆಗೆ ಕೆಲಸದಿಂದ ಬಿಡುಗಡೆಗೊಳಿಸಲಾಗಿದೆಯೇ ; ಬಿಡುಗಡೆಗೊಳಿಸದ ದಿನಾಂಕ ಸಹಿತ ಬಿಡುಗಡೆಗೊಳಿಸಿದ ನಿವೃತ್ತರ ಹೆಸರು ಮತ್ತು ರದ್ದುಪಡಿಸಿದ ಎಲ್ಲಾ ಇಲಾಖೆಗಳಲ್ಲಿನ ಹುದ್ದೆಗಳ ವಿವರ ನೀಡುವುದು ;

(ಈ) ನಾಗರೀಕ ಸೇವಾ ನಿಯಮಗಳನ್ವಯ ಸರ್ಕಾರಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗಿರುವ ಸವಲತ್ತುಗಳಾವುವು ; ಅಧಿಕಾರಿಗಳು ಕಾರ್ಯನಿರ್ವಹಿಸುವ ಸ್ಥಳದ ಮನೆ ಬಾಡಿಗೆ ಭತ್ಯೆ ಪ್ರಭಾರ ಭತ್ಯೆ, ಪ್ರಯಾಣ ಭತ್ಯೆ, ಇವುಗಳನ್ನು ಚಾಲ್ತಿಯಲ್ಲಿರುವ

ನಿಯಮಗಳಾನುಸಾರ ಕ್ಷಿಪ್ತ ಸಮಯದಲ್ಲಿ ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು ; ಜ್ಯೋತಿ ಸಂಜೀವಿನಿ ಯೋಜನೆಯಡಿ ಅಭಿವೃದ್ಧಿಪಡಿಸಲಾದ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡ ಸರ್ಕಾರಿ ನೌಕರರೆಷ್ಟು ಮತ್ತು ಬಾಕಿಯೆಷ್ಟು ; ಬಾಕಿಗೆ ಕಾರಣವೇನು ; (ವಿವರ ಒದಗಿಸುವುದು)

(ಉ) ಸರ್ಕಾರಿ ನೌಕರರ ವೇತನದಿಂದ ಪ್ರತಿ ತಿಂಗಳು ಕಟಾವಣೆಯಾಗುವ ಎನ್‌ಪಿಎಸ್/ಜಿಪಿಎಫ್/ಕೆಜಿಐಡಿ/ಎಲ್‌ಐಸಿ ಮುಂತಾದವುಗಳ ಮೊತ್ತವು ಸಂಬಂಧಿಸಿದ ಉಪ ಶೀರ್ಷಿಕೆಗಳಿಗೆ ಕ್ಲಿಪ್ತವಾಗಿ ಜಮೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವನ್ನು ಸರಿಪಡಿಲಾಗಿದಿಯೇ ; (ವಿವರ ನೀಡುವುದು)

(ಊ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಸಂಬಂಧಿಸಿದ ವಿವಿಧ ಬಡ್ತಿಗಳು ವಾರ್ಷಿಕ ಕಾರ್ಯ ನಿರ್ವಹಣಾ ವರದಿ ಮತ್ತು ಇಲಾಖಾ ವಿಚಾರಣೆ ಮುಂತಾದ ಸೇವಾ ವಿಷಯಗಳನ್ನು ಸಕಾಲ ಕಾಯ್ದೆಯಡಿಯಲ್ಲಿ ತರಲಾಗಿದೆಯೇ ?

## ಪೊಲೀಸ್ ಸ್ಟ್ಯಾಂಪು ವಿತರಣೆ ಕುರಿತು

**ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೯ (೪೮೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಸ್ಟ್ಯಾಂಪ್‌ಗಳನ್ನು ವಿತರಿಸಲಾಗುತ್ತಿದೆಯೆ ; ಈ ಸ್ಟ್ಯಾಂಪು ವಿತರಣೆಯ ಉದ್ದೇಶಗಳೇನು ; ಈ ಕುರಿತಂತೆ ಸರ್ಕಾರದ ನಿಯಮಗಳೇನು ; (ವಿವರ ನೀಡುವುದು)

(ಆ) ಪೊಲೀಸ್ ಧ್ವಜ ದಿನಾಚರಣೆ ಸ್ಟ್ಯಾಂಪ್‌ಗಳನ್ನು ವಿತರಿಸಿ ಪೊಲೀಸ್ ಇಲಾಖೆಯ ಯಾವ ಯಾವ ಹಂತದ ಕಛೇರಿಗಳಿಂದ ಮೊತ್ತವನ್ನು ಸಂಗ್ರಹಿಸಲಾಗುತ್ತಿದೆ ; ಒಂದು ಪೊಲೀಸ್ ಧ್ವಜ ದಿನಾಚರಣೆಯ ಸ್ಟ್ಯಾಂಪಿನ ಮೌಲ್ಯ ಎಷ್ಟು ; ಒಂದೊಂದು ಕಛೇರಿಗೆ ಎಷ್ಟು ಮೌಲ್ಯದ ಪೊಲೀಸ್ ಧ್ವಜ ಸ್ಟ್ಯಾಂಪುಗಳನ್ನು ವಿತರಿಸಲಾಗುತ್ತದೆ ; ಹಾಗೂ ಅದರ ಮೊತ್ತವನ್ನು ಹೇಗೆ ಸಂಗ್ರಹಿಸಲಾಗುತ್ತದೆ ; ನಗದು ಚೆಕ್ ಡಿಡಿ ಇತ್ಯಾದಿ ಪಾವತಿ ವಿಧಾನದ ವಿವರ ನೀಡುವುದು ;

(ಇ) ಸದರಿ ಸ್ಟ್ಯಾಂಪು ವಿತರಣೆಯ ಮೊತ್ತವನ್ನು ಯಾವ ಲೆಕ್ಕಶೀರ್ಷಿಕೆಯ ಖಾತೆಗೆ ಯಾವ ರೀತಿಯಲ್ಲಿ ಪಾವತಿಸಲಾಗುತ್ತಿದೆ ಹಾಗೂ ಇತರ ದಾಖಲೆ ಹಾಗೂ ನಿರ್ವಹಣೆಯನ್ನು ಯಾವ ಹಂತದಲ್ಲಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಪೊಲೀಸ್ ಧ್ವಜ ದಿನಚರಣೆ ಸ್ಟ್ಯಾಂಪು ವಿತರಣೆಯಿಂದ ಸಂಗ್ರಹಿಸಲಾದ ಮೊತ್ತ ಎಷ್ಟು ಹಾಗೂ ಅದನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

(ಉ) ಪೊಲೀಸ್ ಧ್ವಜದ ಸ್ಟ್ಯಾಂಪುಗಳನ್ನು ವಿತರಿಸುವ ಬಗ್ಗೆ ಪೊಲೀಸ್ ಠಾಣೆಯಲ್ಲಿ ಸಾರ್ವಜನಿಕರಿಂದ ದೂರು ಅಥವಾ ತೊಂದರೆ ಉಂಟಾದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರಗಳನ್ನು ನೀಡುವುದು)

## ಆಯವ್ಯಯ ಮತ್ತು ಲೆಕ್ಕಪತ್ರ ನಿಯಮಗಳಿಗೆ ತಿದ್ದುಪಡಿ ಕುರಿತು

**ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೦ (೩೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳ ಸಹಿತ ವಿವಿಧ ಇಲಾಖೆಗಳಲ್ಲಿ ನಿಗಮ ಮಂಡಳಿಗಳಲ್ಲಿ ವಿವಿಧ ಯೋಜನೆಗಳ ಲೆಕ್ಕಪರಿಶೋಧನೆಯಲ್ಲಿ ಆಕ್ಷೇಪಣೆ ಮತ್ತು ವಸೂಲಾತಿ ಪಾರಗಳ ಸಂಖ್ಯೆ ಮತ್ತು ಮೊತ್ತ ಎಷ್ಟು ; ಸದರಿ ಪಾರಗಳನ್ನು ಕಡಿಮೆ ಮಾಡಲು ಮತ್ತು ಅಡ್ ಹಾಕ್ ಸಭೆ ಮೂಲಕ ತೀರುವಳಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಮೂರು ವರ್ಷಗಳ ವಿವರ ನೀಡುವುದು)

(ಆ) ಹೆಚ್ಚಿನ ಆಕ್ಷೇಪಣೆ ಮತ್ತು ವಸೂಲಾತಿ ಪಾರಗಳು ಪ್ರೊಸೀಜರ್ ಲ್ಯಾಪ್ಸ್ ಕಾರಣಕ್ಕಾಗಿ ದಾಖಲಿಸಲಾಗುತ್ತಿದ್ದು, ಹಣ ದುರುಪಯೋಗವಿಲ್ಲದವುಗಳನ್ನು ಆಯಾಯ ವರ್ಷದಲ್ಲೇ ಬಗೆಹರಿಸಹುದಾಗಿದ್ದು, ಈ ಕುರಿತು ಸರ್ಕಾರ ಅಗತ್ಯ ಕ್ರಮವಹಿಸಿದೆಯೇ ; (ಇಲಾಖಾವಾರು ವಿವರ ನೀಡುವುದು)

(ಇ) ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಇಲಾಖೆಗಳು, ಸಹಕಾರಿ ಸಂಸ್ಥೆಗಳು, ಬ್ಯಾಂಕುಗಳು, ಹಣಕಾಸು ಸಂಸ್ಥೆಗಳು, ಸರ್ಕಾರಿ ನಿಗಮಗಳು, ಧಾರ್ಮಿಕ ದತ್ತಿ ಇಲಾಖೆ ಸಂಸ್ಥೆಗಳು ಮತ್ತು ಇತರೆ ಯಾವುದೇ ಲೆಕ್ಕಪರಿಶೋಧನೆ ಒಳಪಡುವ ಸಂಸ್ಥೆಗಳಿಗೆ ಲೆಕ್ಕಪರಿಶೋಧನೆ ಮಾಡುವಾಗ ಲೆಕ್ಕಪರಿಶೊಧನಾ ಸಂಸ್ಥೆಗಳು ಮಾರ್ಗಸೂಚಿಯಾಗಿ ಅನ್ವಯಿಸುವ ಆಯವ್ಯಯ ಮತ್ತು ಲೆಕ್ಕಪತ್ರ, ಹಣಕಾಸು ಖಜಾನೆ ನಿಯಮಗಳು, ಇತ್ಯಾದಿಗಳನ್ನು ಯಾವಾಗ ರಚಿಸಲಾಗಿತ್ತು ; ಇವುಗಳಿಗೆ ತಿದ್ದುಪಡಿಗಳನ್ನು ಯಾವಾಗ ಮಾಡಲಾಗಿದೆ ; ಈ ಅಗತ್ಯಕ್ಕೆ ತಕ್ಕಂತೆ ಬದಲಾಯಿಸದ ಸಂಕೀರ್ಣ ನಿಯಮಗಳೇ ಆಕ್ಷೇಪಣೆ ಮತ್ತು ವಸೂಲಾತಿ ಪಾರಗಳಿಗೆ ಕಾರಣವಾಗಿರುವ ಬಗ್ಗೆ ಸರ್ಕಾರ ಪರಿಶೀಲಿಸಿದೆಯೇ ; (ವಿವರ ನೀಡುವುದು)

(ಈ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಚುನಾವಣಾ ಹಾಗೂ ವಿಪತ್ತು ನಿರ್ವಹಣಾ ಸಂದರ್ಭಗಳಲ್ಲಿ ಚುನಾವಣಾ ಆಯೋಗ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರಗಳು ಸೂಚಿಸಿದ ಬಾಬ್ತುಗಳಿಗೆ ಮಾಡಿದ ವೆಚ್ಚಗಳಿಗೆ ಲೆಕ್ಕಪತ್ರ ಇಲಾಖೆ ಆಕ್ಷೇಪಣೆ ದಾಖಲಿಸುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ವಾರಾಹಿ ನೀರಾವರಿ ಯೋಜನೆಯ ಕುರಿತು

**ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೧ (೩೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾರಾಹಿ ನೀರಾವರಿ ಯೋಜನೆಯಲ್ಲಿ ಭೂ ಸ್ವಾಧೀನ ಅಗತ್ಯವಾದ ಭೂಮಿಯ ವಿಸ್ತೀರ್ಣವೆಷ್ಟು ; ಅವುಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಭಾಮಿಯ ವಿಸ್ತೀರ್ಣವೆಷ್ಟು ; ಭೂ ಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಿದ, ಪೂರ್ಣಗೊಂಡ ಮತ್ತು ವಿವಿಧ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಗ್ರಾಮವಾರು, ಸರ್ವೆ ನಂಬರವಾರು ಮತ್ತು ಹಂತವಾರು ವಿವರವನ್ನು ನೀಡುವುದು)

(ಆ) ವಾರಾಹಿ ನೀರಾವರಿ ಯೋಜನೆಯಲ್ಲಿ ವಾಸ್ತವವಾಗಿ ಈಗ ಎಷ್ಟು ವ್ಯಾಪ್ತಿಯ ಕೃಷಿ ಭೂಮಿಗೆ ನೀರಾವರಿ ಒದಗಿಸಲಾಗಿದೆ ; (ಹಂತವಾರು ಗ್ರಾಮವಾರು ವಿವರ ನೀಡುವುದು) ;

(ಇ) ವಾರಾಹಿ ನೀರಾವರಿ ಯೋಜನೆಯಲ್ಲಿ ಭೂ ಸ್ವಾಧೀನತೆಯನ್ನು ಪಡೆದು ಪರಿಹಾರವನ್ನು ನೀಡಿದ ಪ್ರಕರಣಗಳೆಷ್ಟು ; ನೀಡಲಾದ ಪರಿಹಾರ ಮೊತ್ತವೆಷ್ಟು ; (ಗ್ರಾಮವಾರು ಮತ್ತು ಪ್ರಕರಣವಾರು,

ಪರಿಹಾರ ಮೊತ್ತವಾರು ಮಾಹಿತಿ ನೀಡುವುದು) ;

(ಈ) ಭೂ ಸ್ವಾಧೀನತೆಯನ್ನು ಪಡೆದು ಪರಿಹಾರ ಮೊತ್ತ ಪಾವತಿಸಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಕಾಲದಿಂದ ಈ ಪರಿಹಾರ ಮೊತ್ತವು ಬಾಕಿಯಿರುತ್ತದೆ ; ಪರಿಹಾರ ಮೊತ್ತ ಬಾಕಿ ಪಾವತಿಗೆ ಸರ್ಕಾರದ ಕಾಲಮಿತಿ ಯಾವುದು ; (ಗ್ರಾಮವಾರು ಮತ್ತು ಪ್ರಕರಣವಾರು, ಪರಿಹಾರ ಮೊತ್ತವಾರು ಮಾಹಿತಿ ನೀಡುವುದು) ವಾರಾಹಿ ನೀರಾವರಿ ಯೋಜನೆಗೆ ಈವರೆಗೆ ಸರ್ಕಾರ ಮಾಡಿದ ಒಟ್ಟು ವೆಚ್ಚವೆಷ್ಟು ; (ವಿವರ ನೀಡುವುದು)

(ಉ) ವಾರಾಹಿ ನೀರಾವರಿ ಯೋಜನೆಯಲ್ಲಿ ಭೂ ಸ್ವಾಧೀನತೆಯ ಕುರಿತು ವಿವಿಧ ನ್ಯಾಯಾಲಯದಲ್ಲಿ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಯೋಜನೆಯು ಕುಂಠಿತವಾಗಲು ಇದು ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವುಗಳನ್ನು ಶೀಘ್ರ ವಿಲೇವಾರಿಗಾಗಿ ಸರ್ಕಾರದಿಂದ ಕ್ರಮ ವಹಿಸಲಾಗಿದೆಯೇ ? (ಗ್ರಾಮವಾರು, ಪ್ರಕರಣವಾರು ಮಾಹಿತಿಯನ್ನು ಒದಗಿಸುವುದು)

## ಕರ್ನಾಟಕ ರಾಜ್ಯದಲ್ಲಿ ಅಬಕಾರಿ ಇಲಾಖೆಯ ಕುರಿತು

**ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೨ (೩೯೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಅಬಕಾರಿ ಇಲಾಖೆಯಲ್ಲಿ ಇರುವ ಒಟ್ಟು ಸಿಬ್ಬಂದಿಗಳ ಸಂಖ್ಯೆಯೆಷ್ಟು ; (ತನಿಖಾ ಠಾಣೆ ಸಹಿತ ಜಿಲ್ಲಾವಾರು ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಯ / ಸಿಬ್ಬಂದಿಗಳ ವರ್ಗಾವಣೆಯ ನಿಯಮಗಳು ಯಾವುವು ; ಅಬಕಾರಿ ಇಲಾಖೆಗೆ ತನ್ನದೇ ಆದ ಪ್ರತ್ಯೇಕ ವರ್ಗಾವಣೆ ನಿಯಮಗಳು ಇವೆಯೇ ಅಥವಾ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸಾಮಾನ್ಯ ನಿಯಮಗಳು ಅನ್ವಯಿಸುತ್ತದೆಯೇ ; ಪ್ರಸ್ತುತ ಯಾವ ನಿಯಮಗಳಡಿ ಈ ಇಲಾಖೆಯ ಅಧಿಕಾರಿ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯದ ವಿವಿಧ ಗಡಿ ಪ್ರದೇಶದ ತನಿಖಾ ಠಾಣೆಗಳಲ್ಲಿ ಇರುವ ಸಿಬ್ಬಂದಿಗಳಿಗೆ ಈ ನಿಯಮಗಳು ಅನ್ವಯಿಸುತ್ತವೆಯೇ ; ಈಗಾಗಲೇ ಹಲವು ಚೆಕ್ ಪೋಸ್ಟ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂಧಿಗಳು ಅಧಿಕಾರಿಗಳು ಎಷ್ಟು ಸಮಯದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಅವುಗಳಲ್ಲಿ ಅನೇಕರು ೧೦ ವರ್ಷಕ್ಕಿಂತ ಹೆಚ್ಚು ಒಂದೇ ತನಿಖಾ ಠಾಣೆಗಳಲ್ಲಿ ಮತ್ತು ಒಂದೇ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಹಾಗೂ ಇದು ಇಲಾಖೆಯ ಸೇವೆಯಲ್ಲಿ ಪ್ರಾಮಾಣಿಕತೆಗೆ ತೊಡಕುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಈ ಕುರಿತಂತೆ ಕರ್ನಾಟಕ ರಾಜ್ಯದಲ್ಲಿ ಅಬಕಾರಿ ಇಲಾಖೆಯ ವರ್ಗಾವಣೆ ನಿಯಮಗಳನ್ನು ಸುಧಾರಣೆ ಅಥವಾ ಬದಲಾವಣೆ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 041/400 ಪ್ರತಿಗಳು/15–07–2024